VOLUME: 16 | 01 JULY 2026 | ಬುಧವಾರ | RS: 2 | PAGE: 06 ISSUE: 140 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ಆಲಿಯಾ ಭಟ್ ಅವರು ಸಂಪೂರ್ಣಆಕ್ಷನ್ ಅವತಾರ ತಾಳಿರುವ 'ಆಲ್ಫಾ' ಸಿನಿಮಾ ಜುಲೈ 3ರಂದು ರಿಲೀಸ್ ಆಗಲಿದೆ. ಈ ಸಿನಿಮಾಗೆ ಸೆನ್ಸಾರ್ ಪಕ್ರಿಯೆ ಮುಗಿದಿದ್ದು, ಒಂದಷ್ಟು ಬದಲಾವಣೆಗಳನ್ನು ಸೂಚಿಸಲಾಗಿದೆ. ಹಿಂಸಾತ್ಮಕ ದೃಶ್ಯಗಳ ತೀವ್ರತೆಯನ್ನು ಕಡಿಮೆ ಮಾಡಲು 'ಆಲ್ಫಾ' ಚಿತ್ರತಂಡಕ್ಕೆ ಸೂಚನೆ ನೀಡಲಾಗಿದೆ.




prabhavaa.com

BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ರಾಜ್ಯದಾದ್ಯಂತ ಎಸ್ಐಆರ್ ಆರಂಭ: ಸಿಎಂ ಮನೆಯಿಂದಲೇ ಶುರು

ಬೆಂಗಳೂರು: ಚುನಾವಣಾ ಆಯೋಗದಿಂದ ರಾಜ್ಯಾದ್ಯಂತ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾಗವಹಿಸಿದರು.

ಸದಾಶಿವನಗರದಲ್ಲಿರುವ ತಮ್ಮ ನಿವಾಸದಲ್ಲಿ ಪತ್ನಿಯೊಂದಿಗೆ ಸಿಎಂ ಎಸ್ಐಆರ್ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು. ಈ ವೇಳೆ ರಾಮನಗರ ಜಿಲ್ಲಾಧಿಕಾರಿ, ಕನಕಪುರ ತಹಸೀಲ್ದಾರ್ ಹಾಗೂ ಬಿಎಲ್ಓ ಅಧಿಕಾರಿಗಳು ಪ್ರಕ್ರಿಯೆ ನಡೆಸಿದರು. ಜಿಲ್ಲಾಧಿಕಾರಿಯಿಂದ ಎಸ್ಐಆರ್ ಕುರಿತು ಸಿಎಂ ಮಾಹಿತಿ ಪಡೆದರು.

ಸಿಎಂ ತಮ್ಮ ಮೊಬೈಲ್ ಮೂಲಕ ಆಪ್ ಡೌನ್‌ಲೋಡ್ ಮಾಡಿಕೊಂಡು ಪರಿಶೀಲನೆ ನಡೆಸಿದರು. ಮತದಾರರ ಪಟ್ಟಿಯನ್ನು ಪರಿಶೀಲಿಸಿದ ಅವರು, ತಮ್ಮ ಹಾಗೂ ಪತ್ನಿಯ ಹೆಸರು ಪಟ್ಟಿಯಲ್ಲಿ ಇರುವುದನ್ನು ಗಮನಿಸಿದರು. "ಹೇಗೆ ಲಾಗಿನ್ ಮಾಡಬೇಕು ಹೇಳಿ, ಡೌನ್‌ಲೋಡ್ ಮಾಡಿ" ಎಂದು ಅಧಿಕಾರಿಗಳನ್ನು ಕೇಳಿದರು. ನಂತರ ಅಧಿಕಾರಿಗಳು ಅವರ ಮೊಬೈಲ್‌ನಲ್ಲೇ ಆಪ್ ಡೌನ್‌ಲೋಡ್ ಮಾಡಿ ತೋರಿಸಿದರು.

ಈ ವೇಳೆ ಸಿಎಂ, "ಫೋನ್‌ನಲ್ಲಿ ಆಪ್



ಬಳಸುವುದು ಸ್ವಲ್ಪ ಜನರಿಗೆ ಗೊತ್ತಾಗಬೇಕು. ಸ್ವಲ್ಪ ಗೊಂದಲವಾಗುತ್ತದೆ" ಎಂದು ಹೇಳಿದರು. ನಂತರ ಅಧಿಕಾರಿಗಳು ಫಾರ್ಮ್ 8 ಮೂಲಕ ಮತದಾರರ ವಿವರಗಳಲ್ಲಿ ಬದಲಾವಣೆ ಮಾಡಬಹುದಾದ ಕುರಿತು ಮಾಹಿತಿ ನೀಡಿದರು. ವಯಸ್ಸು, ಫೋನ್ ನಂಬರ್, ಫೋಟೋ ಬದಲಾವಣೆ ಸೇರಿದಂತೆ ತಿದ್ದುಪಡಿಗಳ ಕುರಿತು ವಿವರಿಸಿದರು. ಸಿಎಂ ತಾವೇ ಕೈಯಲ್ಲಿ ಅರ್ಜಿ ಭರ್ತಿ ಮಾಡಿದರು.

ನಂತರ ಮಾತನಾಡಿದ ಅವರು, ಇಂದಿನಿಂದ ಎಸ್ಐಆರ್ ಪ್ರಕ್ರಿಯೆ ಆರಂಭವಾಗಿದೆ. ತಮ್ಮ ಮನೆಯಿಂದಲೇ ಬೆಂಗಳೂರು ದಕ್ಷಿಣ ಜಿಲ್ಲೆಯ ಅಧಿಕಾರಿಗಳು ಪ್ರಕ್ರಿಯೆ ಆರಂಭಿಸಿದ್ದಾರೆ ಎಂದು ಹೇಳಿದರು.

ತಾವು ಅರ್ಜಿ ತುಂಬಿ ಕೊಟ್ಟಿದ್ದಾಗಿ ತಿಳಿಸಿದ ಅವರು, "ಆಪ್ ಬಳಕೆಯಲ್ಲಿ ನಾನು ಅನ್‌ಎಜುಕೇಟೆಡ್. ನನಗೂ ಗೊತ್ತಿರಲಿಲ್ಲ, ಕೇಳಿಕೊಂಡೆ. ಆಪ್‌ನಲ್ಲಿ ಮಾಡುವುದು ಬೇರೆ, ಆದರೆ ಅರ್ಜಿ ತುಂಬಿ ಕೊಡಿ" ಎಂದು ಹೇಳಿದರು.

ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರಿಗೆ ಗ್ಯಾರಂಟಿ ಸೌಲಭ್ಯಗಳ ಪ್ರಶ್ನೆಯೂ ಇದೆ ಎಂದು ಹೇಳಿದ ಅವರು, ಮತದಾರರ ಹಕ್ಕು ಕುರಿತು ಜಾಗೃತಿ ಅಗತ್ಯವಿದೆ ಎಂದು ಹೇಳಿದರು. ಬೇರೆ ರಾಜ್ಯಗಳ ಉದಾಹರಣೆ ನೀಡುತ್ತಾ, ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರಿಗೆ ಗ್ಯಾರಂಟಿ ನೀಡುವ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

ಮನೆಯಲ್ಲಿ ಇಲ್ಲದಿದ್ದರೆ ಹಿರಿಯರು ಅರ್ಜಿ ಭರ್ತಿ ಮಾಡಬಹುದು ಎಂದು ತಿಳಿಸಿದ ಅವರು, 7 ದಿನಗಳಲ್ಲಿ ಎಲ್ಲರಿಗೂ ಫಾರ್ಮ್ ವಿತರಿಸಲಾಗುವುದು ಎಂದು ಹೇಳಿದರು. ಮತದಾನದ ಹಕ್ಕು ಉಳಿಸಿಕೊಳ್ಳುವುದು ಮುಖ್ಯವಾಗಿದ್ದು, ಅಗತ್ಯ ಮಾಹಿತಿಯಾಗಿ ಫೋನ್ ನಂಬರ್ ಹಾಗೂ ಆಧಾರ್ ಕಾರ್ಡ್ ನೀಡಬೇಕು ಎಂದು ಹೇಳಿದರು.

## ಅಗತ್ಯ ಸುರಕ್ಷತಾ ಕ್ರಮಗಳೊಂದಿಗೆ ಸಫಾರಿ ಆರಂಭಿಸಲು ಸೂಚನೆ



ಬೆಂಗಳೂರು: ಅಗತ್ಯ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಬಂಡಿಪುರ ಹಾಗೂ ನಾಗರಹೊಳೆ ರಾಷ್ಟ್ರೀಯ ಉದ್ಯಾನಗಳಲ್ಲಿನ ಸಫಾರಿ ಮತ್ತು ಪರಿಸರ ಪ್ರವಾಸೋದ್ಯಮ ಚಟುವಟಿಕೆಗಳನ್ನು ಪುನರಾರಂಭಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಾಗೆಯೇ ಮೇಕೆದಾಟು ಯೋಜನೆಗೆ ಸಣ್ಣ ಪುಟ್ಟ ನೆಪಗಳನ್ನು ಮುಂದಿಟ್ಟು ಸುಪ್ರೀಂಕೋರ್ಟ್‌ನಲ್ಲಿ ತಕರಾರು ಮಾಡಲು ತಮಿಳುನಾಡು ಪ್ರಯತ್ನಿಸುತ್ತಿದೆ. ಈ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆಗಳು ಇವೆಯಾ ಎಂದು ಪರಿಶೀಲಿಸಿ ಪರಿಣಾಮಕಾರಿಯಾಗಿ ಬಗೆಹರಿಸಲು ಸಿಎಂ ಸೂಚನೆ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಸಭೆಯಲ್ಲಿ ಅವರು ಈ ನಿರ್ದೇಶನ ನೀಡಿದರು.

ಸಭೆಯಲ್ಲಿ ಅಧಿಕಾರಿಗಳು ನೀಡಿದ ಮಾಹಿತಿಯಂತೆ, ಬಂಡಿಪುರ ಮತ್ತು ನಾಗರಹೊಳೆ ಪರಿಸರ ಪ್ರವಾಸೋದ್ಯಮ ಹಾಗೂ ಸಫಾರಿ ಪ್ರದೇಶಗಳಲ್ಲಿ ಹುಲಿಗಳು ಮತ್ತು ಚಿರತೆಗಳ ಸಾಂದ್ರತೆ, ಮಾನವ ವನ್ಯಜೀವಿ ಸಂಘರ್ಷ ಹೆಚ್ಚಿರುವ ಪ್ರದೇಶಗಳಿಗಿಂತ ಅಧಿಕವಾಗಿದೆ.

ಈ ಹಿನ್ನೆಲೆಯಲ್ಲಿ ಪ್ರವಾಸಿಗರ ಸುರಕ್ಷತೆಗೆ ಯಾವುದೇ ಧಕ್ಕೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ಹಾಗೂ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಸಫಾರಿ ಚಟುವಟಿಕೆಗಳನ್ನು ಆರಂಭಿಸುವಂತೆ ಮುಖ್ಯಮಂತ್ರಿ ಸೂಚಿಸಿದರು.

ಸಭೆಯಲ್ಲಿ ಬಿಎಂಐಸಿ ಕಾರಿಡಾರ್ ನಿರ್ಮಾಣದಿಂದ ಆನೆ, ಹುಲಿ ಹಾಗೂ ಚಿರತೆಗಳ ಸಾಂಪ್ರದಾಯಿಕ ಸಂಚಾರ ಮಾರ್ಗಗಳಿಗೆ ಅಡ್ಡಿಯಾಗಿದೆ ಎಂದು ಅಧಿಕಾರಿಗಳು ವಿವರಿಸಿದರು. ಇದರ ಪರಿಣಾಮವಾಗಿ ವನ್ಯಜೀವಿಗಳು ಅರಣ್ಯ ಪ್ರದೇಶಗಳಿಂದ ಹೊರಬಂದು ಚನ್ನಪಟ್ಟಣ ಹಾಗೂ ರಾಮನಗರ ಭಾಗಗಳತ್ತ ಚಲಿಸುತ್ತಿದ್ದು, ಮಾನವ ವನ್ಯಜೀವಿ ಸಂಘರ್ಷ ಹೆಚ್ಚಾಗಲು ಇದೂ ಪ್ರಮುಖ ಕಾರಣವಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಅಧಿಕಾರಿಗಳ ಪ್ರಕಾರ, ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ವೇ ನಿರ್ಮಾಣಕ್ಕೆ ಅನುಮತಿ ನೀಡುವ ಸಂದರ್ಭದಲ್ಲಿ ವನ್ಯಜೀವಿಗಳ ಸುರಕ್ಷಿತ ಸಂಚಾರಕ್ಕಾಗಿ ಅಗತ್ಯ ಅಂಡರ್‌ಪಾಸ್, ಓವರ್‌ಪಾಸ್ ಹಾಗೂ ವನ್ಯಜೀವಿ ಕಾರಿಡಾರ್‌ಗಳನ್ನು ನಿರ್ಮಿಸುವ ಷರತ್ತು ವಿಧಿಸಲಾಗಿತ್ತು. ಆದರೆ ರಸ್ತೆ ನಿರ್ಮಾಣದ ವೇಳೆ ಈ ಷರತ್ತುಗಳನ್ನು ಸಮರ್ಪಕವಾಗಿ ಪಾಲಿಸಲಾಗಿಲ್ಲ ಎಂಬ ವಿಚಾರವನ್ನು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಈ ಗುತ್ತಿಗೆಗೆ ಪಡೆಯುವ ಎಲೆಕ್ಟ್ರಿಕ್ ಬಸ್ ಗಳಿಗೆ ಕಿಲೋಮೀಟರ್ ಆಧಾರದಲ್ಲಿ ಲೆಕ್ಕ ಹಾಕಿ ರಾಜ್ಯ ಸರ್ಕಾರ ಪ್ರತಿ ವರ್ಷ 2850 ರಿಂದ 3000 ಕೋಟಿ ರೂಪಾಯಿ ಹಣವನ್ನು ಇದಕ್ಕಾಗಿ ವ್ಯಯಿಸಬೇಕಾಗಿದೆ. ನಮ್ಮ ರಾಜ್ಯಕ್ಕೆ ಎಲೆಕ್ಟ್ರಿಕ್ ಬಸ್ ಗಳ ಅಗತ್ಯವಿದೆ. ಆದರೆ, ಖರ್ಚು ವೆಚ್ಚಗಳನ್ನು ಅವಲೋಕಿಸಿ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದರು. ಪರಿಸ್ಥಿತಿ ಹೀಗಿರುವಾಗ ಈ ಎಲೆಕ್ಟ್ರಿಕ್ ಬಸ್ ಗಳು ಓಡಲಿ ಬಿಡಲಿ ರಾಜ್ಯ ಸರ್ಕಾರ ದುಡ್ಡು ಕೊಡಲೇಬೇಕೆಂಬ ನಿಬಂಧನೆ ಹಾಕಲಾಗಿದೆ ಎಂದರು.

## 'ಬಸ್ ಓಡಿದರೂ, ಓಡದಿದ್ದರೂ ದುಡ್ಡು ಕೊಡಲು ಸಾಧ್ಯವೇ?'

ಬೆಂಗಳೂರು: ಬಸ್ ಓಡಲಿ, ಬಿಡಲಿ ನಾವು ದುಡ್ಡು ಕೊಡಲು ಸಾಧ್ಯವೇ? ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಖಾರವಾಗಿ ಪ್ರಶ್ನಿಸಿದ್ದಾರೆ.



ಕೇಂದ್ರ ಸರ್ಕಾರದ ಅನುದಾನದ ಎಲೆಕ್ಟ್ರಿಕ್ ಬಸ್ ಗಳ ಗುತ್ತಿಗೆಗೆ ರಾಜ್ಯ ಸರ್ಕಾರ ಅನುಮೋದನೆ ನೀಡುತ್ತಿಲ್ಲ ಎಂಬ ಸಂಸದ ತೇಜಸ್ವಿ ಸೂರ್ಯ ಅವರ ತೀಕ್ಷ್ಣ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿರುವ ಸಾರಿಗೆ ಸಚಿವರು, ಸಾಧಕ-ಬಾಧಕಗಳ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಬೇಕು ಎಂದರು. ಒಟ್ಟು 4500 ಎಲೆಕ್ಟ್ರಿಕ್ ಬಸ್ ಗಳನ್ನು ಎಂಟು ವರ್ಷಗಳ ಅವಧಿಯಲ್ಲಿ ಗುತ್ತಿಗೆ ಪಡೆಯಬೇಕಾಗಿದೆ. ಈ ಬಸ್ ಗಳಿಗೆ ಕೇಂದ್ರ ಸರ್ಕಾರವೇನೂ ಸಂಪೂರ್ಣ ಅನುದಾನ ನೀಡುತ್ತಿಲ್ಲ. ಕೇಂದ್ರ ಸರ್ಕಾರ ಒಂದು ಬಸ್ ಗೆ ಕೇವಲ 30 ರಿಂದ 35 ಲಕ್ಷ ರೂಪಾಯಿಯನ್ನು ಮಾತ್ರ ನೀಡುತ್ತದೆ. ರಾಜ್ಯ ಸರ್ಕಾರ ವಾರ್ಷಿಕ ಕಿಲೋಮೀಟರ್ ಆಧಾರದಲ್ಲಿ ಸುಮಾರು 2850 ರಿಂದ 3000 ಕೋಟಿ ರೂಪಾಯಿ ಹಣವನ್ನು ಬಸ್ ನೀಡುವ ಗುತ್ತಿಗೆದಾರ ಸಂಸ್ಥೆಗೆ ನೀಡಬೇಕಾಗುತ್ತದೆ. ಆದರೆ, ಈ ಅಂಶವನ್ನು ಹೇಳದೇ ತೇಜಸ್ವಿ ಸೂರ್ಯ ಅವರು ಎಲ್ಲವನ್ನೂ ಕೇಂದ್ರ ಸರ್ಕಾರ ನೀಡುತ್ತದೆ ಎಂಬ ರೀತಿಯಲ್ಲಿ ಹೇಳಿಕೆ ನೀಡಿದ ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನ ಮಾಡಿದ್ದಾರೆ ಎಂದು ಅವರು ತಿರುಗೇಟು ನೀಡಿದರು.

ಈ ಗುತ್ತಿಗೆಗೆ ಪಡೆಯುವ ಎಲೆಕ್ಟ್ರಿಕ್ ಬಸ್ ಗಳಿಗೆ ಕಿಲೋಮೀಟರ್ ಆಧಾರದಲ್ಲಿ ಲೆಕ್ಕ ಹಾಕಿ ರಾಜ್ಯ ಸರ್ಕಾರ ಪ್ರತಿ ವರ್ಷ 2850 ರಿಂದ 3000 ಕೋಟಿ ರೂಪಾಯಿ ಹಣವನ್ನು ಇದಕ್ಕಾಗಿ ವ್ಯಯಿಸಬೇಕಾಗಿದೆ. ನಮ್ಮ ರಾಜ್ಯಕ್ಕೆ ಎಲೆಕ್ಟ್ರಿಕ್ ಬಸ್ ಗಳ ಅಗತ್ಯವಿದೆ. ಆದರೆ, ಖರ್ಚು ವೆಚ್ಚಗಳನ್ನು ಅವಲೋಕಿಸಿ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದರು. ಪರಿಸ್ಥಿತಿ ಹೀಗಿರುವಾಗ ಈ ಎಲೆಕ್ಟ್ರಿಕ್ ಬಸ್ ಗಳು ಓಡಲಿ ಬಿಡಲಿ ರಾಜ್ಯ ಸರ್ಕಾರ ದುಡ್ಡು ಕೊಡಲೇಬೇಕೆಂಬ ನಿಬಂಧನೆ ಹಾಕಲಾಗಿದೆ ಎಂದರು.

ಬಿಜೆಪಿ ಸರಕಾರವು ಹೆಚ್ಚಿನ ಅನುದಾನವನ್ನು ಬೆಂಗಳೂರಿಗೆ ನೀಡಿತ್ತು. ಅದಕ್ಕೆ ಹೋಲಿಸಿದರೆ ಕಾಂಗ್ರೆಸ್ಸಿನ ಸರಕಾರದ ಅವಧಿಯಲ್ಲಿ ಕಡಿಮೆ ಅನುದಾನ ನೀಡಿದ್ದಾರೆ. ಸರಕಾರ ತಾರತಮ್ಯ ಮಾಡದೇ ಪ್ರತಿಯೊಂದು ಕ್ಷೇತ್ರಕ್ಕೂ ಸಮಾನವಾಗಿ, ಅವಶ್ಯಕತೆ ಆಧರಿತವಾಗಿ ಅನುದಾನ ಕೊಡಬೇಕು ಎಂದು ಆಗ್ರಹಿಸಿದರು.

## 'ಅನುದಾನ ಹಂಚಿಕೆಯಲ್ಲಿ ತಾರತಮ್ಯ ನಿಲ್ಲಿಸಿ'

ಬೆಂಗಳೂರು: ಕಾಂಗ್ರೆಸ್ ಸರಕಾರವು ಬೆಂಗಳೂರಿನ ಅಭಿವೃದ್ಧಿ ವಿಚಾರದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಅವರು ಟೀಕಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಬೆಂಗಳೂರಿನ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಸಾಕಷ್ಟು ಕೊಟ್ಟಿಲ್ಲ. ಅದರಲ್ಲೂ ತಾರತಮ್ಯ ಮಾಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಶಾಸಕರಿಗೆ ಹೆಚ್ಚು ಹಾಗೂ ಬಿಜೆಪಿ ಶಾಸಕರಿಗೆ ಕಡಿಮೆ ಅನುದಾನ ನೀಡಿದ್ದಾರೆ. ಈ ತಾರತಮ್ಯ ನಿಲ್ಲಬೇಕು ಎಂದು ಒತ್ತಾಯಿಸಿದರು.

ಕಸದ ತೆರಿಗೆ, ಆಸ್ತಿ ತೆರಿಗೆ, ಜಾಹೀರಾತು ಮೂಲಕ ಸಂಗ್ರಹ, ವಿದ್ಯುತ್ ದರ ಹೆಚ್ಚಳ, ಬಿಡಬ್ಲ್ಯುಎಸ್‌ಎಸ್‌ಬಿಯಲ್ಲೂ ಹೆಚ್ಚು ದರ ವಿಧಿಸಿ ಹಣ ಸಂಗ್ರಹಿಸಿದ್ದಾರೆ. ವಿದ್ಯುತ್ ಮೇಲೆ ಐದಾರು ದರ ವಿಧಿಸುತ್ತಿದ್ದಾರೆ ಎಂದು ಗಮನ ಸೆಳೆದರು.

ಬಿಜೆಪಿ ಸರಕಾರವು ಹೆಚ್ಚಿನ ಅನುದಾನವನ್ನು ಬೆಂಗಳೂರಿಗೆ ನೀಡಿತ್ತು. ಅದಕ್ಕೆ ಹೋಲಿಸಿದರೆ ಕಾಂಗ್ರೆಸ್ಸಿನ ಸರಕಾರದ ಅವಧಿಯಲ್ಲಿ ಕಡಿಮೆ ಅನುದಾನ ನೀಡಿದ್ದಾರೆ. ಸರಕಾರ ತಾರತಮ್ಯ ಮಾಡದೇ ಪ್ರತಿಯೊಂದು ಕ್ಷೇತ್ರಕ್ಕೂ ಸಮಾನವಾಗಿ, ಅವಶ್ಯಕತೆ ಆಧರಿತವಾಗಿ ಅನುದಾನ ಕೊಡಬೇಕು




ಎಂದು ಆಗ್ರಹಿಸಿದರು.

ಎಸ್ಐಆರ್‌ಗೆ (ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ) ಸಂಬಂಧಿಸಿ ಸರಕಾರಿ ನೌಕರರನ್ನೇ ಬಿಎಲ್‌ಒಗಳಾಗಿ ನೇಮಿಸಬೇಕಿದೆ. ಆದರೆ, ಇಲ್ಲಿ ಸಾಮಾಜಿಕ ಸಂಘಟನೆಯವರನ್ನು ಬಿಎಲ್‌ಒಗಳಾಗಿ ಮಾಡಿದ್ದಾರೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ಇಲ್ಲಿ ಗೊಂದಲ ಮಾಡಬಾರದು; ಹಸ್ತಕ್ಷೇಪ ಸರಿಯಲ್ಲ. ಕೇವಲ ಸರಕಾರಿ ನೌಕರರನ್ನೇ ಬಿಎಲ್‌ಒಗಳಾಗಿ ನೇಮಿಸಿ ಎಂದು ಒತ್ತಾಯಿಸಿದರು.

ಹಾನಗಲ್‌ನಲ್ಲಿ ಕಾನೂನು ಸುವ್ಯವಸ್ಥೆ ಕುಸಿದ ಕುರಿತ ಪ್ರಶ್ನೆಗೆ ಉತ್ತರಿಸಿ, ಕಾಂಗ್ರೆಸ್ ಸರಕಾರ ಬಂದ ತಕ್ಷಣ ಅಟ್ಟಹಾಸ ಶುರುವಾಗುತ್ತದೆ. ಎಲ್ಲಿ ನೋಡಿದರೂ ಕುಮ್ಮಕ್ಕು. ಪೊಲೀಸ್ ಠಾಣೆಗೆ ಬೆಂಕಿ ಹಾಕಿದರೂ ಮಾಫಿ ಮಾಡುತ್ತಾರೆ ಎಂದು ಟೀಕಿಸಿದರು. ಬಾಂಬ್ ಹಾಕಿದರೂ ಬ್ರದರ್ಸ್ ಧೋರಣೆ ಕಾಂಗ್ರೆಸ್ಸಿನವರದು ಎಂದು ಆರೋಪಿಸಿದರು.

## ಆಸ್ಪತ್ರೆಯಲ್ಲಿ ಸ್ಫೋಟ: ತನಿಖೆಗೆ ಆದೇಶ



ದಾವಣಗೆರೆ: ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿ ಆಕ್ಸಿಜನ್ ಸಿಲಿಂಡರ್ ಸ್ಫೋಟ ಸಂಭವಿಸಿದ ಘಟನೆಗೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆ ತಕ್ಷಣದ ಕ್ರಮ ಕೈಗೊಂಡಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರು ಘಟನೆಯನ್ನು ಗಂಭೀರವಾಗಿ ಪರಿಗಣಿಸಿ, ರಾಜ್ಯಮಟ್ಟದ ಉನ್ನತ ಅಧಿಕಾರಿಗಳೊಂದಿಗೆ ಚರ್ಚಿಸಿದ್ದಾರೆ. ಘಟನೆಯ ನಿಖರ ಕಾರಣಗಳನ್ನು ಪತ್ತೆಹಚ್ಚಲು ಉನ್ನತ ಮಟ್ಟದ ತನಿಖಾ ತಂಡವನ್ನು ರಚಿಸಿ ಕೂಲಂಕುಷವಾಗಿ ಪರಿಶೀಲನೆ ನಡೆಸಲು ಆದೇಶ ನೀಡಿದ್ದಾರೆ.

ಇದಕ್ಕೆ ಜೊತೆಯಾಗಿ ಸ್ಥಳೀಯ ಮಟ್ಟದಲ್ಲಿಯೂ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಪ್ರತ್ಯೇಕ ತನಿಖೆ ನಡೆಸಲು ಸೂಚಿಸಲಾಗಿದೆ. ಎರಡೂ ತನಿಖಾ ವರದಿಗಳನ್ನು ಆಧರಿಸಿ ಇಲಾಖೆಯ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಲಾಗಿದೆ.

ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ ಆಸ್ಪತ್ರೆಯ ಸುರಕ್ಷತಾ ವ್ಯವಸ್ಥೆ, ಆಕ್ಸಿಜನ್ ನಿರ್ವಹಣೆ ಹಾಗೂ ತಾಂತ್ರಿಕ ಮಾನದಂಡಗಳ ಪಾಲನೆ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಇಲಾಖೆ ಮೂಲಗಳು ತಿಳಿಸಿವೆ.

## ಭಾರೀ ಮಳೆ ಮುನ್ಸೂಚನೆ

ಬೆಂಗಳೂರು: ರಾಜ್ಯದ ಕರಾವಳಿ ಹಾಗೂ ಮಲೆನಾಡು ಭಾಗಗಳಲ್ಲಿ ಕಳೆದ ಕೆಲ ದಿನಗಳಿಂದ ನಿರಂತರ ಮಳೆಯಾಗುತ್ತಿದ್ದು, ಮಂಗಳವಾರವೂ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಕರಾವಳಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಿದೆ.

ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಭಾರಿ ಹಾಗೂ ಅತಿ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಮಳೆಯೊಂದಿಗೆ ಗಂಟೆಗೆ 30ರಿಂದ 40 ಕಿ.ಮೀ ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆಯೂ ಇದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ಎಡಬಿಡದೆ ಸುರಿಯುತ್ತಿರುವ ಮಳೆಯಿಂದ ಹಲವು ಕಡೆಗಳಲ್ಲಿ ಪ್ರವಾಹದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಗೋಕರ್ಣ ಮಹಾಬಲೇಶ್ವರ ದೇವಾಲಯದ ಗರ್ಭಗುಡಿಗೂ ನೀರು ನುಗ್ಗಿರುವ ಘಟನೆ ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಜುಲೈ 2ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು, ಸಾರ್ವಜನಿಕರು ಹಾಗೂ ಪ್ರವಾಸಿಗರು ನದಿ ದಡ ಮತ್ತು ಸಮುದ್ರ ತೀರಗಳಿಗೆ ತೆರಳದಂತೆ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ಮನವಿ ಮಾಡಿದ್ದಾರೆ.



ರಾಜ್ಯಕ್ಕೆ ಆಗಮಿಸಿದ ರಾಷ್ಟ್ರಪತಿ ದ್ರೌಪತಿ ಮುರ್ಮು ಅವರನ್ನು ಸಿಎಂ ಡಿ.ಕೆ.ಶಿವಕುಮಾರ್ ಅವರು ಎಚ್‌ಎಎಲ್ ವಿಮಾನನಿಲ್ದಾಣದಲ್ಲಿ ಮಂಗಳವಾರ ಸ್ವಾಗತಿಸಿದರು.

## ಮುಂದಿನ ಮೂರು ವರ್ಷಗಳಲ್ಲಿ ಶೇ.100 ಎಬಿಸಿ ಗುರಿ ಸಾಧಿಸಲು ಕಾರ್ಯಸೂಚಿ ಸಿದ್ಧಪಡಿಸಿ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮುಂದಿನ ಮೂರು ವರ್ಷಗಳಲ್ಲಿ ಶೇ.100 ಎಬಿಸಿ ಕಾರ್ಯ ಪೂರ್ಣಗೊಳಿಸಲು ಸಮಗ್ರ ಕಾರ್ಯಸೂಚಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ರವರು ಹೇಳಿದರು.

ಜಿಬಿಎ ವ್ಯಾಪ್ತಿಯಲ್ಲಿ ಪಶುಸಂಗೋಪನೆ ಹಾಗೂ ನಗರ ಸಸಿ ನೆಡುವುದಕ್ಕೆ ಸಂಬಂಧಿಸಿದಂತೆ ಇಂದು ನಡೆದ ಸಭೆಯ ಬಳಿಕ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದಲ್ಲಿ ಬೀದಿ ನಾಯಿಗಳ ಸಮಸ್ಯೆಯನ್ನು ಕಳೆದ 50 ವರ್ಷಗಳಿಂದ ಪರಿಹರಿಸಲು ಹಲವು ಪ್ರಯತ್ನಗಳು ನಡೆದಿದ್ದರೂ, ಸಮಸ್ಯೆ ನಿರೀಕ್ಷಿತ ಮಟ್ಟದಲ್ಲಿ ನಿಯಂತ್ರಣಕ್ಕೆ ಬಂದಿಲ್ಲ. ನಾಗರಿಕರ ಆತಂಕ ಮತ್ತು ಅಭಿಪ್ರಾಯಗಳಿಗೆ ಸರ್ಕಾರವೂ ಸ್ಪಂದಿಸುತ್ತಿದ್ದು, ಪರಿಣಾಮಕಾರಿ ಪರಿಹಾರ ಕಂಡುಕೊಳ್ಳಲು



ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು. ಬೆಂಗಳೂರು ನಗರದಲ್ಲಿ 2000ನೇ ಸಾಲಿನಿಂದಲೇ ಎಬಿಸಿ ಕಾರ್ಯ ಆರಂಭವಾಗಿದೆ. 2007ರಲ್ಲಿ ಬಿಬಿಎಂಪಿ ರಚನೆಯಾದ ಬಳಿಕ ಇದುವರೆಗೆ ಸುಮಾರು 8.80 ಲಕ್ಷ ನಾಯಿಗಳಿಗೆ ಎಬಿಸಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ. 2019ರ ಸಮೀಕ್ಷೆ ಪ್ರಕಾರ ನಗರದಲ್ಲಿ 3.10 ಲಕ್ಷ ಹಾಗೂ 2023ರ ಅಂದಾಜು ಪ್ರಕಾರ 2.79 ಲಕ್ಷ ಬೀದಿ ನಾಯಿಗಳಿವೆ. 2016ರಿಂದ 2023ರವರೆಗೆ 3.33 ಲಕ್ಷ ನಾಯಿಗಳಿಗೆ ಎಬಿಸಿ ಚಿಕಿತ್ಸೆ ನೀಡಲಾಗಿದೆ. ಆದರೂ, ಬೀದಿ ನಾಯಿಗಳ ಸಂಖ್ಯೆಯಲ್ಲಿ ನಿರೀಕ್ಷಿತ ಇಳಿಕೆ ಕಂಡುಬಂದಿಲ್ಲ. ಇದೇ ರೀತಿಯಲ್ಲಿ ಮುಂದುವರಿದರೆ ಇನ್ನೂ ಹಲವು ವರ್ಷಗಳಾದರೂ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುವುದಿಲ್ಲ.ಕಳೆದ ಐದು ವರ್ಷಗಳಲ್ಲಿ ಎಬಿಸಿ ಶಸ್ತ್ರಚಿಕಿತ್ಸೆಗಾಗಿ ಸುಮಾರು 42 ಕೋಟಿ ರೂ. ವೆಚ್ಚ ಮಾಡಲಾಗಿದೆ. ಸಾರ್ವಜನಿಕರ ತೆರಿಗೆ ಹಣವನ್ನು ವ್ಯಯಿಸುತ್ತಿದ್ದರೂ ನಿರೀಕ್ಷಿತ ಫಲಿತಾಂಶ ದೊರೆತಿಲ್ಲ. ಬೀದಿ ನಾಯಿಗಳಿಂದ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ ಎಂದು ಹೇಳಿದರು. ಪ್ರಸ್ತುತ ವರ್ಷಕ್ಕೆ ಸುಮಾರು 45 ಸಾವಿರ ಬೀದಿ ನಾಯಿಗಳಿಗೆ ಎಬಿಸಿ ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದೆ. ಅಗತ್ಯ ಮೂಲಸೌಕರ್ಯ ಮತ್ತು ಸಂಪನ್ಮೂಲಗಳನ್ನು ಹೆಚ್ಚಿಸಿ ಈ ಸಾಮರ್ಥ್ಯವನ್ನು ದ್ವಿಗುಣಗೊಳಿಸಿ ವರ್ಷಕ್ಕೆ 90 ಸಾವಿರ ನಾಯಿಗಳಿಗೆ ಎಬಿಸಿ ನಡೆಸುವ ಗುರಿ ಹೊಂದಲಾಗಿದೆ. ಈ ರೀತಿಯಾಗಿ ಮೂರು ವರ್ಷಗಳ ಕಾಲ ನಿರಂತರವಾಗಿ ಕಾರ್ಯನಿರ್ವಹಿಸಿ ನಗರದಲ್ಲಿ ಶೇ.100 ಎಬಿಸಿ ಸಾಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
01/07/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸ್ನಾತಕೋತ್ತರ ಪದವಿ; ಸೋನಾ ಸ್ಟಾರ್‌ನಿಂದ ಹೊಸ ಕಾರ್ಯಕ್ರಮ




ಬೆಂಗಳೂರು: ಭಾರತೀಯ ವಿದ್ಯಾರ್ಥಿಗಳಿಗೆ ವಿಶ್ವಮಟ್ಟದ ಉನ್ನತ ಶಿಕ್ಷಣವನ್ನು ಭಾರತದಲ್ಲಿಯೇ ಕೈಗೆಟುಕುವ ವೆಚ್ಚದಲ್ಲಿ ಒದಗಿಸುವ ಉದ್ದೇಶದಿಂದ ಸೋನಾ ವಲ್ಲಿಯಪ್ಪ ಗ್ರೂಪ್‌ನ ಶಿಕ್ಷಣ ಮತ್ತು ಆವಿಷ್ಕಾರ ವಿಭಾಗವಾದ ಸೋನಾ ಸ್ಟಾರ್ ಇನ್ನೊವೇಷನ್ ಪ್ರೈವೇಟ್ ಲಿಮಿಟೆಡ್, ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾ ಸಹಯೋಗದಲ್ಲಿ ಸೋನಾ ಯುಡಬ್ಲ್ಯೂಎ 1+1 ಇಂಟರ್‌ನ್ಯಾಷನಲ್ ಪಾಥ್‌ವೇ ಕಾರ್ಯಕ್ರಮ ಆರಂಭಿಸಿದೆ.

ಬೆಂಗಳೂರಿನ ಸೋನಾ ಟವರ್ಸ್‌ನಲ್ಲಿ ನಡೆದ ಸಮಾರಂಭದಲ್ಲಿ ಸೋನಾ ಸ್ಟಾರ್ ಇನ್ನೊವೇಷನ್ ಅಂಡ್ ಸ್ಕೇಲ್‌ನ ಸಿಇಒ ಹಾಗೂ ಮುಖ್ಯ ಮಾರ್ಗದರ್ಶಿ ತ್ಯಾಗು ವಳ್ಳಿಯಪ್ಪ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾದ ಡೇಟಾ ಸೈನ್ಸ್ ಸ್ನಾತಕೋತ್ತರ ಪದವಿ ಲಭ್ಯವಾಗಲಿದೆ. ಪಠ್ಯಕ್ರಮವನ್ನು ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾ ಅನುಮೋದಿಸಿದ್ದು, ಅದರಲ್ಲಿರುವ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ, ಸೈಬರ್ ಭದ್ರತೆ ಸೇರಿದಂತೆ ವಿವಿಧ ವಿಷಯಗಳನ್ನು ಒಳಗೊಂಡಿದೆ.

ಕಾರ್ಯಕ್ರಮದಡಿ ವಿದ್ಯಾರ್ಥಿಗಳು ಮೊದಲ ವರ್ಷದ ವಿದ್ಯಾಭ್ಯಾಸವನ್ನು ಬೆಂಗಳೂರಿನ ಸ್ಕೇಲ್ (ಸೋನಾ ಸೆಂಟರ್ ಫಾರ್ ಅಡ್ವಾನ್ಸ್ಡ್ ಲರ್ನಿಂಗ್ ಅಂಡ್ ಎಂಟರ್‌ಪ್ರಿನ್ಯೂರ್‌ಶಿಪ್) ಸಂಸ್ಥೆಯಲ್ಲಿ ಪೂರ್ಣಗೊಳಿಸಲಿದ್ದು, ಬಳಿಕ ಎರಡನೇ ವರ್ಷದ ಅಧ್ಯಯನಕ್ಕಾಗಿ ಅಮೆರಿಕದ ಅಲಬಾಮಾ ರಾಜ್ಯದ ಲಿವಿಂಗ್‌ಸ್ಟನ್‌ನಲ್ಲಿರುವ ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾ ಕ್ಯಾಂಪಸ್‌ಗೆ ತೆರಳಲಿದ್ದಾರೆ. ಎರಡೂ ವರ್ಷಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ನಂತರ ವಿದ್ಯಾರ್ಥಿಗಳಿಗೆ ಯುಎಸ್ ಮಾನ್ಯತೆ ಪಡೆದ ಸ್ನಾತಕೋತ್ತರ ಪದವಿ ಪ್ರದಾನ ಮಾಡಲಾಗುತ್ತದೆ.

ಸಾಂಪ್ರದಾಯಿಕ ಎರಡು ವರ್ಷದ ಅಮೆರಿಕದ ಶಿಕ್ಷಣ ವೆಚ್ಚದ ಕೇವಲ ಶೇ.25ರಷ್ಟು ವೆಚ್ಚದಲ್ಲೇ ಈ ಕಾರ್ಯಕ್ರಮವನ್ನು ಪೂರ್ಣಗೊಳಿಸಬಹುದಾಗಿದೆ.

ಎಂದು ಸಂಸ್ಥೆ ತಿಳಿಸಿದೆ.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತ್ಯಾಗು ವಳ್ಳಿಯಪ್ಪ, ಅಮೆರಿಕದ ಪದವಿ ಪಡೆಯಲು ಇದುವರೆಗೆ ಹೆಚ್ಚಿನ ವೆಚ್ಚವೇ ಪ್ರಮುಖ ಅಡ್ಡಿಯಾಗಿತ್ತು. ಈ ಹೊಸ ಸಹಭಾಗಿತ್ವವು ಆರ್ಥಿಕ ಅಡೆತಡೆಗಳನ್ನು ನಿವಾರಿಸಿ, ಭಾರತದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಕಡಿಮೆ ವೆಚ್ಚದಲ್ಲಿ ವಿಶ್ವಮಟ್ಟದ ಶಿಕ್ಷಣದ ಅವಕಾಶ ಕಲ್ಪಿಸುತ್ತದೆ ಎಂದು ಹೇಳಿದರು.

1835ರಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾದ ಅಧ್ಯಾಪಕರಿಂದ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆಯಲಿದ್ದು, ಯುಎಸ್ ಮಾನ್ಯತೆ ಪಡೆದ ಪದವಿಯನ್ನು ಕೈಗೆಟುಕುವ ವೆಚ್ಚದಲ್ಲಿ ಸಂಪಾದಿಸಬಹುದು. ಈ ಸಹಭಾಗಿತ್ವವು ಭಾರತ ಅಮೆರಿಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮಾನದಂಡವನ್ನು ಸ್ಥಾಪಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಸ್ಕೇಲ್‌ನಲ್ಲಿ ಬೋಧಿಸಲಾಗುವ ಪಠ್ಯಕ್ರಮ ಹಾಗೂ ಯೂನಿವರ್ಸಿಟಿ ಆಫ್ ವೆಸ್ಟ್ ಅಲಬಾಮಾ ಕ್ಯಾಂಪಸ್‌ನಲ್ಲಿ ಬೋಧಿಸಲಾಗುವ ನಿಯಮಿತ ಕೋರ್ಸ್‌ಗಳ ನಡುವೆ ಯಾವುದೇ ವ್ಯತ್ಯಾಸ ಅಥವಾ ಶೈಕ್ಷಣಿಕ ಗುಣಮಟ್ಟದಲ್ಲಿ ರಾಜಿ ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.




ಶರ್ವಾಣಿ ಗ್ರೂಪ್‌ನ ಸಂಸ್ಥಾಪಕಿ ಶರ್ವಾಣಿ ಪ್ರಕಾಶ್ ಅವರಿಗೆ ಸಂವಹನ ಮತ್ತು ಮಾಧ್ಯಮ ಸಂಪರ್ಕ ಕ್ಷೇತ್ರದಲ್ಲಿನ ಗಮನಾರ್ಹ ಸಾಧನೆಗಾಗಿ 'ದಿ ಸ್ತ್ರೀ ಲೀಡ್‌ಹರ್ ಅವಾರ್ಡ್ಸ್–2026' ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಜೆಪಿ ನಗರದ ಹೋಟೆಲ್ ಗ್ರೀನ್‌ಪಾರ್ಕ್‌ನಲ್ಲಿ ಭಾನುವಾರ ನಡೆದ ಸಮಾರಂಭದಲ್ಲಿ ಭಾವನಾ ನೇತೃತ್ವದ ಸ್ತ್ರೀ ಸಂಸ್ಥೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಿತು. ಕಾರ್ಪೊರೇಟ್, ಸಾರ್ವಜನಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಐದು ವರ್ಷಗಳಿಗೂ ಹೆಚ್ಚು ಅನುಭವ ಹೊಂದಿರುವ ಶರ್ವಾಣಿ ಪ್ರಕಾಶ್, ಕಂಪನಿಗಳು ಮತ್ತು ಮಾಧ್ಯಮಗಳ ನಡುವಿನ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.



ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು, ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿರುವ ಉಡುಪಿ ಶ್ರೀ ಪುತ್ತಿಗೆ ಮಠಕ್ಕೆ ಭೇಟಿ ನೀಡಿ ಪರಮ ಪೂಜ್ಯ ಶ್ರೀ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದಂಗಳವರ ಆಶೀರ್ವಾದ ಪಡೆದರು. ರಾಜ್ಯದ ಅಭಿವೃದ್ಧಿ, ಜನಕಲ್ಯಾಣ ಹಾಗೂ ಸಮಾಜಮುಖಿ ಕಾರ್ಯಗಳ ಕುರಿತು ಶ್ರೀಗಳು ನೀಡಿದ ಮಾರ್ಗದರ್ಶನ ಅಮೂಲ್ಯವಾಗಿದೆ. ಶ್ರೀಗಳ ಆಶೀರ್ವಾದ ಮತ್ತು ಸಲಹೆಗಳು ಸಾರ್ವಜನಿಕ ಸೇವೆಯಲ್ಲಿ ಇನ್ನಷ್ಟು ಸಮರ್ಪಣಾಭಾವದಿಂದ ಕಾರ್ಯನಿರ್ವಹಿಸಲು ಪ್ರೇರಣೆ ನೀಡಿವೆ. ಈ ಸೌಭಾಗ್ಯಕ್ಕಾಗಿ ಹೃತ್ಪೂರ್ವಕ ಎಂದು ಕೃತಜ್ಞತೆ ಸಲ್ಲಿಸಿದರು.

# ವಿಮಾ ವಂಚನೆ ಜಾಲ ಬಯಲು; ಒಂಬತ್ತು ಮಂದಿಯ ವಿರುದ್ಧ ಎಫ್‌ಐಆರ್

ಬೆಂಗಳೂರು

ಕರ್ನಾಟಕದಲ್ಲಿ ನಡೆದಿದೆ ಎನ್ನಲಾದ ಸಂಘಟಿತ ಮೋಟಾರ್ ವಿಮಾ ವಂಚನೆ ಜಾಲವನ್ನು ಪತ್ತೆಹಚ್ಚಿರುವುದಾಗಿ ಐಸಿಐಸಿಐ ಲೊಂಬಾರ್ಡ್ ಜನರಲ್ ಇನ್ಶೂರೆನ್ಸ್ ತಿಳಿಸಿದೆ. ಕುಣಿಗಲ್ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ ಬಳಿಕ, ತುಮಕೂರು ಜಿಲ್ಲೆಯ ಹುಲಿಯೂರುದುರ್ಗ ಪೊಲೀಸ್ ಠಾಣೆಯಲ್ಲಿ ಒಂಬತ್ತು ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ವಾಹನ ಅಪಘಾತ ಪರಿಹಾರಕ್ಕೆ ಸಂಬಂಧಿಸಿದ ವಂಚನಾತ್ಮಕ ದಾವೆಗಳಲ್ಲಿ ಆರೋಪಿಗಳು ಭಾಗಿಯಾಗಿದ್ದರು ಎನ್ನಲಾಗಿದೆ. ಐಸಿಐಸಿಐ ಲೊಂಬಾರ್ಡ್ ನಡೆಸಿದ ತನಿಖೆಯಲ್ಲಿ ಅಪಘಾತದ ವಿವರಗಳನ್ನು ಕೃತಕವಾಗಿ ಸೃಷ್ಟಿಸುವುದು, ವಿಮೆ ಹೊಂದಿರುವ ವಾಹನಗಳನ್ನು ಉದ್ದೇಶಪೂರ್ವಕವಾಗಿ ದಾವೆಗಳಲ್ಲಿ ಸೇರಿಸುವುದು ಹಾಗೂ ಒಂದೇ ವ್ಯಕ್ತಿಗಳನ್ನು ವಿವಿಧ ಪ್ರಕರಣಗಳಲ್ಲಿ ಪ್ರತ್ಯಕ್ಷದರ್ಶಿಗಳು, ದಾವೆದಾರರು ಮತ್ತು ಆರೋಪಿಗಳಾಗಿ ಪುನರಾವರ್ತಿತವಾಗಿ ಬಳಸಿರುವ ಅಂಶಗಳು ಬೆಳಕಿಗೆ ಬಂದಿವೆ. ವಿಮಾ ಪರಿಹಾರ ಪಡೆಯುವ ಉದ್ದೇಶದಿಂದ ಖಾಸಗಿ ವ್ಯಕ್ತಿಗಳ ನಡುವೆ ಸಂಭಾವ್ಯ ಕೈಜೋಡಿಸುವಿಕೆ ಹಾಗೂ ಕಾನೂನು ಪ್ರಕ್ರಿಯೆಗಳ ದುರುಪಯೋಗ ನಡೆದಿರಬಹುದೆಂಬ ಅನುಮಾನವೂ ವ್ಯಕ್ತವಾಗಿದೆ.

ಕಂಪನಿಯ ಆಂತರಿಕ ಪರಿಶೀಲನೆ ಹಾಗೂ ಸ್ಥಳ ತನಿಖೆಯಲ್ಲಿ ಒಂದೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಮೂರು ಮೋಟಾರ್ ವಾಹನ ಪರಿಹಾರ ದಾವೆಗಳನ್ನು ಪರಿಶೀಲಿಸಲಾಗಿದೆ. ಅವುಗಳಲ್ಲಿ ಎರಡು ಗಾಯದ ಪ್ರಕರಣಗಳು ಹಾಗೂ ಒಂದು ಮರಣ ಪರಿಹಾರ ಪ್ರಕರಣ ಸೇರಿದ್ದು, ಕ್ರಮವಾಗಿ ರೂ.10 ಲಕ್ಷ, ರೂ.20 ಲಕ್ಷ ಮತ್ತು ರೂ.1 ಕೋಟಿ ಪರಿಹಾರ ಕೋರಲಾಗಿತ್ತು.

ತನಿಖೆಯಲ್ಲಿ ಒಂದೇ ಗುಂಪಿನ ವ್ಯಕ್ತಿಗಳು ವಿವಿಧ ಪ್ರಕರಣಗಳಲ್ಲಿ ಪರಸ್ಪರ ಪಾತ್ರಗಳನ್ನು ಬದಲಾಯಿಸಿಕೊಂಡಿರುವುದು, ಸಾಮಾನ್ಯ ಪ್ರತಿನಿಧಿತ್ವ ಕಂಡುಬಂದಿರುವುದು ಹಾಗೂ ದಾವೆಗಳಲ್ಲಿ ಭಾಗಿಯಾಗಿದ್ದವರ ನಡುವೆ ಪುನರಾವರ್ತಿತ ಸಂಪರ್ಕಗಳಿರುವುದು ಸೇರಿದಂತೆ ಹಲವು ಸಾಮ್ಯತೆಗಳು ಪತ್ತೆಯಾಗಿವೆ. ಮಾಹಿತಿ ವಿಶ್ಲೇಷಣೆ, ಸ್ಥಳ ಪರಿಶೀಲನೆ ಹಾಗೂ ಸಂಗ್ರಹಿಸಿದ ಸಾಕ್ಷ್ಯಾಧಾರಗಳ ಆಧಾರದ ಮೇಲೆ ತನಿಖೆ ನಡೆಸಲಾಗಿದೆ.

ಪ್ರಾಥಮಿಕ ಮಾಹಿತಿಗಳ ಪ್ರಕಾರ, ಅಪಘಾತಗಳಲ್ಲಿ ವಾಸ್ತವವಾಗಿ ಭಾಗಿಯಾಗಿರದ ವಿಮೆ ಹೊಂದಿದ ವಾಹನಗಳನ್ನು ದಾವೆಗಳಲ್ಲಿ ಬಳಸಿರುವುದು ಹಾಗೂ ಸ್ಥಳದಲ್ಲೇ ಇರದ ವ್ಯಕ್ತಿಗಳನ್ನು ಸಾಕ್ಷಿದಾರರಾಗಿ ತೋರಿಸಿರುವುದಾಗಿ ಆರೋಪಿಸಲಾಗಿದೆ.

ಇದಲ್ಲದೆ, ಹಣಕಾಸು ಲಾಭಕ್ಕಾಗಿ ವಾಹನಗಳನ್ನು ಒದಗಿಸುವುದು ಹಾಗೂ ಸಾಕ್ಷಿದಾರರಾಗಿ ಭಾಗವಹಿಸುವುದಕ್ಕೆ ಸಂಬಂಧಿಸಿದ ಆರೋಪಿತ ಒಪ್ಪಿಗೆ ಹೇಳಿಕೆಗಳಿರುವ ಆಡಿಯೋ ಮತ್ತು ವೀಡಿಯೋ ಸಾಕ್ಷ್ಯಗಳನ್ನೂ ಕಂಪನಿ ಸಂಗ್ರಹಿಸಿರುವುದಾಗಿ ತಿಳಿಸಿದೆ. ಪ್ರಕರಣದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ನವ ಮಂಗಳೂರು ಬಂದರಿಗೆ ಕೇಂದ್ರದ ಮತ್ತಷ್ಟು ಬಲ

ಮಂಗಳೂರು

ನವ ಮಂಗಳೂರು ಬಂದರನ್ನು ದೇಶದ ಪ್ರಮುಖ ಸಮುದ್ರ ವ್ಯಾಪಾರ ಹಾಗೂ ಲಾಜಿಸ್ಟಿಕ್ಸ್ ಕೇಂದ್ರವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರೂ.105 ಕೋಟಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದೆ.

ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವಾಲಯದ ಕಾರ್ಯದರ್ಶಿ ವಿಜಯ್ ಕುಮಾರ್, ಐಎಎಸ್ ಅವರು ಮಂಗಳವಾರ ನವ ಮಂಗಳೂರು ಬಂದರು ಪ್ರಾಧಿಕಾರಕ್ಕೆ ಭೇಟಿ ನೀಡಿ ವಿವಿಧ ಯೋಜನೆಗಳಿಗೆ ಚಾಲನೆ ನೀಡಿದ ಬಳಿಕ ಬಂದರಿನ ಕಾರ್ಯಾಚರಣೆ, ಸರಕು ನಿರ್ವಹಣೆ, ಯಾಂತ್ರೀಕರಣ, ಮೂಲಸೌಕರ್ಯ ಹಾಗೂ ವಿಸ್ತರಣಾ ಕಾಮಗಾರಿಗಳ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಮಗ್ರ ಪರಿಶೀಲನೆ ನಡೆಸಿದರು.



ಕರ್ನಾಟಕದಲ್ಲಿ ಕರಾವಳಿ ಸಾಗಣೆ ಹಾಗೂ ಒಳನಾಡು ಜಲಮಾರ್ಗಗಳ ಮೂಲಕ ಸರಕು ಸಾಗಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದ ಅವರು, ಗುರುಪುರ ಹಾಗೂ ನೇತ್ರಾವತಿ ನದಿಗಳ ಮೂಲಕ ಸರಕು ಸಾಗಣೆಯ ಸಾಧ್ಯತೆಗಳ ಕುರಿತು ಸಮಗ್ರ ಅಧ್ಯಯನ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಮೃತ್ ಕಾಲ್–2047 ಗುರಿ ಸಾಧನೆಗೆ ಸಮುದ್ರ ಮೂಲಸೌಕರ್ಯ ಅಭಿವೃದ್ಧಿ, ಉಪಗ್ರಹ ಬಂದರುಗಳ ನಿರ್ಮಾಣ ಹಾಗೂ ರಸ್ತೆ–ರೈಲು ಸಂಪರ್ಕ ಬಲಪಡಿಸುವುದು ಅಗತ್ಯವಾಗಿದೆ ಎಂದು ಅವರು ತಿಳಿಸಿದರು. ಈ ನಿಟ್ಟಿನಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಭಾರತೀಯ ರೈಲ್ವೆಯೊಂದಿಗೆ ಸಮನ್ವಯ ಸಾಧಿಸಿ ಬಂದರು ಸಂಪರ್ಕವನ್ನು ಇನ್ನಷ್ಟು ಸುಧಾರಿಸಲಾ ಗುವುದು ಎಂದರು.

ಈ ಸಂದರ್ಭದಲ್ಲಿ ಎಂಡಿಎಲ್ ಯಾರ್ಡ್ ರಸ್ತೆ ಜಾಲ, ತಣ್ಣೀರುಭಾವಿ ಟ್ರಕ್ ಪಾರ್ಕಿಂಗ್, ಬೈಕಂಪಾಡಿ ಟ್ರಕ್ ಪಾರ್ಕಿಂಗ್ ಟರ್ಮಿನಲ್ ಹಾಗೂ ರಾಷ್ಟ್ರೀಯ ಹೆದ್ದಾರಿ–66 ಅನ್ನು ಬೈಕಂಪಾಡಿಗೆ ಸಂಪರ್ಕಿಸುವ ಪಿಕ್ಯೂಸಿ ರಸ್ತೆಯನ್ನು ರಾಷ್ಟ್ರಕ್ಕೆ ಸಮರ್ಪಿಸಲಾಯಿತು.

ಜೊತೆಗೆ ವಾರ್ಫ್ ಒಳಭಾಗದಲ್ಲಿ ನಿರ್ಮಾಣವಾಗಲಿರುವ ಕವರ್ಡ್ ಸ್ಟೋರೇಜ್ ಶೆಡ್ ಹಾಗೂ ಪಣಂಬೂರು ಬೀಚ್ ರಸ್ತೆ ಸುಂದರೀಕರಣ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ನವ ಮಂಗಳೂರು ಬಂದರು ಪ್ರಾಧಿಕಾರದ ಅಧ್ಯಕ್ಷ ಸುಶೀಲ್ ಕುಮಾರ್ ಸಿಂಗ್, ಉಪಾಧ್ಯಕ್ಷೆ ಎಸ್. ಶಾಂತಿ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಜಯಪುರಕ್ಕೆ ವಂದೇ ಭಾರತ್ ಸ್ಲೀಪರ್ ರೈಲು

ಕಿತ್ತೂರು ಕರ್ನಾಟಕ ಭಾಗದ ವಿಜಯಪುರಕ್ಕೆ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಆರಂಭಿಸಬೇಕು ಎನ್ನುವ ಸಚಿವ ಎಂ.ಬಿ.ಪಾಟೀಲ ಅವರ ಬೇಡಿಕೆಗೆ ಸ್ಪಂದಿಸಿದ ಸೋಮಣ್ಣ ಅವರು ಇನ್ನು 3–4 ತಿಂಗಳಲ್ಲಿ ಅದು ನನಸಾಗಲಿದೆ ಎಂದು ಘೋಷಿಸಿದರು.

ವಂದೇ ಭಾರತ್ ರೈಲಿಗೆ ಬದಲಾಗಿ ಸ್ಲೀಪರ್ ರೈಲು ಓಡಿಸಲಾಗುವುದು. ಈ ಕುರಿತು ಸದ್ಯದಲ್ಲೇ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು. ಅಲ್ಲದೆ, ಬೆಂಗಳೂರು–ವಿಜಯಪುರ ನಡುವೆ ವಾರಕ್ಕೆ ಎರಡು ಸಲ ಸಂಚರಿಸುತ್ತಿರುವ ವಿಶೇಷ ರೈಲನ್ನು ಕಾಯಂ ಮಾಡಲಾಗುವುದು. ಜತೆಗೆ ಇಲ್ಲಿರುವ ಸಣ್ಣಪುಟ್ಟ ತೊಂದರೆಗಳನ್ನು ನಿವಾರಿಸಲಾಗುವುದು.

ಅಲ್ಲದೆ ಐಟಿ ರಾಜಧಾನಿ ಬೆಂಗಳೂರು ಮತ್ತು ಆರ್ಥಿಕ ರಾಜಧಾನಿ ಮುಂಬಯಿಯನ್ನು ಬೆಸೆಯಲು ಬೆಂಗಳೂರು–ಪುಣೆ ಮಧ್ಯೆ ಹೈಸ್ಪೀಡ್ ರೈಲು ಆರಂಭಿಸಬೇಕು ಎನ್ನುವ ಬೇಡಿಕೆ ಸೂಕ್ತವಾಗಿದೆ. ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಪ್ರಯತ್ನ ನಡೆಸಲಾಗುವುದು ಎಂದು ಸೋಮಣ್ಣ ತಿಳಿಸಿದರು. ವಂದೇ ಭಾರತ್ ರೈಲಿಗೆ ಬದಲಾಗಿ ಸ್ಲೀಪರ್ ರೈಲು ಓಡಿಸಲಾಗುವುದು. ಈ ಕುರಿತು ಸದ್ಯದಲ್ಲೇ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು. ಅಲ್ಲದೆ, ಬೆಂಗಳೂರು– ವಿಜಯಪುರ ನಡುವೆ ವಾರಕ್ಕೆ ಎರಡು ಸಲ ಸಂಚರಿಸುತ್ತಿರುವ ವಿಶೇಷ ರೈಲನ್ನು ಕಾಯಂ ಮಾಡಲಾಗುವುದು. ಜತೆಗೆ ಇಲ್ಲಿರುವ ಸಣ್ಣಪುಟ್ಟ ತೊಂದರೆಗಳನ್ನು ನಿವಾರಿಸಲಾಗುವುದು. ಅಲ್ಲದೆ ಐಟಿ ರಾಜಧಾನಿ ಬೆಂಗಳೂರು ಮತ್ತು ಆರ್ಥಿಕ ರಾಜಧಾನಿ ಮುಂಬಯಿಯನ್ನು ಬೆಸೆಯಲು ಬೆಂಗಳೂರು–ಪುಣೆ ಮಧ್ಯೆ ಹೈಸ್ಪೀಡ್ ರೈಲು ಆರಂಭಿಸಬೇಕು ಎನ್ನುವ ಬೇಡಿಕೆ ಸೂಕ್ತವಾಗಿದೆ.

# ಮತದಾರರ ಪಟ್ಟಿ ಪರಿಷ್ಕರಣೆ: ಸಾರ್ವಜನಿಕರ ಸಹಕಾರಕ್ಕೆ ಮನವಿ



ಬೆಂಗಳೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ 2026ರ ಅಂಗವಾಗಿ ಜೂನ್ 30ರಿಂದ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ–ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದು, ಈ ಪ್ರಕ್ರಿಯೆಗೆ ಸಾರ್ವಜನಿಕರು ಅಗತ್ಯ ದಾಖಲೆಗಳೊಂದಿಗೆ ಸಹಕರಿಸುವಂತೆ ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮನವಿ ಮಾಡಿದ್ದಾರೆ.

ಜಿಬಿಎ ಕೇಂದ್ರ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮನೆ–ಮನೆ ಭೇಟಿ ವೇಳೆ ನಿವಾಸಿಗಳು ಲಭ್ಯವಿಲ್ಲದಿದ್ದರೆ ಬಿಎಲ್‌ಒಗಳು ಇನ್ನೆರಡು ಬಾರಿ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ. ಯಾವುದೇ ಮನೆ ಸಮೀಕ್ಷೆಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಪೂರ್ವಭಾವಿ ಕಾರ್ಯವಾಗಿ 2002ರ ಮತದಾರರ ಪಟ್ಟಿಯನ್ನು 2025ರ ಪಟ್ಟಿಯೊಂದಿಗೆ ಮ್ಯಾಪಿಂಗ್ ಮಾಡುವ ಕಾರ್ಯದಲ್ಲಿ ಇದುವರೆಗೆ ಶೇ. 76.32ರಷ್ಟು ಪ್ರಗತಿ ಸಾಧಿಸಲಾಗಿದೆ. ಒಟ್ಟು 1,03,88,363 ಮತದಾರರ ಪೈಕಿ 79,27,902 ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದ್ದು, 24,60,461 ಮತದಾರರ ಮ್ಯಾಪಿಂಗ್ ಇನ್ನೂ ಬಾಕಿಯಿದೆ. ಉಳಿದ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಅವರು ಹೇಳಿದರು.

ಬಿಎಲ್‌ಒಗಳು ಬೆಳಗ್ಗೆ ಮನೆಗಳಿಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಲಿದ್ದು, ಸಂಜೆ ವೇಳೆಗೆ ಭರ್ತಿ ಮಾಡಿದ ನಮೂನೆಗಳನ್ನು ಸಂಗ್ರಹಿಸಿ ಡಿಜಿಟಲ್ ರೂಪದಲ್ಲಿ ಆನ್‌ಲೈನ್‌ಗೆ ಅಪ್‌ಲೋಡ್ ಮಾಡಲಿದ್ದಾರೆ. ಮತದಾರರು ಅಗತ್ಯವಿದ್ದಲ್ಲಿ ತಮ್ಮ ಇತ್ತೀಚಿನ ಭಾವಚಿತ್ರವನ್ನು ಕೂಡ ಸಲ್ಲಿಸಬಹುದಾಗಿದೆ.

ಗಣತಿ ನಮೂನೆಗಳನ್ನು ಮತದಾರರ ಸಹಾಯ ಕೇಂದ್ರಗಳು ಹಾಗೂ ರಜಾದಿನಗಳಲ್ಲಿ ಮತಗಟ್ಟೆಗಳಲ್ಲಿಯೂ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಗಣತಿ ನಮೂನೆ ಭರ್ತಿ ಮಾಡುವ ವೇಳೆ ಅಥವಾ ಮತದಾರರ ನೋಂದಣಿಗೆ ಸಂಬಂಧಿಸಿದ ಗೊಂದಲಗಳನ್ನು ನಿವಾರಿಸಲು ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಗಳಲ್ಲಿ 2,855 ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮಹೇಶ್ವರ್ ರಾವ್ ಮನವಿ ಮಾಡಿದರು. ಜಿಲ್ಲೆಯಲ್ಲಿ 28 ಮತದಾರರ ನೋಂದಣಾಧಿಕಾರಿಗಳು, 75 ಸಹಾಯಕ ಮತದಾರರ ನೋಂದಣಾಧಿಕಾರಿಗಳು, 905 ಬಿಎಲ್‌ಒ ಮೇಲ್ವಿಚಾರಕರು ಹಾಗೂ 8,972 ಬಿಎಲ್‌ಒಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

# ಡಿಜಿಟಲ್ ಗ್ರಾಹಕ ಹಣಕಾಸು ವೇದಿಕೆ ಫೈಬ್‌ನಿಂದ ಐಪಿಓಗೆ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಕೆ

ಬೆಂಗಳೂರು: ಡಿಜಿಟಲ್ ಗ್ರಾಹಕ ಹಣಕಾಸು ವೇದಿಕೆಯಾದ ಫೈಬ್ ಬ್ರಾಂಡ್‌ನಡಿ ಕಾರ್ಯನಿರ್ವಹಿಸುವ ಸೋಷಿಯಲ್ ವರ್ತ್ ಟೆಕ್ನಾಲಜೀಸ್ ಲಿಮಿಟೆಡ್ ತನ್ನ ಪ್ರಸ್ತಾವಿತ ಆರಂಭಿಕ ಸಾರ್ವಜನಿಕ ಷೇರು ಮಾರಾಟ (ಐಪಿಓ)ಕ್ಕಾಗಿ ಭಾರತೀಯ ಷೇರುಪೇಟೆ ನಿಯಂತ್ರಣ ಮಂಡಳಿ (ಸೆಬಿ)ಗೆ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಎಚ್‌ಪಿ) ಸಲ್ಲಿಸಿದೆ.

ಫೈಬ್ ಸಂಸ್ಥೆಯು ಬಳಕೆ, ಶಿಕ್ಷಣ, ವಿಮೆ ಹಾಗೂ ಆರೋಗ್ಯ ರಕ್ಷಣೆಯಂತಹ ವಿವಿಧ ಹಣಕಾಸಿನ ಅಗತ್ಯಗಳಿಗೆ ಕೈಗೆಟುಕುವ ದರದಲ್ಲಿ ತ್ವರಿತ ಸಾಲ ಸೌಲಭ್ಯಗಳನ್ನು ಒದಗಿಸುತ್ತಿದೆ.

ಸಂಸ್ಥೆಯ ಕಾರ್ಯಾಚರಣೆಯಲ್ಲಿ ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಹಾಗೂ ದತ್ತಾಂಶ ವಿಜ್ಞಾನ ತಂತ್ರಜ್ಞಾನಗಳನ್ನು ಬಳಸಿಕೊಂಡು ಗ್ರಾಹಕರ ನೋಂದಣಿ, ಅಪಾಯ ನಿರ್ವಹಣೆ, ಸಾಲ ಅರ್ಹತೆ ನಿರ್ಧಾರ, ವಂಚನೆ ತಡೆ ಹಾಗೂ ಸಾಲ ವಸೂಲಾತಿ ಸೇರಿದಂತೆ ವಿವಿಧ ಪ್ರಕ್ರಿಯೆಗಳನ್ನು ನಿರ್ವಹಿಸಲಾಗುತ್ತಿದೆ.

2021ರಿಂದ ತಂತ್ರಜ್ಞಾನದ ನೆರವಿನಿಂದ ಸಂಸ್ಥೆಯು ತನ್ನ ಉತ್ಪನ್ನಗಳ ವ್ಯಾಪ್ತಿಯನ್ನು ವೈಯಕ್ತಿಕ ಸಾಲಗಳಿಂದ ಉದ್ದೇಶ ಆಧಾರಿತ ಹಣಕಾಸು ಸೇವೆಗಳವರೆಗೆ ವಿಸ್ತರಿಸಿದೆ.

ಪ್ರಸ್ತಾವಿತ ಐಪಿಓದಲ್ಲಿ ರೂ.750 ಕೋಟಿವರೆಗಿನ ಹೊಸ ಈಕ್ವಿಟಿ ಷೇರುಗಳ ವಿತರಣೆ ಹಾಗೂ ಮಾರಾಟಗಾರ ಷೇರುದಾರರಿಂದ 4,00,71,200 ಈಕ್ವಿಟಿ ಷೇರುಗಳ ಮಾರಾಟ ಪ್ರಸ್ತಾವ (ಆಫರ್ ಫಾರ್ ಸೇಲ್) ಒಳಗೊಂಡಿದೆ. ಪ್ರತಿ ಈಕ್ವಿಟಿ ಷೇರಿನ ಮುಖಬೆಲೆ ರೂ.5 ಆಗಿದೆ.

ಐಪಿಓ ಮೂಲಕ ಸಂಗ್ರಹವಾಗುವ ನಿವ್ವಳ ಮೊತ್ತವನ್ನು ಕಂಪನಿಯ ಪ್ರಮುಖ ಅಂಗಸಂಸ್ಥೆಯಾದ ಇಎಸ್‌ಪಿಎಲ್‌ನ ಬಂಡವಾಳವನ್ನು ಬಲಪಡಿಸಲು, ಭವಿಷ್ಯದ ಸಾಲದ ಅವಶ್ಯಕತೆಗಳನ್ನು ಪೂರೈಸಲು ಹಾಗೂ ಸಾಮಾನ್ಯ ಸಾಂಸ್ಥಿಕ ಉದ್ದೇಶಗಳಿಗೆ ಬಳಸಲಾಗುವುದು ಎಂದು ಸಂಸ್ಥೆ ತಿಳಿಸಿದೆ.

ಕಂಪನಿಯ ತಂತ್ರಜ್ಞಾನ ಆಧಾರಿತ ಕಾರ್ಯವೈಖರಿ ಹಾಗೂ ಉದ್ದೇಶಿತ ಹಣಕಾಸು ಸೇವೆಗಳ ವಿಸ್ತರಣೆಯ ಪರಿಣಾಮವಾಗಿ, ನಿರ್ವಹಣೆಯಲ್ಲಿರುವ ಒಟ್ಟು ಆಸ್ತಿ ಮೌಲ್ಯ (ಎಯುಎಂ) ಮಾರ್ಚ್ 31, 2024ರ ವೇಳೆಗೆ ಇದ್ದ ರೂ.4,064.15 ಕೋಟಿಯಿಂದ ವಾರ್ಷಿಕ ಶೇ.45.49ರ ಸಂಯೋಜಿತ ಬೆಳವಣಿಗೆ ದರದೊಂದಿಗೆ ಮಾರ್ಚ್ 31, 2026ರ ವೇಳೆಗೆ ರೂ.8,602.73 ಕೋಟಿಗೆ ಏರಿಕೆಯಾಗಿದೆ.

ಅದೇ ರೀತಿ, ಕಂಪನಿಯ ಲಾಭವು ಹಣಕಾಸು ವರ್ಷ 2024ರಲ್ಲಿ ರೂ.101.24 ಕೋಟಿಯಿಂದ ಹಣಕಾಸು ವರ್ಷ 2026ರಲ್ಲಿ ರೂ.257.46 ಕೋಟಿಗೆ ಏರಿಕೆಯಾಗಿದೆ.

# ಜೆಡಿಎಸ್ ಕಾರ್ಯಕರ್ತರ ಬಂಧನ ಖಂಡನೀಯ: ನಿಖಿಲ್ ಕುಮಾರಸ್ವಾಮಿ

ಚಿಕ್ಕಬಳ್ಳಾಪುರ

ಕೆಂಪೇಗೌಡ ಜಯಂತಿ ಕಾರ್ಯಕ್ರಮದ ವೇಳೆ ನಡೆದ ಗಲಾಟೆ ಪ್ರಕರಣದಲ್ಲಿ ಜೆಡಿಎಸ್ ಕಾರ್ಯಕರ್ತರ ಬಂಧನ ಖಂಡನೀಯವಾಗಿದ್ದು, ಕಾರ್ಯಕ್ರಮದಲ್ಲಿ ಪ್ರಚೋದನಕಾರಿ ಹೇಳಿಕೆ ನೀಡಿದವರ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದರು.

ಚಿಕ್ಕಬಳ್ಳಾಪುರದ ಅಣಕನೂರು ಉಪ ಕಾರಾಗೃಹದ ಬಳಿ ಬಂಧಿತ ಕಾರ್ಯಕರ್ತರನ್ನು ಭೇಟಿ ಮಾಡಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಚಪ್ಪಲಿ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ 9 ಮಂದಿ ಜೆಡಿಎಸ್ ಕಾರ್ಯಕರ್ತರನ್ನು ಬಂಧಿಸಿರುವ ಕ್ರಮ ಏಕಪಕ್ಷೀಯವಾಗಿದೆ ಎಂದು ಆರೋಪಿಸಿದರು.




ಕಾರ್ಯಕ್ರಮ ನಡೆಯುವ ವೇಳೆ ಪೊಲೀಸರು ಹಾಗೂ ಜಿಲ್ಲಾಡಳಿತ ಏನು ಮಾಡುತ್ತಿತ್ತು ಎಂಬ ಪ್ರಶ್ನೆ ಉದ್ಭವವಾಗಿದೆ. ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯದೆ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಚಿಕ್ಕಬಳ್ಳಾಪುರದಲ್ಲಿ ಟಾರ್ಗೆಟ್ ರಾಜಕಾರಣ ನಡೆಯುತ್ತಿದ್ದು, ಅಮಾಯಕ ಕಾರ್ಯಕರ್ತರನ್ನು ಉದ್ದೇಶಪೂರ್ವಕವಾಗಿ ಪ್ರಕರಣಗಳಲ್ಲಿ ಸಿಲುಕಿಸಲಾಗುತ್ತಿದೆ ಎಂದು ದೂರಿದ ಅವರು, ಸುಮೋಟೋ ಪ್ರಕರಣ ದಾಖಲಿಸುವಷ್ಟು ದೊಡ್ಡ ಅಪರಾಧ ಯಾರೂ ಮಾಡಿಲ್ಲ. ಜನಪ್ರತಿನಿಧಿಗಳ ಒತ್ತಡಕ್ಕೆ ಮಣಿದು ಪೊಲೀಸರು ಎಫ್‌ಐಆರ್ ದಾಖಲಿಸಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಸರ್ಕಾರದ ವೈಫಲ್ಯಗಳನ್ನು ಪ್ರಶ್ನಿಸುವವರನ್ನು ಗುರಿಯಾಗಿಸುವ ಪ್ರಯತ್ನ ನಡೆಯುತ್ತಿದೆ. ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ಯಾವುದೇ ರಾಜಕೀಯ ಪಕ್ಷದ ಪರವಾಗಿ ಕೆಲಸ ಮಾಡುವಂತಾಗಬಾರದು ಎಂದು ಅವರು ಹೇಳಿದರು.

ಜಿಲ್ಲಾ ಜೆಡಿಎಸ್ ಸಾಮಾಜಿಕ ಜಾಲತಾಣ ಘಟಕದ ಅಧ್ಯಕ್ಷ ಅಖಿಲ್ ರೆಡ್ಡಿ ಬಂಧನವನ್ನು ಖಂಡಿಸಿದ ನಿಖಿಲ್ ಕುಮಾರಸ್ವಾಮಿ, ಅವರು ಗೌರವಯುತವಾಗಿ ಬದುಕು ಕಟ್ಟಿಕೊಂಡಿರುವ ವ್ಯಕ್ತಿಯಾಗಿದ್ದು, ಇಂತಹವರನ್ನು ಜೈಲಿಗೆ ಕಳುಹಿಸಿರುವುದು ಸರಿಯಲ್ಲ ಎಂದರು. ಬಂಧಿತರ ಕುಟುಂಬಗಳಿಗೆ ಧೈರ್ಯ ತುಂಬುವ ಕೆಲಸವನ್ನು ಪಕ್ಷ ಮಾಡಲಿದ್ದು, ಅಗತ್ಯ ಕಾನೂನು ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಘಟನೆಗೆ ಕಾರಣವಾದವರ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಬೇಕು. ಪ್ರಚೋದನೆ ನೀಡಿದವರನ್ನು ಪ್ರಶ್ನಿಸದೇ ಕೇವಲ ಕಾರ್ಯಕರ್ತರ ವಿರುದ್ಧವೇ ಕ್ರಮ ಕೈಗೊಳ್ಳುವುದು ನ್ಯಾಯವಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು. ಪ್ರಕರಣದ ಸಂಪೂರ್ಣ ಸತ್ಯಾಂಶ ಹೊರಬರಬೇಕಿದ್ದು, ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಕೆಂಪೇಗೌಡರು ನಾಡಿನ ಹೆಮ್ಮೆಯ ನಾಯಕರು. ಅವರು ಯಾವುದೇ ಜಾತಿ, ಧರ್ಮ ಅಥವಾ ಸಮುದಾಯಕ್ಕೆ ಸೀಮಿತರಲ್ಲ; ಸರ್ವಜನಾಂಗದ ನಾಯಕರಾಗಿದ್ದಾರೆ ಎಂದು ಅವರು ತಿಳಿಸಿದರು.

ಇದಕ್ಕೂ ಮುನ್ನ ನಿಖಿಲ್ ಕುಮಾರಸ್ವಾಮಿ ಅವರು ಶಾಸಕ ಬಿ.ಎನ್. ರವಿಕುಮಾರ್, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜೆ.ಕೆ. ಕೃಷ್ಣಾರೆಡ್ಡಿ ಸೇರಿದಂತೆ ಪಕ್ಷದ ಮುಖಂಡರೊಂದಿಗೆ ಅಣಕನೂರು ಉಪ ಕಾರಾಗೃಹಕ್ಕೆ ಭೇಟಿ ನೀಡಿ ಬಂಧಿತರನ್ನು ಭೇಟಿಯಾಗಿ ಧೈರ್ಯ ತುಂಬಿದರು. ನಂತರ ಅಖಿಲ್ ರೆಡ್ಡಿ ಅವರ ನಿವಾಸಕ್ಕೆ ತೆರಳಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಶಿಡ್ಲಘಟ್ಟ ಶಾಸಕ ಬಿ.ಎನ್. ರವಿಕುಮಾರ್, ಮಾಜಿ ಶಾಸಕ ಜೆ.ಕೆ. ಕೃಷ್ಣಾರೆಡ್ಡಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಪಿ.ಎನ್. ಕೇಶವರೆಡ್ಡಿ, ಜೆಡಿಎಸ್ ಜಿಲ್ಲಾಧ್ಯಕ್ಷ ಮುಕ್ತ ಮುನಿಯಪ್ಪ, ಚಿಮುಲ್ ನಿರ್ದೇಶಕ ಕೆ.ವಿ. ನಾಗರಾಜ್ ಸೇರಿದಂತೆ ಜೆಡಿಎಸ್ ಮತ್ತು ಬಿಜೆಪಿ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾಲೂರಿನಲ್ಲಿ ಸಾಂಸ್ಕೃತಿಕ ಉತ್ಸವ–2026: ಮಹಿಳಾ ಸಬಲೀಕರಣಕ್ಕೆ ಕಲೆಯ ಸಂದೇಶ

ಮಾಲೂರು

ಶ್ರೀ ಗುರುಕೃಪಾ ಸಂಗೀತ ಕಲಾವೃಂದ ಸಂಘ (ರಿ), ಮಾಲೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ 'ಸಾಂಸ್ಕೃತಿಕ ಉತ್ಸವ–2026' ಕಾರ್ಯಕ್ರಮ ವಿಜೃಂಭಣೆಯಿಂದ ನಡೆಯಿತು.

'ಮಹಿಳಾ ಸಬಲೀಕರಣ' ಎಂಬ ಆಶಯದೊಂದಿಗೆ ಆಯೋಜಿಸಿದ್ದ ಉತ್ಸವದಲ್ಲಿ ಶಾಸ್ತ್ರೀಯ ಸಂಗೀತ, ಭರತನಾಟ್ಯ, ಜಾನಪದ ನೃತ್ಯ, ಸುಗಮ ಸಂಗೀತ, ಕಾವ್ಯ ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾದವು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ, "ಭಾರತವು ಜಗತ್ತಿನಲ್ಲೇ ಶ್ರೇಷ್ಠ ಸಂಸ್ಕೃತಿಯನ್ನು ಹೊಂದಿರುವ ದೇಶವಾಗಿದೆ. ನಮ್ಮ ಸಂಗೀತ, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯೇ ಅದರ ಮೂಲ ಆಧಾರ. ಈ ಪರಂಪರೆಯ ಮುಂದಿನ ರಾಯಭಾರಿಗಳು ಯುವಜನತೆ. ನಿಮ್ಮ ಮೂಲಕ ಸದೃಢ ಸಮಾಜ ನಿರ್ಮಾಣವಾಗಲಿ" ಎಂದು ಹಾರೈಸಿದರು.

ಶ್ರೀ ಗುರುಕೃಪಾ ಸಂಗೀತ ಕಲಾವೃಂದದ ಸಂಸ್ಥಾಪಕ ಕಾರ್ಯದರ್ಶಿ ಹಾಗೂ ಸಂಗೀತ ವಿದ್ವಾಂಸ ಸಿ.ಆರ್. ನಟರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತೀಯ ಕಲೆ ಮತ್ತು ಸಂಸ್ಕೃತಿಯ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕ ಡಾ. ಎನ್.ಸಿ. ಚಂದ್ರಪ್ಪ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಎಂ.ವಿ. ಹನುಮಂತಯ್ಯ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷೆ ಶೈಲಜಾ ಕೃಷ್ಣ, ಮಾಜಿ ಪುರಸಭೆ ಸದಸ್ಯ ಹೆಚ್.ವಿ. ಲಿಂಗೇಶ್ವರಯ್ಯ, ಆರ್. ವೆಂಕಟೇಶ್, ಕ್ಷೇತ್ರ ಶಿಕ್ಷಣಾಧಿಕಾರಿ ಕೆಂಪಯ್ಯ, ಮಂಜುನಾಥ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸುಪ್ರಿಯಾ ಹೆಚ್, ವರ್ಷಿಣಿ, ಜಸ್ಮಿತಾ ತಂಡದಿಂದ ಶಾಸ್ತ್ರೀಯ ಸಂಗೀತ, ರೂಪಾ ಕೆ. ಹಾಗೂ ಏಕದಂತ ನಾಟ್ಯ ಕಲಾ ಅಕಾಡೆಮಿ ತಂಡದಿಂದ ಭರತನಾಟ್ಯ, ಶೀಲಾ ಸೋಮಶೇಖರ್ ಮತ್ತು ಅನುಷಾ ಅಂಬರೀಷ್ ತಂಡದಿಂದ ಸುಗಮ ಸಂಗೀತ, ಕೀರ್ತನ, ಸಿಂಚನ, ಶ್ರಾವಣಿ, ದರ್ಶಿನಿ ತಂಡದಿಂದ ಜಾನಪದ ನೃತ್ಯ ಹಾಗೂ ಸಿ.ಆರ್. ನಟರಾಜ್ ಮತ್ತು ತಂಡದಿಂದ ಕಾವ್ಯ ಸಂಗೀತ ಕಾರ್ಯಕ್ರಮಗಳು ನಡೆದವು.

ತಬಲಾ ವಾದಕ ಸಿ.ಆರ್. ಸೋಮಶೇಖರ್, ಕೀಬೋರ್ಡ್ ವಾದಕ ಶಂಕರ್, ರಿದಂ ಪ್ಯಾಡ್ ವಾದಕ ನವೀನ್ ಸಂಗೀತ ಕಾರ್ಯಕ್ರಮಗಳಿಗೆ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ, ವಿದ್ಯಾರ್ಥಿನಿಯರು ಹಾಗೂ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಅಂತ್ಯಸಂಸ್ಕಾರಕ್ಕೆ ಅಡ್ಡಿ; ಸಾರ್ವಜನಿಕರ ಆಕ್ರೋಶ, ಅಧಿಕಾರಿಗಳ ವಿರುದ್ಧ ನಿರ್ಲಕ್ಷ್ಯದ ಆರೋಪ

ದೊಡ್ಡಬಳ್ಳಾಪುರ

ನಗರದ ವಿವೇಕಾನಂದ ನಗರದ ಸಮೀಪದ ಸಾರ್ವಜನಿಕ ಸ್ಮಶಾನದಲ್ಲಿ ಅಂತ್ಯಸಂಸ್ಕಾರಕ್ಕೆ ಅಡ್ಡಿಪಡಿಸಿದ ಘಟನೆ ತೀವ್ರ ಆಕ್ರೋಶಕ್ಕೆ ಕಾರಣವಾಗಿದ್ದು, ಸ್ಥಳೀಯರು ಕಂದಾಯ ಇಲಾಖೆ ಮತ್ತು ಆಡಳಿತದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತೇರಿನ ಬೀದಿಯ ಮಹಿಳೆಯೊಬ್ಬರು ನಿಧನರಾದ ಹಿನ್ನೆಲೆಯಲ್ಲಿ ಕುಟುಂಬಸ್ಥರು ವಿವೇಕಾನಂದ ನಗರದ ಸ್ಮಶಾನದಲ್ಲಿ ಅಂತ್ಯಸಂಸ್ಕಾರಕ್ಕೆ ತೆರಳಿದ್ದರು. ಈ ವೇಳೆ ಜಾಗ ತಮ್ಮ ಸ್ವತ್ತು ಎಂದು ಹೇಳಿಕೊಂಡ ವ್ಯಕ್ತಿಯೊಬ್ಬರು ಸ್ಮಶಾನಕ್ಕೆ ಹೋಗುವ ದಾರಿಯನ್ನು ಬಂದ್ ಮಾಡಿ ಅಂತ್ಯಸಂಸ್ಕಾರಕ್ಕೆ ಅಡ್ಡಿಪಡಿಸಿದ್ದಾನೆ ಎನ್ನಲಾಗಿದೆ. ಇದರಿಂದ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಸಾರ್ವಜನಿಕರು ಪೊಲೀಸರಿಗೆ ದೂರು ನೀಡಿದರು.

ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಆಗಮಿಸಿ ಎರಡೂ ಪಕ್ಷಗಳ ಅಹವಾಲು ಆಲಿಸಿದರು. ಮೃತರ ಕುಟುಂಬಸ್ಥರು ಮತ್ತು ಸಾರ್ವಜನಿಕರು, ಅಂತ್ಯಸಂಸ್ಕಾರಕ್ಕೆ ಅವಕಾಶ ನೀಡದಿದ್ದರೆ ತಾಲೂಕು ಕಚೇರಿ ಎದುರೇ ಅಂತ್ಯಸಂಸ್ಕಾರ ಮಾಡುವುದಾಗಿ ಪಟ್ಟು ಹಿಡಿದರು.

ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡ ಡಿವೈಎಸ್‌ಪಿ ಪಾಂಡುರಂಗ ಹಾಗೂ ಪೊಲೀಸ್ ಇನ್‌ಸ್ಪೆಕ್ಟರ್ ಡಾ. ನವೀನ್ ಕುಮಾರ್ ಮಧ್ಯಪ್ರವೇಶಿಸಿ ಸಂಬಂಧಪಟ್ಟ ವ್ಯಕ್ತಿಗೆ ಮನವರಿಕೆ ಮಾಡಿಕೊಟ್ಟ ಬಳಿಕ ಅಂತ್ಯಸಂಸ್ಕಾರಕ್ಕೆ ಅವಕಾಶ ಕಲ್ಪಿಸಿದರು.



ಸ್ಥಳೀಯರ ಪ್ರಕಾರ, ಹಲವು ದಶಕಗಳಿಂದ ವಿವಿಧ ಸಮುದಾಯದ ಜನರು ಇದೇ ಸ್ಮಶಾನವನ್ನು ಬಳಸಿಕೊಂಡು ಬರುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಜಾಗದ ಮಾಲೀಕತ್ವದ ವಿವಾದ ಎಬ್ಬಿಸಿ ಸ್ಮಶಾನಕ್ಕೆ ಹೋಗುವ ದಾರಿಯನ್ನು ಕಂಪೌಂಡ್ ನಿರ್ಮಿಸಿ ಬಂದ್ ಮಾಡಲಾಗಿದೆ. ಇದರಿಂದ ಪ್ರತಿ ಬಾರಿ ಅಂತ್ಯಸಂಸ್ಕಾರದ ವೇಳೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು.

ಸ್ಥಳೀಯ ಮುಖಂಡರಾದ ಸಂಜೀವ್ ನಾಯಕ್, ಡಿ.ಪಿ. ಆಂಜಿನೇಯ ಸೇರಿದಂತೆ ಹಲವರು, ಸ್ಮಶಾನದ ಜಾಗವನ್ನು ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಕ್ರಮ ಕೈಗೊಂಡು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸುವಂತೆ ಕಂದಾಯ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳನ್ನು ಒತ್ತಾಯಿಸಿದರು.

ಪ್ರಕರಣದ ಕುರಿತು ಪ್ರತಿಕ್ರಿಯಿಸಿದ ಅಧಿಕಾರಿಗಳು, ಒಂದು ವಾರದೊಳಗೆ ಸ್ಮಶಾನದ ಜಾಗಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, ಕಂದಾಯ ಇಲಾಖೆಯಿಂದ ವರದಿ ಪಡೆದು ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ಸ್ಥಳೀಯರ ಆರೋಪದಂತೆ, ಈ ಪ್ರದೇಶದಲ್ಲಿ ಸುಮಾರು ಆರು ಎಕರೆ ಸರ್ಕಾರಿ ಭೂಮಿ ಒತ್ತುವರಿಯಾಗಿದ್ದು, ಸಾರ್ವಜನಿಕ ಸ್ಮಶಾನದ ಜಾಗವೂ ಅದರಿಂದ ಹೊರತಾಗಿಲ್ಲ. ಈ ಕುರಿತು ಹಲವು ಬಾರಿ ದೂರು ನೀಡಿದ್ದರೂ ಕಂದಾಯ ಇಲಾಖೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿರುವ ಸಾರ್ವಜನಿಕರು, ಶೀಘ್ರದಲ್ಲಿ ಸಮಸ್ಯೆ ಬಗೆಹರಿಯದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

# 26 ವರ್ಷಗಳ ಸೇವೆಗೆ ವಿದಾಯ: ಬೀಳ್ಕೊಡುಗೆ

ದೇವನಹಳ್ಳಿ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಆವತಿ ಸಮೀಪದ ದಾಸರಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಶಿಕ್ಷಕಿ ಶ್ರೀಮತಿ ಹಸೀನಾ ತಾಜ್ ಅವರು 26 ವರ್ಷಗಳ ಸುದೀರ್ಘ ಬೋಧನಾ ಸೇವೆ ಪೂರ್ಣಗೊಳಿಸಿ ಸೇವಾನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಶಾಲೆಯಲ್ಲಿ ಭಾವಪೂರ್ಣ ಬೀಳ್ಕೊಡುಗೆ ಸಮಾರಂಭ ನಡೆಯಿತು.

ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ಸಮಾರಂಭದಲ್ಲಿ ಸಂಘದ ಅಧ್ಯಕ್ಷ ಯತೀಶ್ ಕುಮಾರ್ ಅವರು ಹಸೀನಾ ತಾಜ್ ಅವರನ್ನು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಯತೀಶ್ ಕುಮಾರ್, "ಬೋಧನಾ ಸೇವಾ ವೃತ್ತಿಯ ದಿನಗಳು ಮಾಣಿಕ್ಯದಂತಿರಬೇಕು. ಶಿಕ್ಷಕರು ಪಠ್ಯ ವಿಷಯಗಳ ಜೊತೆಗೆ ಸಾಮಾನ್ಯ ಜ್ಞಾನ ಹಾಗೂ ಜೀವನ ಮೌಲ್ಯಗಳನ್ನು ಮಕ್ಕಳಿಗೆ ಸರಳವಾಗಿ ಅರ್ಥವಾಗುವ ರೀತಿಯಲ್ಲಿ ಬೋಧಿಸಿದರೆ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುತ್ತದೆ. ಹಸೀನಾ ತಾಜ್ ಅವರು ತಮ್ಮ 26 ವರ್ಷಗಳ ಸೇವೆಯಲ್ಲಿ ನಿಷ್ಠೆ, ಪ್ರಾಮಾಣಿಕತೆ ಮತ್ತು ಶೈಕ್ಷಣಿಕ ಬದ್ಧತೆಯಿಂದ ಅನೇಕ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿದ್ದಾರೆ. ಅವರ ನಿವೃತ್ತಿ ಬೇಸರ ತಂದರೂ, ಅವರು ಸಲ್ಲಿಸಿದ ಸೇವೆ ಸದಾ ಸ್ಮರಣೀಯ" ಎಂದು ಹೇಳಿದರು.

ಜಿಲ್ಲಾ ಉಪಾಧ್ಯಕ್ಷ ಆದರ್ಶ್ ಮಾತನಾಡಿ, ಬೋಧನಾ ವೃತ್ತಿ ಕೇವಲ ಸರ್ಕಾರಿ ಉದ್ಯೋಗವಲ್ಲ, ಅದು ಸಮಾಜ ನಿರ್ಮಾಣದ ಮಹತ್ತರ ಹೊಣೆಗಾರಿಕೆಯಾಗಿದೆ. ಶಿಕ್ಷಕರು ಸಮಯ ಪಾಲನೆ, ಕರ್ತವ್ಯನಿಷ್ಠೆ ಮತ್ತು ಗುಣಮಟ್ಟದ ಬೋಧನೆಯ ಮೂಲಕ ವಿದ್ಯಾರ್ಥಿಗಳ ಬದುಕನ್ನು ರೂಪಿಸಬೇಕು ಎಂದು ತಿಳಿಸಿದರು.

ಶಾಲೆಯ ಮುಖ್ಯ ಶಿಕ್ಷಕಿ ಭವನಾ ಬಿ. ಮಾತನಾಡಿ, ಹಸೀನಾ ತಾಜ್ ಅವರ ನಿವೃತ್ತಿಯಿಂದ ಶಾಲೆಗೆ ಉತ್ತಮ ಶಿಕ್ಷಕಿಯೊಬ್ಬರ ಕೊರತೆ ಉಂಟಾಗಿದೆ. ಅವರ ಅನುಭವ, ಮಾರ್ಗದರ್ಶನ ಮತ್ತು ಬೋಧನಾ ಕೌಶಲ್ಯ ಶಾಲೆಗೆ ಸದಾ ಮಾದರಿಯಾಗಿದ್ದು, ನಿವೃತ್ತಿ ಜೀವನ ಸುಖ, ಶಾಂತಿ ಮತ್ತು ಆರೋಗ್ಯದಿಂದ ಕೂಡಿರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಪಾಧ್ಯಕ್ಷ ನಾಗೇಶ್, ಮಂಜುನಾಥ್, ಅತಿಥಿ ಶಿಕ್ಷಕಿ ಶೋಭಾ, ಶಿಕ್ಷಕರಾದ ಮೂರ್ತಿ ಎನ್., ಗಾಯತ್ರಿ, ಶಿಲ್ಪ ಸೇರಿದಂತೆ ಹಲವು ಶಿಕ್ಷಕರು ಹಾಗೂ ಗಣ್ಯರು ಹಸೀನಾ ತಾಜ್ ಅವರಿಗೆ ಉಡುಗೊರೆ ನೀಡಿ ಶುಭ ಹಾರೈಸಿದರು.

ಎಸ್‌ಡಿಎಂಸಿ ಅಧ್ಯಕ್ಷ ಕೇಶವ ಮಾತನಾಡಿ, ಹಸೀನಾ ತಾಜ್ ಅವರ ಸೇವೆಯನ್ನು ಶ್ಲಾಘಿಸಿದರು. ಸಮಾರಂಭದಲ್ಲಿ ಶಿಕ್ಷಕರಾದ ಹರೀಶ್, ಗೀತಾ, ವೆಂಕಟೇಶ್, ಸತೀಶ್, ದ್ವಾರಕನಾಥ್, ಶಾಲೆಯ ಸಿಬ್ಬಂದಿ, ಗ್ರಾಮಸ್ಥರು, ಹಿರಿಯ ವಿದ್ಯಾರ್ಥಿಗಳು ಹಾಗೂ ಪ್ರಸ್ತುತ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ನಿವೃತ್ತ ಶಿಕ್ಷಕಿಗೆ ಆತ್ಮೀಯ ಬೀಳ್ಕೊಡುಗೆ ನೀಡಿದರು.

# 'ಕೆಂಪೇಗೌಡರು ಇಡೀ ರಾಜ್ಯಕ್ಕೆ ಮಾದರಿ'



ಕೋಲಾರ

ನಾಡಪ್ರಭು ಕೆಂಪೇಗೌಡರ 517ನೇ ಜಯಂತಿಯನ್ನು ಕೋಲಾರದಲ್ಲಿ ಅದ್ಧೂರಿಯಾಗಿ ಆಚರಿಸಲಾಯಿತು. ಜಿಲ್ಲಾ ಒಕ್ಕಲಿಗರ ಸಂಘ ಹಾಗೂ ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ನಗರದ ಎಸ್.ಎನ್. ಆರ್. ಜಿಲ್ಲಾಸ್ಪತ್ರೆ ಮುಂಭಾಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ಶಾಖಾ ಮಠದ ಶ್ರೀ ಮಂಗಳಾನಂದನಾಥ ಸ್ವಾಮೀಜಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ವೇಳೆ ಮಾತನಾಡಿದ ಅವರು, "ಕೋಲಾರದ ರೈತರು ಹಾಗೂ ಒಕ್ಕಲಿಗ ಸಮುದಾಯ ಇಡೀ ರಾಜ್ಯಕ್ಕೆ ಮಾದರಿಯಾಗಿದ್ದು, ಇಲ್ಲಿ ನಡೆಯುತ್ತಿರುವ ಕೆಂಪೇಗೌಡ ಜಯಂತಿ ಆಚರಣೆ ನಾಡಿಗೆ ಉತ್ತಮ ದಿಕ್ಸೂಚಿಯಾಗಿದೆ. ಬೆಂಗಳೂರು ಇಂದು ಜಾಗತಿಕ ಮಟ್ಟದಲ್ಲಿ ಬೆಳೆಯಲು ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯ ಆಡಳಿತವೇ ಕಾರಣವಾಗಿದೆ. ಅವರು ನಾಡಿನ ಅಭಿವೃದ್ಧಿಯ ನಿಜವಾದ ಹರಿಕಾರರು" ಎಂದು ಬಣ್ಣಿಸಿದರು.

ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಹಾಗೂ ಹಿರಿಯ ವಕೀಲ ಕೆ.ವಿ. ಶಂಕರಪ್ಪ ಮಾತನಾಡಿ, "ನಾಡಪ್ರಭು ಕೆಂಪೇಗೌಡರು ಕೇವಲ ಒಂದು ಸಮುದಾಯದ ನಾಯಕನಲ್ಲ; ಎಲ್ಲಾ ಸಮುದಾಯಗಳ ಮತ್ತು ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಶ್ರಮಿಸಿದ ದೂರದರ್ಶಿ ಆಡಳಿತಗಾರರಾಗಿದ್ದರು. ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ" ಎಂದು ಹೇಳಿದರು.

ವೇದಿಕೆ ಕಾರ್ಯಕ್ರಮದ ಬಳಿಕ ಗಣ್ಯರು ಹಸಿರು ನಿಶಾನೆ ತೋರಿ ಭವ್ಯ ಸ್ತಬ್ಧಚಿತ್ರಗಳ ಮೆರವಣಿಗೆಗೆ ಚಾಲನೆ ನೀಡಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿದ ನೂರಾರು ಸ್ತಬ್ಧಚಿತ್ರಗಳು ಹಾಗೂ ವಿವಿಧ ಜಾನಪದ ಕಲಾತಂಡಗಳ ಪ್ರದರ್ಶನಗಳು ಸಾರ್ವಜನಿಕರ ಗಮನ ಸೆಳೆದವು.

ಮೆರವಣಿಗೆಯಲ್ಲಿ ರೈತರ ಸಾಂಪ್ರದಾಯಿಕ ನೃತ್ಯ, ಡೊಳ್ಳು ಕುಣಿತ, ವೀರಗಾಸೆ ಸೇರಿದಂತೆ ಹಲವು ಜಾನಪದ ಕಲಾಪ್ರದರ್ಶನಗಳು ನಡೆದವು. ಹಾಸನ ಜಿಲ್ಲೆಯ ಅರಸೀಕೆರೆಯಿಂದ ಆಗಮಿಸಿದ್ದ ರೈತರ ವಿಶೇಷ ಕಲಾತಂಡದ ನೃತ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಯುವಕರು ತಮಟೆಯ ಸದ್ದಿಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

ಹಬ್ಬದ ಸಂಭ್ರಮದ ನಡುವೆ ಮೆರವಣಿಗೆಯ ಮಾರ್ಗದುದ್ದಕ್ಕೂ ದಾನಿಗಳು ಸಾರ್ವಜನಿಕರಿಗೆ ಅನ್ನದಾನ, ಮಜ್ಜಿಗೆ ಹಾಗೂ ಪಾನಕ ವಿತರಿಸಿ ಸೇವೆ ಸಲ್ಲಿಸಿದರು. ಸಾಂಪ್ರದಾಯಿಕ ಎತ್ತಿನಗಾಡಿಗಳ ಬಳಕೆ ಉತ್ಸವದ ವಿಶೇಷ ಆಕರ್ಷಣೆಯಾಗಿತ್ತು. ಆದರೆ ಮೆರವಣಿಗೆಯ ಭಾರಿ ಶಬ್ದದಿಂದ ಎತ್ತುಗಳು ಕೆಲಕಾಲ ಆತಂಕಗೊಂಡ ಘಟನೆಯೂ ನಡೆಯಿತು.

ಸುಮಾರು ನಾಲ್ಕೈದು ಗಂಟೆಗಳ ಕಾಲ ನಡೆದ ಮೆರವಣಿಗೆಯಿಂದ ನಗರದ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ವ್ಯತ್ಯಯ ಉಂಟಾಗಿದ್ದು, ವಾಹನ ಸವಾರರು ಪರ್ಯಾಯ ಮಾರ್ಗಗಳನ್ನು ಬಳಸಬೇಕಾಯಿತು. ಬಂಗಾರಪೇಟೆ ವೃತ್ತ, ಮಹಾತ್ಮ ಗಾಂಧಿ ರಸ್ತೆ ಹಾಗೂ ರಂಗಮಂದಿರ ರಸ್ತೆಯಲ್ಲಿ ಸಾವಿರಾರು ಜನರು ಸೇರಿ ಕೆಂಪೇಗೌಡ ಜಯಂತಿಯ ಸಂಭ್ರಮಕ್ಕೆ ಸಾಕ್ಷಿಯಾದರು.

ಕಾರ್ಯಕ್ರಮದಲ್ಲಿ ಶಾಸಕ ಕೊತ್ತೂರು ಮಂಜುನಾಥ್, ಮಾಜಿ ಸಚಿವ ಕೆ. ಶ್ರೀನಿವಾಸಗೌಡ, ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್, ಮಾಜಿ ಸದಸ್ಯ ಇಂಚರ ಗೋವಿಂದರಾಜು, ಡಿಐಜಿಪಿ ಡಿ. ದೇವರಾಜ್, ಉಪವಿಭಾಗಾಧಿಕಾರಿ ರೇಣುಕಾ ಪ್ರಸಾದ್ ಜಂಬಗಿ, ತಹಶೀಲ್ದಾರ್ ಶ್ರೀನಿವಾಸ್ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು, ಒಕ್ಕಲಿಗ ಸಮುದಾಯದ ಮುಖಂಡರು ಹಾಗೂ ಸಾವಿರಾರು ಸಾರ್ವಜನಿಕರು ಭಾಗವಹಿಸಿದ್ದರು.

# ಎಸ್‌ಐಆರ್ ಕುರಿತು, ಜಾಗೃತಿ

ವಿಜಯಪುರ

ರಾಜ್ಯದಲ್ಲಿ, ಚುನಾವಣಾ ಆಯೋಗದ ವತಿಯಿಂದ ನಡೆಸಲಾಗುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಮತಗಟ್ಟೆ ಅಧಿಕಾರಿಗಳು ನೀಡುವ ಎನ್ಯೂಮರೇಷನ್ ನಮೂನೆಗಳನ್ನು ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ತುಂಬಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ವೈ. ಎನ್.ಸತ್ಯನಾರಾಯಣ ಹೇಳಿದರು.

ಪಟ್ಟಣದ ಕೋಲಾರ ಮುಖ್ಯರಸ್ತೆಯಲ್ಲಿರುವ ಕೂಬಾ ಮಸೀದಿಯಲ್ಲಿ, ಆಯೋಜಿಸಿದ್ದ ಜಾಗೃತಿ ಸಭೆಯಲ್ಲಿ ಅವರು ಮಾತನಾಡಿದರು.

1987 ಕ್ಕೂ ಮೊದಲು ಜನಿಸಿರುವ, ಪ್ರತಿಯೊಬ್ಬ ಮತದಾರರು, 2002 ರ ಮತದಾರರ ಪಟ್ಟಿಯಲ್ಲಿ, ನಿಮ್ಮ ಹೆಸರು ಯಾವ ವಿಧಾನಸಭಾ ಕ್ಷೇತ್ರದ, ಯಾವ ಭಾಗದ ಸಂಖ್ಯೆ, ಎಷ್ಟರ ಕ್ರಮ ಸಂಖ್ಯೆಯಲ್ಲಿದೆ ಎನ್ನುವುದನ್ನು 2002 ಮತ ಪಟ್ಟಿಯಲ್ಲಿ ಪರಿಶೀಲನೆ ಮಾಡಿಕೊಳ್ಳಬೇಕು. ಭರ್ತಿ ಮಾಡಿದ ನಮೂನೆಗಳನ್ನು ಕಡ್ಡಾಯವಾಗಿ ಮತಗಟ್ಟೆ ಅಧಿಕಾರಿಗೆ ಕೊಡಬೇಕು. ಒಂದು ವೇಳೆ ನಮೂನೆ ಬಿಎಲ್‌ಓ ಗಳಿಗೆ ತಲುಪಿಸದಿದ್ದಲ್ಲಿ ಕರಡು ಮತಪಟ್ಟಿಯಲ್ಲಿ ಹೆಸರು ಬರುವುದಿಲ್ಲ. ಅವರು ಕೇಳುವಂತಹ ದಾಖಲೆಗಳನ್ನು ಒದಗಿಸಿಕೊಡಬೇಕು.

1987 ರ ನಂತರ ಜನಿಸಿರುವವರು, ಎನ್ಯೂಮರೇಷನ್ ನಮೂನೆ ತುಂಬುವಾಗ, ಕಡ್ಡಾಯವಾಗಿ ಅವರ ಪೋಷಕರ ಮಾಹಿತಿಯನ್ನು ತುಂಬಬೇಕು. ಹೆಸರು, ತಂದೆಯ ಹೆಸರು, ಹುಟ್ಟಿದ ದಿನಾಂಕ, ಭಾವಚಿತ್ರ ಬದಲಾವಣೆಗೂ ಅವಕಾಶವಿದ್ದು, ಪಾಸ್ ಪೋರ್ಟ್ ಅಳತೆಯ ಕಲರ್ ಭಾವಚಿತ್ರವನ್ನು ಇಟ್ಟುಕೊಂಡಿರಬೇಕು. ಸೂಕ್ತವಾದ ದಾಖಲೆ ಕೊಡದ, ನಮೂನೆಗಳನ್ನು ನಿಗದಿತ ಸಮಯದೊಳಗೆ ಹಿಂತಿರುಗಿಸದವರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವುದಿಲ್ಲ.

ಮತದಾರರು ಗೊಂದಲಕ್ಕೆ ಒಳಗಾಗದೆ, ಪ್ರತಿಯೊಬ್ಬರಿಗೂ ಮಾಹಿತಿಯನ್ನು ತಿಳಿಸಿಕೊಡಿ, ಗೊಂದಲಗಳಿದ್ದರೆ, ಮತಗಟ್ಟೆಯ ಅಧಿಕಾರಿ, ಹಾಗೂ ರಾಜಕೀಯ ಪಕ್ಷಗಳಿಂದ ಬಿ.ಎಲ್.ಎ–2 ಗಳನ್ನು ನೇಮಕ ಮಾಡಿದ್ದಾರೆ. ಅವರಿಂದಲೂ ಸಹಾಯ ಪಡೆದುಕೊಳ್ಳಬಹುದಾಗಿದೆ. ಮಸೀದಿಗಳಲ್ಲಿ ಈ ಕುರಿತು, ವ್ಯಾಪಕವಾಗಿ ಪ್ರಚಾರವನ್ನು ಮಾಡುವ ಮೂಲಕ ಈ ರಾಜ್ಯದಲ್ಲಿ, ಹುಟ್ಟಿ ಬೆಳೆದಿರುವ ಅರ್ಹ ಮತದಾರರು ಪಟ್ಟಿಯಿಂದ ತಪ್ಪಿಹೋಗದಂತೆ ಗಮನಹರಿಸಲು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಪುರಸಭೆ ಸದಸ್ಯ ಸೈಯದ್ ಎಕ್ಬಾಲ್ ಮಾತನಾಡಿ, ಎಸ್.ಐ.ಆರ್ ಕುರಿತು, ಪುರಸಭೆಯಿಂದ ವಾಹನಗಳಲ್ಲಿ ವ್ಯಾಪಕವಾಗಿ ಪ್ರಚಾರ ನಡೆಸಬೇಕು. ಬಹಳಷ್ಟು ಮಂದಿ ಕಾರ್ಮಿಕರು, ಕೆಲಸಗಳ ಒತ್ತಡಗಳ ಮೇಲೆ ಬೇರೆ ಬೇರೆ ಕಡೆಗಳಿಗೆ ಹೋಗಿರುತ್ತಾರೆ. ಅವರಿಗೆ ಇಂತಹ ವಿಷಯಗಳು ಗೊತ್ತಿರುವುದಿಲ್ಲ.

ಅವರ ಕುಟುಂಬಗಳಿಗೆ ಮಾಹಿತಿ ಸಿಕ್ಕಿದರೆ ಅವರಿಗೆ ಅನುಕೂಲವಾಗಬಹುದು. ಆದ್ದರಿಂದ ಮತಗಟ್ಟೆ ಅಧಿಕಾರಿಗಳೂ ಸಹಾ ಮತದಾರರಿಗೆ ನೆರವಾಗಬೇಕು. ಸಾಧ್ಯವಾದರೆ, ಪುರಸಭೆಯಿಂದ ಎಸ್.ಐ.ಆರ್ ಕುರಿತು, ಪರಿಣಿತಿಯಿರುವವರನ್ನು ಸ್ವಯಂ ಸೇವಕರನ್ನಾಗಿ ತೆಗೆದುಕೊಂಡು ನಾಗರಿಕರಿಗೆ ಸಹಾಯ ಮಾಡಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಗೌಸ್ ಖಾನ್, ಪುರಸಭೆಯ ಎಸ್.ಜೆ.ಆರ್.ವೈ ಕಚೇರಿಯ ಅಧಿಕಾರಿ ಶಿವನಾಗೇಗೌಡ, ಸುನೀಲ್, ಅಜ್ಮತ್, ಜನಾರ್ಧನ, ಮಸೀದಿಯ ಮುಖ್ಯಸ್ಥರು ಮುಂತಾದವರು ಹಾಜರಿದ್ದರು.

# ಇಂಧನ ಇಲಾಖೆ ಖಾಸಗಿಗಿಂತ ಬಲಿಷ್ಠವಾಗಿದೆ: ಕೆ.ಜೆ.ಜಾರ್ಜ್



ಬೆಂಗಳೂರು

ರಾಜ್ಯದ ಜನರಿಗೆ ವಿದ್ಯುತ್ ಪೂರೈಸಲು ಇಂಧನ ಇಲಾಖೆ ಬಲಿಷ್ಠವಾಗಿದ್ದು, ಖಾಸಗೀಕರಣಗೊಳಿಸುವ ಪ್ರಶ್ನೆಯೇ ಇಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಅರಮನೆ ಮೈದಾನದಲ್ಲಿ ಸೋಮವಾರ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘ ಮತ್ತು ಅಸೋಸಿಯೇಷನ್‌ಗಳ ಒಕ್ಕೂಟ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಇಂಧನ ಸಚಿವರಿಗೆ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಟಾಟಾ ಪವರ್ ಕಂಪನಿಯು ಕರ್ನಾಟಕದಲ್ಲಿ ವಿದ್ಯುತ್ ಸರಬರಾಜು (ವಿತರಣೆ) ಮಾಡಲು ಪರವಾನಗಿ ಕೋರಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (ಕೆಇಆರ್‌ಸಿ) ಕ್ಕೆ ಅರ್ಜಿ ಸಲ್ಲಿಸಿರುವ ಕುರಿತು ಪ್ರತಿಕ್ರಿಯಿಸಿದ ಸಚಿವರು, "ಇಂಧನ ಇಲಾಖೆ ಬಲಿಷ್ಠವಾಗಿದೆ. ನಮ್ಮ ಸರ್ಕಾರ ನಿಮ್ಮ (ನೌಕರರ) ಪರವಾಗಿದೆ. ಖಾಸಗೀಕರಣ ವಿಚಾರಕ್ಕೆ ಸಂಬಂಧಿಸಿದಂತೆ ಸೂಕ್ತ ನಿರ್ದೇಶನ ನೀಡಲಾಗಿದ್ದು, ಅದರಂತೆ ಎಸ್ಕಾಂಗಳು ಕೆಇಆರ್ ಸಿ ಮುಂದೆ ಆಕ್ಷೇಪಣೆ ಸಲ್ಲಿಸಿವೆ. ನಾವು ಯಾವುದೇ ಖಾಸಗಿ ಕಂಪನಿಗೆ ಕಡಿಮೆ ಇಲ್ಲ. ನೌಕರರು ಮತ್ತು ಅಧಿಕಾರಿಗಳ ಬೇಡಿಕೆಗಳಿಗೆ ಸ್ಪಂದಿಸಲಿದ್ದೇವೆ. ಮುಂದಿನ ದಿನಗಳಲ್ಲಿ ಸಚಿವ ಸಂಪುಟದಲ್ಲಿ ಚರ್ಚಿಸಿ ಸೂಕ್ತ ಕ್ರಮ ಜರುಗಿಸಲಾಗುವುದು. ನಾವು ರಾಜ್ಯದ ಸೇವೆ ಮಾಡಲು ಬಂದವರು. ಇಲ್ಲಿ ಖಾಸಗೀಕರಣ ವಿಚಾರ ಬರುವುದಿಲ್ಲ," ಎಂದು ಸ್ಪಷ್ಟಪಡಿಸಿದರು.

"ಇಂಧನ ಇಲಾಖೆ ಈಗಾಗಲೇ ದೂರದೃಷ್ಟಿಯ ಯೋಜನೆಗಳನ್ನು ಸಿದ್ಧಪಡಿಸಿದೆ, ಮುಂದಿನ 25 ವರ್ಷಗಳ ಅವಧಿಗೆ ವಿದ್ಯುತ್ ಭ್ರದತೆ ಒದಗಿಸಲು ಯೋಜನೆ ಸಿದ್ಧವಾಗಿದೆ. ರೈತರ ಜತೆಗೆ 10,000 ಎಕರೆಯಲ್ಲಿ ಸೌರ ಪಾರ್ಕ್ ಮಾಡಿದ್ದೇವೆ. ರೈತರು ಇನ್ನೂ 10,000 ಎಕರೆ ಕೊಡಲು ಮುಂದೆ ಬಂದಿದ್ದಾರೆ. ವಿದ್ಯುತ್ ಉತ್ಪಾದನೆ ಅತ್ಯುತ್ತಮವಾಗಿದೆ. ಪೀಕ್ ಅವರ್ ವಿದ್ಯುತ್ ಮಾರಾಟವನ್ನು ಹೆಚ್ಚಿಸಿರುವುದರಿಂದ ಇಲಾಖೆಗೆ ಲಾಭವಾಗಿದೆ. ವಿನಿಮಯ ಆಧಾರದ ಮೇಲೆ ವಿದ್ಯುತ್ ಪಡೆಯುವುದು ಮತ್ತು ದೀರ್ಘಾವಧಿ ಒಪ್ಪಂದಗಳ ಮೂಲಕ ವಿದ್ಯುತ್ ಖರೀದಿ ಮೂಲಕ ಇಂಧನ ಭದ್ರತೆಗೆ ಕ್ರಮ ವಹಿಸಲಾಗಿದೆ," ಎಂದರು.

"ಗೃಹಜ್ಯೋತಿ ಮೂಲಕ 1.67 ಕೋಟಿ ಗ್ರಾಹಕರಿಗೆ ಉಚಿತ ವಿದ್ಯುತ್ ಕೊಟ್ಟಿದ್ದೇವೆ. ಇದಕ್ಕಾಗಿ ಬಜೆಟ್ ನಲ್ಲೇ ಅನುದಾನ ನೀಡಲಾಗಿದೆ. ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ಪೂರೈಸಲು 21,000 ಕೋಟಿ ರೂ. ಅನುದಾನ ಕೊಡುತ್ತಿದ್ದೇವೆ. ನಮ್ಮ ಅಧಿಕಾರಿಗಳು, ಇಂಜಿನಿಯರ್ ಮತ್ತು ನೌಕರರು ತಂಡವಾಗಿ ಕೆಲಸ ಮಾಡುತ್ತಿದ್ದಾರೆ. ಯಾವುದೇ ಸಮಸ್ಯೆ ಎದುರಾದರೆ ಶೀಘ್ರವೇ ಪರಿಹಾರ ನೀಡಲಿದ್ದಾರೆ," ಎಂದು ಹೇಳಿದರು.

"ಇಂಧನ ಇಲಾಖೆಯಲ್ಲಿ ಮೂಲ ಸೌಕರ್ಯ ಹೆಚ್ಚಿಸುವ ಕಾರ್ಯ ವೇಗವಾಗಿ ನಡೆಯುತ್ತಿದೆ. 120 ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಿದ್ದೇವೆ ಎಂದರು.

# 'ಪಲ್ಸ್ ಪೋಲಿಯೊ ಹನಿ ಮಕ್ಕಳನ್ನು ಶಾಶ್ವತ ಅಂಗವೈಕಲ್ಯದಿಂದ ರಕ್ಷಿಸುತ್ತದೆ'

ವಿಜಯಪುರ

ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲ ಮಕ್ಕಳಿಗೂ ಪಲ್ಸ್ ಪೋಲಿಯೊ ಹನಿಗಳನ್ನು ಕಡ್ಡಾಯವಾಗಿ ಹಾಕಿಸುವ ಮೂಲಕ ಅವರನ್ನು ಶಾಶ್ವತ ಅಂಗವೈಕಲ್ಯದಿಂದ ರಕ್ಷಿಸಿ ಆರೋಗ್ಯವಂತ ಸಮಾಜ ನಿರ್ಮಿಸಬೇಕು ಎಂದು ಕೋರಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷ ಸಿ.ದೇವರಾಜ್ ಕರೆ ನೀಡಿದರು.

ವಿಜಯಪುರ ಹೋಬಳಿಯ ದಂಡಿಗಾನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಆಯೋಜಿಸಿದ್ದ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಮಕ್ಕಳಿಗೆ ಹನಿ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪೋಲಿಯೊಮೈಲೈಟಿಸ್ ವೈರಸ್ ಮಕ್ಕಳ ನರಮಂಡಲದ ಮೇಲೆ ದಾಳಿ ಮಾಡಿ ಕೈಕಾಲುಗಳ ಸ್ವಾಧೀನ ಕಳೆದುಕೊಳ್ಳುವಂತೆ ಮಾಡುತ್ತದೆ. ಒಮ್ಮೆ ಸೋಂಕು ತಗುಲಿದರೆ ಜೀವನಪೂರ್ತಿ ಅಂಗವೈಕಲ್ಯ ಕಾಡುವ ಸಾಧ್ಯತೆ ಇದೆ. ಇದಕ್ಕೆ ನಿರ್ದಿಷ್ಟ ಚಿಕಿತ್ಸೆ ಇಲ್ಲದ ಕಾರಣ ಮುನ್ನೆಚ್ಚರಿಕೆಯಾಗಿ ಲಸಿಕೆ ಹಾಕಿಸುವುದೇ ಅತ್ಯುತ್ತಮ ರಕ್ಷಣೆ ಎಂದು ತಿಳಿಸಿದರು.



ಪಲ್ಸ್ ಪೋಲಿಯೊ ಹನಿಗಳು ಮಗುವಿನ ದೇಹದಲ್ಲಿ ರೋಗನಿರೋಧಕ ಶಕ್ತಿ ಬೆಳೆಸುವ ಮೂಲಕ ಪೋಲಿಯೊ ವೈರಸ್ ವಿರುದ್ಧ ಶೇ.99ರಷ್ಟು ರಕ್ಷಣೆ ನೀಡುತ್ತವೆ. ವೈರಸ್ ಉಸಿರಾಟದ ಸ್ನಾಯುಗಳ ಮೇಲೆ ದಾಳಿ ಮಾಡಿದರೆ ಮಗುವಿನ ಜೀವಕ್ಕೂ ಅಪಾಯ ಉಂಟಾಗಬಹುದು. ಆದ್ದರಿಂದ ಯಾವುದೇ ಮೂಢನಂಬಿಕೆಗಳಿಗೆ ಒಳಗಾಗದೆ ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೊ ಹನಿಗಳನ್ನು ಹಾಕಿಸಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯೆ ಮಂಜುಳಾ ಅಂಬರೀಶ್, ಸಮುದಾಯ ಆರೋಗ್ಯ ಅಧಿಕಾರಿ ಮಮತ, ಅಂಗನವಾಡಿ ಕಾರ್ಯಕರ್ತೆ ಮೇರಿ, ಪೋಷಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಉಪೇಕ್ಷಿತ ವಚನಗಾರ್ತಿಯರ ಕೊಡುಗೆ ಅನನ್ಯ: ಎಂ.ಗಿರಿಜಾಂಬ ರುದ್ರೇಶಮೂರ್ತಿ

ವಿಜಯಪುರ

12ನೇ ಶತಮಾನದ ವಚನ ಸಾಹಿತ್ಯ ಚಳವಳಿ ಕೇವಲ ಧಾರ್ಮಿಕ ಕ್ರಾಂತಿಯಲ್ಲ, ಸಮಾನತೆ, ಮಾನವೀಯತೆ ಮತ್ತು ನೈತಿಕ ಮೌಲ್ಯಗಳನ್ನು ಪ್ರತಿಪಾದಿಸಿದ ಜಗತ್ತಿನ ಮೊದಲ ಸಾಮಾಜಿಕ ಆಂದೋಲನವಾಗಿದೆ ಎಂದು ಶಿಕ್ಷಕಿ ಎಂ. ಗಿರಿಜಾಂಬ ರುದ್ರೇಶಮೂರ್ತಿ ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ನಗರೇಶ್ವರಸ್ವಾಮಿ ದೇವಾಲಯದ ಪ್ರಾರ್ಥನಾ ಮಂದಿರದಲ್ಲಿ ಶ್ರೀ ವೀರಭದ್ರಸ್ವಾಮಿ ಗೋಷ್ಠಿ ಹಾಗೂ ಅಕ್ಕನ ಬಳಗ ಸೇವಾ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಶಿವಾನುಭವ ಗೋಷ್ಠಿ ಕಾರ್ಯಕ್ರಮದಲ್ಲಿ 'ಉಪೇಕ್ಷಿತ ವಚನಗಾರ್ತಿಯರು ಮತ್ತು ಅವರ ಕೊಡುಗೆ' ವಿಷಯದ ಕುರಿತು ಉಪನ್ಯಾಸ ನೀಡಿದ ಅವರು, ವಚನ ಸಾಹಿತ್ಯದ ಸಾಮಾಜಿಕ ಹಾಗೂ ಸಾಂಸ್ಕೃತಿಕ ಮಹತ್ವವನ್ನು ವಿವರಿಸಿದರು.

ಶರಣರ ವಚನ ಚಳವಳಿಯು ಜಾತಿ, ಧರ್ಮ ಮತ್ತು ಲಿಂಗ ತಾರತಮ್ಯಗಳನ್ನು



ಪ್ರಶ್ನಿಸಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಭಿವ್ಯಕ್ತಿ ಸ್ವಾತಂತ್ರ್ಯ ನೀಡಿತು. ಕಾಯಕ ಮತ್ತು ದಾಸೋಹ ತತ್ವಗಳು ಶ್ರಮದ ಗೌರವವನ್ನು ಎತ್ತಿಹಿಡಿದರೆ, ಸತ್ಯ, ಪ್ರಾಮಾಣಿಕತೆ, ಕರುಣೆ ಹಾಗೂ ಸದಾಚಾರದಂತಹ ಮೌಲ್ಯಗಳು ಇಂದಿನ ಸಮಾಜಕ್ಕೂ ದಾರಿದೀಪವಾಗಿವೆ ಎಂದು ಅವರು ಹೇಳಿದರು.

ಮುಖ್ಯವಾಹಿನಿಯ ಇತಿಹಾಸದಲ್ಲಿ ಹೆಚ್ಚು ಪ್ರಸ್ತಾಪವಾಗದ ಅನೇಕ ಶಿವಶರಣೆಯರು ಸಮಾಜ ಸುಧಾರಣೆಗೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಅಕ್ಕಮಹಾದೇವಿ ಹಾಗೂ ನೀಲಾಂಬಿಕೆಯವರಷ್ಟೇ ಅಲ್ಲದೆ, ಆಯ್ದಕ್ಕಿ ಲಕ್ಕಮ್ಮ, ಗೊಗ್ಗವ್ವೆ, ಸೂಳೆ ಸಂಕವ್ವೆ, ಕಾಳವ್ವೆ ಸೇರಿದಂತೆ ಹಲವು ವಚನಗಾರ್ತಿಯರು ತಮ್ಮ ವಚನಗಳ ಮೂಲಕ ಸಾಮಾಜಿಕ ಅನಿಷ್ಟಗಳು, ಮೂಢನಂಬಿಕೆಗಳು ಹಾಗೂ ಪುರುಷ ಪ್ರಧಾನ ವ್ಯವಸ್ಥೆಯನ್ನು ಧೈರ್ಯವಾಗಿ ಪ್ರಶ್ನಿಸಿದ್ದರು ಎಂದು ಗಿರಿಜಾಂಬ ರುದ್ರೇಶಮೂರ್ತಿ ಉದಾಹರಣೆಗಳೊಂದಿಗೆ ವಿವರಿಸಿದರು.

ಶರಣೆಯರ ವಚನಗಳಲ್ಲಿ ಸ್ತ್ರೀ ಸ್ವಾಭಿಮಾನ, ಆತ್ಮಗೌರವ, ಸಾಮಾಜಿಕ ಸುಧಾರಣೆ ಮತ್ತು ಆರ್ಥಿಕ ಸ್ವಾವಲಂಬನೆಯ ಸಂದೇಶಗಳು ಅಡಕವಾಗಿದ್ದು, ಅವರ ವೈಚಾರಿಕ ಪ್ರಜ್ಞೆ ಇಂದಿನ ಮಹಿಳಾ ಸಮುದಾಯಕ್ಕೂ ಸ್ಫೂರ್ತಿದಾಯಕವಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ವೀರಭದ್ರಸ್ವಾಮಿ ಗೋಷ್ಠಿ ಅಕ್ಕನ ಬಳಗ ಸೇವಾ ಟ್ರಸ್ಟ್ ಅಧ್ಯಕ್ಷ ವಿ. ಅನಿಲ್ ಕುಮಾರ್ ಮಾತನಾಡಿ, ವಚನ ಸಾಹಿತ್ಯದ ಆಳವಾದ ಅಧ್ಯಯನ ಇಂದಿನ ಯುವಜನತೆಗೆ ಅತ್ಯಗತ್ಯವಾಗಿದೆ. ಉತ್ತಮ ಬದುಕು ಕಟ್ಟಿಕೊಳ್ಳಲು ಹಾಗೂ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಶರಣರ ವಚನಗಳು ಮಾರ್ಗದರ್ಶಿಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ವಚನ ಬಳಗದ ಭಾನು ಶಿವಕುಮಾರ್ ಸೇರಿದಂತೆ ಹಲವರು ವಚನ ಗಾಯನ ನಡೆಸಿದರು. ಇದೇ ವೇಳೆ ದಿವಂಗತ ವಿ. ಅಕ್ಕಯ್ಯಮ್ಮ ಹಾಗೂ ಕೆ. ಚಿಕ್ಕಗುಬ್ಬಣ್ಣ ಅವರನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಗೋಷ್ಠಿ ಬಳಗದ ಕಾರ್ಯದರ್ಶಿ ಮ. ಸುರೇಶ್‌ಬಾಬು, ಅನಿತಾ ಸುಮಂತ್, ಕೃಷ್ಣಾನಂದ್, ಅಂಬಾಭವಾನಿ, ಮಹದೇವಮ್ಮ, ವಿಮಲಾಂಬ, ಮೀನಾ ಸುರೇಶ್, ದಾಕ್ಷಾಯಿಣಮ್ಮ, ಮ. ಜಯದೇವ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಚಂದ್ರಶೇಖರ ಹಡಪದ್, ಮಾಜಿ ಅಧ್ಯಕ್ಷ ಎಚ್.ಎಸ್. ರುದ್ರೇಶಮೂರ್ತಿ, ಬಿ. ಪುಟ್ಟರಾಜಣ್ಣ, ವಿ.ಆರ್. ಮಹದೇವ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ಶಿಕ್ಷಕಿ ಎಂ. ಗಿರಿಜಾಂಬ ರುದ್ರೇಶಮೂರ್ತಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಶಾಂತಿನಗರ ಶ್ರೀ ವೆಂಕಟರಮಣಸ್ವಾಮಿ ಬ್ರಹ್ಮೋತ್ಸವ ಸಂಭ್ರಮ

ಬಂಗಾರಪೇಟೆ

ಬಂಗಾರಪೇಟೆ ನಗರದ ಶಾಂತಿನಗರ ಬಡಾವಣೆಯ ಶ್ರೀ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ನಡೆದ ಬ್ರಹ್ಮೋತ್ಸವ ಮಹೋತ್ಸವ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದ ವಾತಾವರಣದಲ್ಲಿ ಅದ್ದೂರಿಯಾಗಿ ನೆರವೇರಿತು. ಮೂರು ದಿನಗಳ ಕಾಲ ನಡೆದ ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ನೂರಾರು ಭಕ್ತರು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು.

ಬ್ರಹ್ಮೋತ್ಸವದ ಅಂಗವಾಗಿ ವಿಶೇಷ ಪೂಜೆ, ಕಲ್ಯಾಣೋತ್ಸವ, ವೈಭವದ ರಥೋತ್ಸವ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳನ್ನು ಶ್ರೀ ವೆಂಕಟೇಶ್ವರ ಸ್ವಾಮಿ ಸೇವಾ ಟ್ರಸ್ಟ್ ಹಾಗೂ ದೇವಸ್ಥಾನದ ಅಭಿವೃದ್ಧಿ ಸಮಿತಿಯ ವತಿಯಿಂದ ಆಯೋಜಿಸಲಾಗಿತ್ತು. ಶಾಂತಿನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ಶ್ರೀ ವೆಂಕಟರಮಣಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಭಾಗವಹಿಸಿದರು.

ಉತ್ಸವದ ಪ್ರಮುಖ ಆಕರ್ಷಣೆಯಾಗಿದ್ದ ರಥೋತ್ಸವವು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ವಿಜೃಂಭಣೆಯಿಂದ ನಡೆಯಿತು. ಭಜನೆ, ಮಂಗಳವಾದ್ಯ ಹಾಗೂ ಭಕ್ತರ ಜಯಘೋಷಗಳ ನಡುವೆ ಸಾಗಿದ ರಥೋತ್ಸವದಲ್ಲಿ ಭಕ್ತರು ಭಕ್ತಿಭಾವದಿಂದ ರಥವನ್ನು ಎಳೆದು ತಮ್ಮ ಸೇವಾಭಾವವನ್ನು ವ್ಯಕ್ತಪಡಿಸಿದರು. ರಥೋತ್ಸವದ ವೇಳೆ ಭಕ್ತರ ಸಂಭ್ರಮ ಮನೆ ಮಾಡಿತ್ತು.

ಬಳಿಕ ದೇವಸ್ಥಾನದಲ್ಲಿ ಭಕ್ತರಿಗೆ ಪ್ರಸಾದ ವಿತರಣೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಸಾವಿರಾರು ಭಕ್ತರು ಅನ್ನಸಂತರ್ಪಣೆಯಲ್ಲಿ ಭಾಗವಹಿಸಿ ಪ್ರಸಾದ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ವೆಂಕಟೇಶ್ವರ ಸ್ವಾಮಿ ಸೇವಾ ಟ್ರಸ್ಟ್‌ನ ಕಾರ್ಯಕಾರಿ ಸಮಿತಿ ಸದಸ್ಯರಾದ ಬಿ. ಶ್ರೀನಿವಾಸಲು, ರಾಜು ನಾಯ್ಡು, ಎಸ್. ವೆಂಕಟೇಶ್ (ಮಾಜಿ ಪುರಸಭೆ ಸದಸ್ಯ), ಮಧು, ಚಂದ್ರಪ್ಪ, ಎಂ.ಎಂ. ಮಂಜುನಾಥ್, ಹನುಮಂತ ರಾಜು, ಪಾನಿಪುರಿ ಮಂಜು, ಆದಿನಾರಾಯಣಪ್ಪ ಮೇಸ್ತ್ರಿ, ಪುಷ್ಪಮ್ಮ ಮುನಿಸ್ವಾಮಿ, ಚಂದ್ರಮೋಹನ್, ಪ್ರಸನ್ನಕುಮಾರ್, ಶ್ರೀರಾಮಪ್ಪ, ಜೈಪ್ರಕಾಶ್ ಲಾಯರ್, ಕೇಶವ ಟೆಕ್ಸೈಲ್, ನಾರಾಯಣಸ್ವಾಮಿ, ತಿಮ್ಮಯ್ಯ, ಲಕ್ಷ್ಮಣ್ ಸೇರಿದಂತೆ ಅನೇಕ ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

ದೇವಸ್ಥಾನದ ಪುರೋಹಿತರಾದ ಸುದರ್ಶನ್ ಅವರು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ ಬ್ರಹ್ಮೋತ್ಸವಕ್ಕೆ ವಿಶೇಷ ಮೆರುಗು ತಂದರು. ಭಕ್ತರ ಅಪಾರ ಭಾಗವಹಿಸುವಿಕೆಯಿಂದ ಬ್ರಹ್ಮೋತ್ಸವ ಯಶಸ್ವಿಯಾಗಿ ನೆರವೇರಿತು.

# ವಿಶೇಷ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಚಾಲನೆ



ತಿಪಟೂರು

"ಪಲ್ಸ್ ಪೋಲಿಯೋ ಎರಡು ಹನಿ ಅಮೃತವಾಗಿದ್ದು, ಪ್ರತಿ ಮಗುವಿನ ಆರೋಗ್ಯಕರ ಭವಿಷ್ಯದ ಭರವಸೆಯಾಗಿದೆ. ಪೋಲಿಯೋ ಮುಕ್ತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬ ಪೋಷಕರೂ ಸಹಕರಿಸಬೇಕು" ಎಂದು ಶಾಸಕ ಕೆ. ಷಡಕ್ಷರಿ ಕರೆ ನೀಡಿದರು.

ತಾಲೂಕಿನ ಈಚನೂರು ಗ್ರಾಮದ ಆಯುಷ್ಮಾನ್ ಆರೋಗ್ಯ ಕೇಂದ್ರದಲ್ಲಿ ಮೂರು ದಿನಗಳ ಕಾಲ ನಡೆಯಲಿರುವ ವಿಶೇಷ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಮಗುವಿಗೆ ಪೋಲಿಯೋ ಹನಿ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವು ತಾಲೂಕಿನಾದ್ಯಂತ ಮೂರು ದಿನಗಳ ಕಾಲ ನಡೆಯಲಿದ್ದು, ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಮನವಿ ಮಾಡಿದರು. ಪೋಲಿಯೋ ಮುಕ್ತ ಕರ್ನಾಟಕ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಈ ಅಭಿಯಾನ ಮಹತ್ವದ್ದಾಗಿದ್ದು, ಮಕ್ಕಳ ಆರೋಗ್ಯ ರಕ್ಷಣೆ ಮತ್ತು ಸುರಕ್ಷಿತ ಭವಿಷ್ಯಕ್ಕಾಗಿ ಪೋಷಕರು ಜಾಗೃತರಾಗಬೇಕು ಎಂದು ಹೇಳಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ಚನ್ನಕೇಶವ ಮಾತನಾಡಿ, ತಾಲೂಕಿನಾದ್ಯಂತ 88 ಲಸಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಬಸ್ ನಿಲ್ದಾಣ, ರೈಲು ನಿಲ್ದಾಣ ಸೇರಿದಂತೆ ಸಾರ್ವಜನಿಕರು ಹೆಚ್ಚು ಸೇರುವ ಸ್ಥಳಗಳಲ್ಲಿ ವಿಶೇಷ ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದೆ. ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ತೆರಳಿ ಅಭಿಯಾನವನ್ನು ಯಶಸ್ವಿಗೊಳಿಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುದರ್ಶನ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕವಿತಾ, ಆರೋಗ್ಯ ಇಲಾಖೆಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಮೂರು ದಿನಗಳ ವಿಶೇಷ ಪಲ್ಸ್ ಪೋಲಿಯೋ ಅಭಿಯಾನದಲ್ಲಿ ಪೋಷಕರು ಸಕ್ರಿಯವಾಗಿ ಭಾಗವಹಿಸಿ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವ ಮೂಲಕ ಪೋಲಿಯೋ ನಿರ್ಮೂಲನೆಗೆ ಕೈಜೋಡಿಸಬೇಕು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

# 28,242 ಮಕ್ಕಳಿಗೆ ಲಸಿಕೆ ಗುರಿ



ದೊಡ್ಡಬಳ್ಳಾಪುರ

ತಾಲ್ಲೂಕಿನಾದ್ಯಂತ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲ ಮಕ್ಕಳಿಗೆ ಪಲ್ಸ್ ಪೋಲಿಯೊ ಲಸಿಕೆ ನೀಡುವ ಅಭಿಯಾನಕ್ಕೆ ತಾಲ್ಲೂಕು ವೈದ್ಯಾಧಿಕಾರಿ ಚಾಲನೆ ನೀಡಿದರು.

ಈ ವರ್ಷದ ಅಭಿಯಾನದಡಿ ತಾಲ್ಲೂಕಿನ 153 ಲಸಿಕಾ ಕೇಂದ್ರಗಳಲ್ಲಿ ಒಟ್ಟು 28,242 ಮಕ್ಕಳಿಗೆ ಪಲ್ಸ್ ಪೋಲಿಯೊ ಹನಿಗಳನ್ನು ನೀಡುವ ಗುರಿಯನ್ನು ಆರೋಗ್ಯ ಇಲಾಖೆ ಹೊಂದಿದೆ.

ಲಸಿಕಾ ಕೇಂದ್ರಗಳಿಗೆ ಬರಲು ಸಾಧ್ಯವಾಗದ ಮಕ್ಕಳಿಗೂ ಲಸಿಕೆ ತಲುಪಿಸುವ ಉದ್ದೇಶದಿಂದ ಮೊಬೈಲ್ ಪಲ್ಸ್ ಪೋಲಿಯೊ ತಂಡಗಳನ್ನು ಸಹ ನಿಯೋಜಿಸಲಾಗಿದೆ.

ಇದರ ಭಾಗವಾಗಿ ಕೊನಘಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಎನ್. ಈರಣ್ಣ ಅವರ ನೇತೃತ್ವದಲ್ಲಿ, ದೂರವಾಣಿ ಮೂಲಕ ಮಾಹಿತಿ ಪಡೆದ ತಕ್ಷಣ ನಗರದ ಹೊರವಲಯದ ಇಂಪ್ರೋ ಸಿಟಿ 2 ಬಡಾವಣೆಗೆ ತೆರಳಿ ಸುಮಾರು 20ಕ್ಕೂ ಹೆಚ್ಚು ಮಕ್ಕಳಿಗೆ ಪಲ್ಸ್ ಪೋಲಿಯೊ ಲಸಿಕೆ ನೀಡಲಾಯಿತು.

# ಕೆಂಪೇಗೌಡರ ಜಾತ್ಯತೀತ ಪರಿಕಲ್ಪನೆ ಇಂದಿಗೂ ಆದರ್ಶ: ಸಂಸದ ಡಾ.ಕೆ.ಸುಧಾಕರ್

ದೊಡ್ಡಬಳ್ಳಾಪುರ

ವಿಶ್ವಮಾನವ ಸಂದೇಶವನ್ನು ಕುವೆಂಪು ಸಾರುವ ಮುನ್ನವೇ ಸುಮಾರು 500 ವರ್ಷಗಳ ಹಿಂದೆ ನಾಡಪ್ರಭು ಕೆಂಪೇಗೌಡರು ಜಾತಿ–ವರ್ಗಗಳ ಭೇದವಿಲ್ಲದೆ ಎಲ್ಲರನ್ನು ಒಗ್ಗೂಡಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯ ಮಾಡಿದ್ದರು. ಅವರ ಜಾತ್ಯತೀತ ಆಡಳಿತ ಹಾಗೂ ದೂರದೃಷ್ಟಿಯ ಪರಿಕಲ್ಪನೆ ಇಂದಿಗೂ ಆದರ್ಶವಾಗಿದೆ ಎಂದು ಸಂಸದ ಡಾ. ಕೆ. ಸುಧಾಕರ್ ಹೇಳಿದರು.

ನಗರದ ಒಕ್ಕಲಿಗರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡರ 517ನೇ ಜಯಂತೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾತಿ ಪದ್ಧತಿಯ ಮಿತಿಗಳನ್ನು ಮೀರಿ ವೃತ್ತಿ ಆಧಾರಿತ ಪೇಟೆಗಳನ್ನು ನಿರ್ಮಿಸಿ ಸಮಾನತೆಯ ಆಡಳಿತ ನೀಡಿದ ಕೆಂಪೇಗೌಡರು ಸಮಾಜ ನಿರ್ಮಾಣಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಬೆಂಗಳೂರು ಇಂದು ಜಾಗತಿಕ ನಗರವಾಗಿ ಬೆಳೆದಿರುವುದು ಕೆಂಪೇಗೌಡರ ದೂರದೃಷ್ಟಿಯ ಫಲವಾಗಿದೆ. ವಿಜ್ಞಾನ, ತಂತ್ರಜ್ಞಾನ ಹಾಗೂ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಬೆಂಗಳೂರು ಮುಂಚೂಣಿಯಲ್ಲಿದ್ದು, ಲಕ್ಷಾಂತರ ಯುವಕರಿಗೆ ಉದ್ಯೋಗ ಕಲ್ಪಿಸಿದೆ. ದೇಶದ ಐಟಿ ರಫ್ತಿನಲ್ಲಿ ಬೆಂಗಳೂರಿನ ಪಾಲು ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.



ನದಿಯಿಲ್ಲದ ಪ್ರದೇಶದಲ್ಲಿ ಸಾವಿರಾರು ಕೆರೆ–ಕಟ್ಟೆಗಳನ್ನು ನಿರ್ಮಿಸಿ ಬೆಂಗಳೂರಿಗೆ ನೀರಿನ ಭದ್ರತೆ ಕಲ್ಪಿಸಿದ ಕೆಂಪೇಗೌಡರ ದೂರದೃಷ್ಟಿಯೇ ನಗರ ನಿರ್ಮಾಣದ ಯಶಸ್ಸಿಗೆ ಕಾರಣವಾಗಿದೆ. ಅವರ ಆಡಳಿತದ ಮಾದರಿ ಇಂದಿನ ಪೀಳಿಗೆಗೆ ಪಾಠವಾಗಬೇಕು ಹಾಗೂ ಸಮಾಜ ಸಂಘಟಿತವಾಗಬೇಕು ಎಂದು ಅವರು ತಿಳಿಸಿದರು.

ಈ ವೇಳೆ ಮಾತನಾಡಿದ ಡಾ. ಸುಧಾಕರ್, ಪಕ್ಷಭೇದ ಮರೆತು ಒಕ್ಕಲಿಗ ಸಮುದಾಯದ ನಾಯಕ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿರುವುದು ಹೆಮ್ಮೆಯ ಸಂಗತಿ ಎಂದು ಅಭಿನಂದಿಸಿದರು. ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಮತ್ತು ನೀರಾವರಿ ಸೌಲಭ್ಯ ಕಲ್ಪಿಸುವ ಎತ್ತಿನಹೊಳೆ ಯೋಜನೆಯನ್ನು ಮುಂದಿನ ಎರಡು ವರ್ಷಗಳಲ್ಲಿ ಪೂರ್ಣಗೊಳಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿರುವುದಾಗಿ ಹೇಳಿದರು.

ಶಾಸಕ ಧೀರಜ್ ಮುನಿರಾಜು ಮಾತನಾಡಿ, ಗ್ರಾಮೀಣ ಸಮಾಜದಲ್ಲಿ ಸಾಮರಸ್ಯ ಮೂಡಿಸುವಲ್ಲಿ ಒಕ್ಕಲಿಗ ಸಮುದಾಯದ ಪಾತ್ರ ಮಹತ್ವದ್ದಾಗಿದೆ. ರೈತ ಸಮುದಾಯದ ಅಭಿವೃದ್ಧಿಗೆ ಕೆಂಪೇಗೌಡರು ಕೆರೆ–ಕಟ್ಟೆಗಳನ್ನು ನಿರ್ಮಿಸಿ, ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಶಾಶ್ವತ ಕೊಡುಗೆ ನೀಡಿದ್ದಾರೆ. ಅವರ ಆದರ್ಶಗಳನ್ನು ಇಂದಿನ ಯುವಜನತೆ ಅರಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ಆರ್.ಜಿ. ವೆಂಕಟಾಚಲಯ್ಯ ಅವರಿಗೆ ಸಂತಾಪ ಸೂಚಿಸಲಾಯಿತು. ಎಸ್ಎಸ್ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಗಳಿಸಿದ ಒಕ್ಕಲಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನಗರದ ನೆಲದ ಆಂಜನೇಯಸ್ವಾಮಿ ದೇವಸ್ಥಾನದಿಂದ ಒಕ್ಕಲಿಗರ ಭವನದವರೆಗೆ ನಾಡಪ್ರಭು ಕೆಂಪೇಗೌಡರ ಉತ್ಸವಮೂರ್ತಿಯನ್ನು ಬೆಳ್ಳಿ ರಥದಲ್ಲಿ ಕೂರಿಸಿ ವಿವಿಧ ಜಾನಪದ ಕಲಾತಂಡಗಳೊಂದಿಗೆ ಭವ್ಯ ಮೆರವಣಿಗೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಗಂಟಿಗಾನಹಳ್ಳಿ ಕೃಷ್ಣಪ್ಪ, ಟಿ. ವೆಂಕಟರಮಣಯ್ಯ, ಖ್ಯಾತ ವೈದ್ಯ ಡಾ. ಟಿ.ಎಚ್. ಅಂಜಿನಪ್ಪ, ಕೇಂದ್ರ ರೇಷ್ಮೆ ಮಂಡಳಿ ಮಾಜಿ ಅಧ್ಯಕ್ಷ ಕೆ.ಎಂ. ಹನುಮಂತರಾಯಪ್ಪ, ತಹಶೀಲ್ದಾರ್ ಮಲ್ಲಪ್ಪ ಕೆ. ಯರಗೋಳ, ನಗರಸಭೆ ಉಪಾಧ್ಯಕ್ಷ ಬಂತಿ ವೆಂಕಟೇಶ್, ಕೆಂಪೇಗೌಡ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಟಿ.ವಿ. ಲಕ್ಷ್ಮೀನಾರಾಯಣ, ಟಿಎಪಿಎಂಸಿಎಸ್ ಅಧ್ಯಕ್ಷ ಡಿ. ಸಿದ್ದರಾಮಯ್ಯ, ನಿರ್ದೇಶಕ ವಿಶ್ವಾಸ್ ಗೌಡ ಸೇರಿದಂತೆ ವಿವಿಧ ಗಣ್ಯರು, ಮುಖಂಡರು ಹಾಗೂ ಒಕ್ಕಲಿಗ ಸಮುದಾಯದ ಸದಸ್ಯರು ಭಾಗವಹಿಸಿದ್ದರು.

# 'ಶಾಸಕ ಪ್ರದೀಪ್ ಈಶ್ವರ್ ಮೇಲಿನ ಘಟನೆ ಖಂಡನೀಯ'

ಗುಡಿಬಂಡೆ

ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರ ಮೇಲೆ ನಡೆದಿರುವ ಅವಮಾನಕರ ಘಟನೆಗೆ ಯುವ ಕಾಂಗ್ರೆಸ್ ತೀವ್ರ ಖಂಡನೆ ವ್ಯಕ್ತಪಡಿಸಿದ್ದು, ಇಂತಹ ಘಟನೆಗಳು ಮರುಕಳಿಸಿದರೆ ಕಾನೂನು ಹೋರಾಟ ನಡೆಸುವುದಾಗಿ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಮೇಶ್ ಎಚ್ಚರಿಕೆ ನೀಡಿದ್ದಾರೆ.

ಪಟ್ಟಣದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಯುವ ಕಾಂಗ್ರೆಸ್ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಪ್ರದೀಪ್ ಈಶ್ವರ್ ಅವರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಪ್ರತಿನಿಧಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರ ಬೆಳವಣಿಗೆಯನ್ನು ಸಹಿಸದ ಕೆಲವರು ಉದ್ದೇಶಪೂರ್ವಕವಾಗಿ ಇಂತಹ ಕೃತ್ಯಗಳಿಗೆ ಮುಂದಾಗುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನಪ್ರತಿನಿಧಿಗಳಿಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವ ಹಾಗೂ ಪ್ರಶ್ನಿಸುವ ಹಕ್ಕಿದೆ. ವಿರೋಧ ಪಕ್ಷಗಳನ್ನು ಪ್ರಶ್ನಿಸಿದ ಕಾರಣಕ್ಕೆ ಶಾಸಕರನ್ನು ಅವಮಾನಿಸುವುದು ಅಥವಾ ದಾಳಿ ನಡೆಸುವುದು ಯಾವುದೇ ರೀತಿಯಲ್ಲೂ ಸಮರ್ಥನೀಯವಲ್ಲ. ಶಾಸಕ ಪ್ರದೀಪ್ ಈಶ್ವರ್ ಅವರೊಂದಿಗೆ ಯುವ ಕಾಂಗ್ರೆಸ್ ಸದಾ ನಿಲ್ಲಲಿದ್ದು, ಅವರು ಯಾವುದೇ ಕಾರಣಕ್ಕೂ ಎದೆಗುಂದುವ ಅಗತ್ಯವಿಲ್ಲ ಎಂದು ರಮೇಶ್ ಹೇಳಿದರು.




ಪಿಎಲ್‌ಡಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಪ್ರಕಾಶ್ ಮಾತನಾಡಿ, ಕೆಂಪೇಗೌಡ ಜಯಂತಿಯಂತಹ ಸರ್ಕಾರಿ ಕಾರ್ಯಕ್ರಮದಲ್ಲಿ ನಡೆದ ಘಟನೆ ಖಂಡನೀಯವಾಗಿದೆ. ರಾಜಕೀಯವನ್ನು ಚುನಾವಣೆ ಸಂದರ್ಭದಲ್ಲಿ ಮಾಡಬೇಕು. ಚುನಾವಣೆ ಮುಗಿದ ಬಳಿಕ ಕ್ಷೇತ್ರದ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಇಂತಹ ಘಟನೆಗಳು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುತ್ತವೆ ಎಂದು ಅಭಿಪ್ರಾಯಪಟ್ಟರು.

ಸಂವಿಧಾನಬದ್ಧವಾಗಿ ಪ್ರಶ್ನಿಸುವ ಹಕ್ಕು ಪ್ರತಿಯೊಬ್ಬ ನಾಗರಿಕನಿಗೂ ಇದ್ದು, ಭಿನ್ನಾಭಿಪ್ರಾಯಗಳನ್ನು ಹಿಂಸಾತ್ಮಕ ಅಥವಾ ಅವಮಾನಕಾರಿ ರೀತಿಯಲ್ಲಿ ವ್ಯಕ್ತಪಡಿಸುವುದು ಸರಿಯಲ್ಲ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಪುರಸಭೆ ಅಧ್ಯಕ್ಷ ವಿಕಾಸ್, ಹಿರಿಯ ಕಾಂಗ್ರೆಸ್ ಮುಖಂಡ ಕೃಷ್ಣೇಗೌಡ, ಯುವ ಕಾಂಗ್ರೆಸ್ ಮುಖಂಡರಾದ ಅಂಬರೀಶ್, ನವೀನ್ ರಾಜ್ ಕನ್ನಡಿಗ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪೋಲಿಯೋ: ಜಾಗೃತಿ ಅಭಿಯಾನ

ತುಮಕೂರು

ಪಲ್ಸ್ ಪೋಲಿಯೋ ಅಭಿಯಾನದ ಅಂಗವಾಗಿ ನಗರದ 18ನೇ ವಾರ್ಡಿನ ನಾಗರೀಕ ಮುಖಂಡರು ಜನಜಾಗೃತಿ ಮೂಡಿಸಿ ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸುವ ಕಾರ್ಯಕ್ರಮ ನಡೆಸಿದರು.

ಐದು ವರ್ಷದೊಳಗಿನ ಮಕ್ಕಳಿರುವ ಪೋಷಕರನ್ನು ಗುರುತಿಸಿ ಪೋಲಿಯೋ ಹನಿ ಹಾಕಿಸಲು ಅವರಲ್ಲಿ ಮನವಿ ಮಾಡಿದರು. ಶಾಂತಿನಗರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅಲ್ಲಿನ ವೈದ್ಯಾಧಿಕಾರಿ ಡಾ. ನಾಗಭೂಷಣ ನೇತೃತ್ವದ ಆರೋಗ್ಯ ಸಿಬ್ಬಂದಿ ಎಲ್ಲಾ ಮಕ್ಕಳಿಗೂ ಪೋಲಿಯೋ ಲಸಿಕೆ ಹಾಕಿದರು.

ಸ್ಥಳೀಯ ಮುಖಂಡರಾದ ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಕೆ.ವೇದಮೂರ್ತಿ, ಲಿಂಗರಾಜು, ಪರಮೇಶ್ವರ್, ಶಂಕರ್, ಕೇಬಲ್ ಮಂಜು, ಸೃಷ್ಟಿತ್ ಮೊದಲಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# 'ಇಷ್ಟಪಟ್ಟು ಓದಿದರೆ ಯಶಸ್ಸು ಖಚಿತ'

ಗುಡಿಬಂಡೆ

ವಿದ್ಯಾರ್ಥಿಗಳು ಓದನ್ನು ಕಷ್ಟಕರ ಕೆಲಸ ಎಂದು ಭಾವಿಸದೆ, ಆಸಕ್ತಿ ಮತ್ತು ಇಚ್ಛೆಯಿಂದ ಕಲಿಯಬೇಕು. ಇಷ್ಟಪಟ್ಟು ಓದಿದಾಗ ಮಾತ್ರ ಉತ್ತಮ ಸಾಧನೆ ಸಾಧ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ತಾಲೂಕಿನ ಕೊಂಡರೆಡ್ಡಿಹಳ್ಳಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಪ್ರಾದೇಶಿಕ ಅರಣ್ಯ ಇಲಾಖೆ, ಸಾಮಾಜಿಕ ಅರಣ್ಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ 5 ಲಕ್ಷಕ್ಕೂ ಅಧಿಕ ಗಿಡ ನೆಡುವ ಅಭಿಯಾನ ಹಾಗೂ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ಅನೇಕ ವಿದ್ಯಾರ್ಥಿಗಳು ಓದನ್ನು ಭಾರವೆಂದು ಭಾವಿಸಿ ಸಾಧನೆಯಿಂದ ದೂರವಾಗುತ್ತಿದ್ದಾರೆ. ಯಾವುದೇ ವಿಷಯವನ್ನು ಆಸಕ್ತಿ, ಪರಿಶ್ರಮ ಮತ್ತು ಛಲದಿಂದ ಅಭ್ಯಾಸ ಮಾಡಿದರೆ ಯಶಸ್ಸು ಖಚಿತ. ಮೊಬೈಲ್ ಮತ್ತು ಇಂಟರ್‌ನೆಟ್ ದುರ್ಬಳಕೆಯಿಂದ ಮಕ್ಕಳು ದಾರಿ ತಪ್ಪುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಹದಿಹರೆಯದಲ್ಲಿ ಪ್ರೀತಿ–ಪ್ರೇಮದ ಆಕರ್ಷಣೆಗೆ ಒಳಗಾಗಿ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳಬಾರದು ಎಂದು ಎಚ್ಚರಿಸಿದರು.



ವಿದ್ಯಾರ್ಥಿಗಳು ಕೆಟ್ಟ ಅಭ್ಯಾಸಗಳಿಂದ ದೂರವಿದ್ದು ಶಿಕ್ಷಣದತ್ತ ಗಮನಹರಿಸಬೇಕು. ಉತ್ತಮ ಶಿಕ್ಷಣದ ಮೂಲಕ ಜೀವನದಲ್ಲಿ ಉನ್ನತ ಸ್ಥಾನಕ್ಕೇರಿದರೆ ಮುಂದೊಂದು ದಿನ ತಾವೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ವ್ಯಕ್ತಿಗಳಾಗಬಹುದು ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಎಲ್ಲೋಡು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಬಳಿಕ ಎಲ್ಲೋಡು ಅರಣ್ಯ ಪ್ರದೇಶದಲ್ಲಿ ಗಿಡ ನೆಡುವ ಕಾರ್ಯಕ್ರಮ ಹಾಗೂ ಕೊಂಡರೆಡ್ಡಿಹಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ವೃಕ್ಷಾರೋಪಣೆಯೊಂದಿಗೆ ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಕೀಲರ ಸಂಘದ ಅಧ್ಯಕ್ಷ ಅಶ್ವತ್ಥ್ ರೆಡ್ಡಿ ವಹಿಸಿದ್ದರು.

ಈ ಸಂದರ್ಭದಲ್ಲಿ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಕಾಂತರಾಜ್, ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಸಿದ್ದಣ್ಣ ಬಿ. ಹಂದ್ರಾಳ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷೆ ಶಿಲ್ಪ ಬಿ., ಹಿರಿಯ ಶ್ರೇಣಿ ನ್ಯಾಯಾಧೀಶ ಪ್ರೇಮ್ ಕುಮಾರ್, ನ್ಯಾಯಾಧೀಶರಾದ ಮಹಾಲಕ್ಷ್ಮೀ ಮತ್ತು ವರುಣ್ ರಾಜ್ ಆರ್., ತಹಶೀಲ್ದಾರ್ ಸಿಗ್ಬತ್ ಉಲ್ಲಾ, ಕಾರ್ಯನಿರ್ವಹಣಾಧಿಕಾರಿ ನಾಗಮಣಿ, ಆರೋಗ್ಯಾಧಿಕಾರಿ ಡಾ. ಅಕ್ಷಯ್ ಶ್ರೀನಿವಾಸ್, ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ರಾಜಶೇಖರ್, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ದಲಿತರಿಂದ ಮಲಗುಂಡಿ ಸ್ವಚ್ಛಗೊಳಿಸಿದ ಕೃತ್ಯಕ್ಕೆ ಖಂಡನೆ

ತುಮಕೂರು

ನಗರದ ಕೆಇಬಿ ಇಂಜಿನಿಯರ್ಸ್ ಅಸೋಸಿಯೇಷನ್ ಆವರಣದಲ್ಲಿ ಅಮಾಯಕ ದಲಿತ ಕಾರ್ಮಿಕರಿಂದ ಮಲಗುಂಡಿ ಸ್ವಚ್ಛ ಮಾಡಿಸಿದ ಹೇಯ ಕೃತ್ಯ ನಡೆದಿದೆ. ದಲಿತ ಸಮುದಾಯದಿಂದ ಮುಖ್ಯಮಂತ್ರಿ ಆಗಲು ಹೊರಟಿರುವ ಉಪ ಮುಖ್ಯಮಂತ್ರಿ ಪರಮೇಶ್ವರ್ ಅವರು ಇದೂವರೆಗೆ ಈ ಘಟನೆ ಬಗ್ಗೆ ಒಂದು ಹೇಳಿಕೆ ನೀಡಿಲ್ಲ, ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಂಡಿಲ್ಲ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಹಾಗೂ ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷ ವೈ.ಹೆಚ್. ಹುಚ್ಚಯ್ಯ ಟೀಕಿಸಿದರು.

ಮಲ ಬಾಚಿಸಿರುವ ಕೆಇಬಿ ಅಸೋಸಿಯೇಷನ್ ಪದಾಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಜಿಲ್ಲಾ ಬಿಜೆಪಿ ಎಸ್.ಸಿ. ಮೋರ್ಚಾದಿಂದ ಸೋಮವಾರ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ವೈ.ಹೆಚ್. ಹುಚ್ಚಯ್ಯ, ದಲಿತರ ಕೈಯ್ಯಲ್ಲಿ ಮಲ ಎತ್ತಿಸಿದ ಕೃತ್ಯ ಖಂಡನೀಯ. ದಲಿತರ ಹೆಸರಿನಲ್ಲಿ ಅಧಿಕಾರಕ್ಕೆ ಬಂದಿರುವ, ಇದೇ ಸಮುದಾಯದಿಂದ ಮುಖ್ಯಮಂತ್ರಿ ಆಗಲು ಹೊರಟಿರುವ, ದಲಿತರ ರಕ್ಷಣೆ ಮಾಡುವಲ್ಲಿ ವಿಫಲರಾದ ಜಿಲ್ಲಾ ಉಸ್ತುವಾರಿ ಸಚಿವ ಪರಮೇಶ್ವರ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಹಿಂದೆ ಪೌರಾಡಳಿತ ಸಚಿವರಾಗಿದ್ದ ಬಸವಲಿಂಗಪ್ಪ ಅವರು ಮಲಹೊರುವ ಪದ್ಧತಿ ನಿಷೇಧ ಕಾನೂನು ಜಾರಿಗೆ ಕಾರಣರಾಗಿದ್ದರು. ಡಿಸಿಎಂ ಡಾ.ಪರಮೇಶ್ವರ್ ಅವರು ಬಸವಲಿಂಗಪ್ಪ ಅವರಂತೆ ದಲಿತರ ಪರ ಕ್ರಾಂತಿಕಾರಿ ಕಾರ್ಯಕ್ರಮಗಳನ್ನು ಮಾಡುವ ಬಗ್ಗೆ ಯಾವತ್ತೂ ಕಾಳಜಿವಹಿಸಿಲ್ಲ ಎಂದು ಎಂದು ಆರೋಪಿಸಿದರು.

ಅಮಾನವೀಯವಾದ ಮಲ ಹೊರುವ ಪದ್ಧತಿ ನಿಷೇಧವಿದ್ದರೂ ಜಾರಿಯಲ್ಲಿದ್ದರೂ ತುಮಕೂರು ಕೆ.ಇ.ಬಿ ಇಂಜಿನಿಯರ್ಸ್ ಅಸೋಸಿಯೇಷನ್ ಆವರಣದಲ್ಲಿ ಅಮಾಯಕ ಕಾರ್ಮಿಕರಿಂದ ಮಲ ಬಾಚಿಸಿರುವ ಆರೋಪಿಗಳನ್ನು ಕೂಡಲೇ ಬಂಧಿಸಿ ಮತ್ತೆಂದು ಇಂತಹ ಘಟನೆಗಳು ಪುನರಾವರ್ತನೆಯಾಗದಂತೆ ಕ್ರಮ ತೆಗೆದುಕೊಳ್ಳಬೇಕು. ಸಂತ್ರಸ್ತ ಕಾರ್ಮಿಕರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ವೈ.ಹೆಚ್. ಹುಚ್ಚಯ್ಯ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಬಿಜೆಪಿ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಬ್ಯಾಟರಂಗೇಗೌಡ, ಮುಖಂಡ ಎಸ್.ಪಿ ಚಿದಾನಂದ್ ಅವರು, ಸ್ಮಾರ್ಟ್ ಸಿಟಿ ತುಮಕೂರಿನಲ್ಲಿ ಇಂತಹ ನಿಷೇಧಿತ ಹಾಗೂ ಅಮಾನವೀಯವಾದಂತಹ ಘಟನೆ ಸುಶಿಕ್ಷಿತರಿಂದ ಜರುಗಿರುವುದು ಆಘಾತಕಾರಿ ವಿಷಯ. ಮಲಹೊರುವ ಪದ್ಧತಿಯನ್ನು ಪೋಷಿಸುವ ಇಂತಹ ಸಮಾಜಘಾತುಕರಿಗೆ ಕಾನೂನಿನ ಅಡಿಯಲ್ಲಿ ಶಿಕ್ಷಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಪರಿಶಿಷ್ಟ ಜಾತಿ ಮೋರ್ಚಾ ಜಿಲ್ಲಾಧ್ಯಕ್ಷ ವೈ. ಹೆಚ್. ರವಿಚಂದ್ರ ಮಾತನಾಡಿ, ನಗರದ ಹೃದಯ ಭಾಗದಲ್ಲಿರುವ ಕೆ.ಇ.ಬಿ ಅಸೋಸಿಯೇಷನ್ ಆವರಣದಲ್ಲಿದ್ದ ಶೌಚಗುಂಡಿಯನ್ನು ತುಮಕೂರಿನ ನಂದೀಶ್, ಅರುಣ್, ಮಧುಗಿರಿಯ ಮೂರ್ತಿ ನಾಯ್ಕ ಹಾಗೂ ನವೀನ್ ಎಂಬ ಕಾರ್ಮಿಕರಿಂದ ಕೆಇಬಿ ಅಸೋಷಿಯೇಷನ್ ಪದಾಧಿಕಾರಿಗಳು ಸ್ವಚ್ಛ ಮಾಡಿಸಿದ್ದಾರೆ.

ಕಾರ್ಮಿಕರ ಬಡತನದ ಹಾಗೂ ಹಸಿವಿನ ದುರ್ಲಾಭ ಪಡೆದು ಮಲವನ್ನು ಬರಿಗೈನಲ್ಲಿ ಬಾಚಿಸಿ ಟ್ರಾಕ್ಟರ್‌ಗೆ ತುಂಬಿಸಿದ್ದಾರೆ. ಇದೊಂದು ಅಮಾನವೀಯ, ಕಾನೂನು ಬಾಹಿರ, ನಾಗರೀಕ ಸಮಾಜ ತಲೆ ತಗ್ಗಿಸುವಂತಹ ಹಾಗೂ ವ್ಯಕ್ತಿಗೌರವಕ್ಕೆ ಚ್ಯುತಿ ತರಿಸುವಂತಹ ದುರ್ಘಟನೆಯಾಗಿದೆ ಎಂದರು.

# 'ಶಾಸಕ ಪ್ರದೀಪ್ ಈಶ್ವರ್ ನಡೆ–ನುಡಿಯಲ್ಲಿ ಬದಲಾವಣೆ ತರಬೇಕು'

ಶಿಡ್ಲಘಟ್ಟ

ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ಅವರ ಭಾಷಣಕ್ಕೆ ಅಡ್ಡಿಪಡಿಸಿದ್ದು, ಘೋಷಣೆ ಕೂಗಿದ್ದು ಹಾಗೂ ಅವರ ವಾಹನದತ್ತ ಚಪ್ಪಲಿ ಎಸೆದಿರುವ ಘಟನೆ ಖಂಡನೀಯವಾಗಿದೆ. ಈ ಕೃತ್ಯದೊಂದಿಗೆ ಒಕ್ಕಲಿಗ ಸಮುದಾಯಕ್ಕೆ ಯಾವುದೇ ಸಂಬಂಧವಿಲ್ಲ ಎಂದು ರಾಜ್ಯ ಒಕ್ಕಲಿಗರ ಒಕ್ಕೂಟ ಕರ್ನಾಟಕದ ರಾಜ್ಯ ಉಪಾಧ್ಯಕ್ಷ ಪೂಲಕುಂಟಹಳ್ಳಿ ರಘುನಾಥರೆಡ್ಡಿ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ರಾಜ್ಯ ಒಕ್ಕಲಿಗರ ಒಕ್ಕೂಟದ ಪದಾಧಿಕಾರಿಗಳೊಂದಿಗೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಪ್ರದೀಪ್ ಈಶ್ವರ್ ಅವರಿಗೆ ವೈಯಕ್ತಿಕವಾಗಿ ವಿರೋಧ ಹೊಂದಿರುವ ಕೆಲ ಕಿಡಿಗೇಡಿಗಳು ಹಾಗೂ ಒಕ್ಕಲಿಗ ಸಮುದಾಯಕ್ಕೆ ಕೆಟ್ಟ ಹೆಸರು ತರುವ ಉದ್ದೇಶದಿಂದ ಈ ಕೃತ್ಯ ಎಸಗಿದ್ದಾರೆ ಎಂದು ಆರೋಪಿಸಿದರು. ತಪ್ಪಿತಸ್ಥರ ವಿರುದ್ಧ ಪೊಲೀಸ್ ಇಲಾಖೆ ಕಾನೂನು ಕ್ರಮ ಕೈಗೊಳ್ಳುವುದಕ್ಕೆ ತಮ್ಮ ಯಾವುದೇ ವಿರೋಧವಿಲ್ಲ ಎಂದರು.

ನಾಡಪ್ರಭು ಕೆಂಪೇಗೌಡರು ಕೇವಲ ಒಕ್ಕಲಿಗ ಸಮುದಾಯಕ್ಕೆ ಮಾತ್ರವಲ್ಲ, ಇಡೀ ರಾಜ್ಯ ಮತ್ತು ದೇಶಕ್ಕೆ ಹೆಮ್ಮೆಯ ವ್ಯಕ್ತಿತ್ವ. ಅವರ ಜಯಂತಿ ಕಾರ್ಯಕ್ರಮದಲ್ಲಿ ನಡೆದ ಅಹಿತಕರ ಘಟನೆಗೆ ರಾಜ್ಯ ಒಕ್ಕಲಿಗರ ಒಕ್ಕೂಟ ವಿಷಾದ ವ್ಯಕ್ತಪಡಿಸುತ್ತದೆ. ಕಾರ್ಯಕ್ರಮಕ್ಕೆ ಆಹ್ವಾನಿತರಾಗಿದ್ದ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ನಡೆದ ಅವಮಾನಕ್ಕೂ ವಿಷಾದ ವ್ಯಕ್ತಪಡಿಸುತ್ತೇವೆ ಎಂದು ಹೇಳಿದರು.

ಆದರೆ ಶಾಸಕ ಪ್ರದೀಪ್ ಈಶ್ವರ್ ಅವರು ತಮ್ಮ ಸಾರ್ವಜನಿಕ ಹೇಳಿಕೆಗಳು ಮತ್ತು ನಡೆ–ನುಡಿಗಳ ಮೂಲಕ ಶಾಸಕ ಸ್ಥಾನಕ್ಕೆ ಗೌರವ ತರುವ ರೀತಿಯಲ್ಲಿ ವರ್ತಿಸಬೇಕು. ಅವರಿಗೆ ಎಲ್ಲ ಜಾತಿ–ಧರ್ಮಗಳ ಮತದಾರರು ಮತ ನೀಡಿ ಆಯ್ಕೆ ಮಾಡಿದ್ದಾರೆ. ಆದ್ದರಿಂದ ಎಲ್ಲರ ಭಾವನೆಗಳಿಗೆ ಗೌರವ ನೀಡುವ ಜವಾಬ್ದಾರಿ ಅವರ ಮೇಲಿದೆ ಎಂದು ಹೇಳಿದರು.



ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಮಾತನಾಡುವಾಗ ಸಂಯಮ ಮತ್ತು ಪ್ರಜ್ಞೆಯಿಂದ ವರ್ತಿಸಬೇಕು. ಅನುಭವಿಗಳ ಕುರಿತು ಅಗೌರವದ ಹೇಳಿಕೆ ನೀಡುವುದು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ಚಿಕ್ಕಬಳ್ಳಾಪುರ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರಾದ ಎಸ್.ಎನ್. ಸುಬ್ಬಾರೆಡ್ಡಿ, ಡಾ. ಎಂ.ಸಿ. ಸುಧಾಕರ್ ಹಾಗೂ ಎನ್.ಎಚ್. ಶಿವಶಂಕರರೆಡ್ಡಿ ಅವರ ಸಹಕಾರದಿಂದ ಪ್ರದೀಪ್ ಈಶ್ವರ್ ಗೆಲುವು ಸಾಧಿಸಿದ್ದಾರೆ. ಆದರೆ ನಂತರ ಅವರ ನಡೆ ಕಾಂಗ್ರೆಸ್ ನಾಯಕರಿಗೂ ಮುಜುಗರ ಉಂಟುಮಾಡುವಂತಿದೆ ಎಂದು ಆರೋಪಿಸಿದರು.

ಶಿಡ್ಲಘಟ್ಟ ಶಾಸಕ ಬಿ.ಎನ್. ರವಿಕುಮಾರ್ ಅವರ ಸಾರ್ವಜನಿಕ ಸೇವೆ ಮತ್ತು ಸರಳ ಜೀವನ ರಾಜ್ಯಕ್ಕೆ ಮಾದರಿಯಾಗಿದೆ. ಅವರ ಬಗ್ಗೆ ಮಾತನಾಡುವಾಗಲೂ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

ಪದೇಪದೇ 'ಓಬಿಸಿ ಹುಡುಗ' ಎಂಬ ಪದ ಬಳಸುವುದನ್ನು ನಿಲ್ಲಿಸಬೇಕು. ಒಕ್ಕಲಿಗ ಸಮುದಾಯದ ಮತಗಳೂ ಅವರಿಗೆ ಬಂದಿವೆ. ಮುಂದಿನ ದಿನಗಳಲ್ಲಿ ತಮ್ಮ ನಡೆ–ನುಡಿಯಲ್ಲಿ ಬದಲಾವಣೆ ತರದಿದ್ದರೆ ರಾಜ್ಯಾದ್ಯಂತ ಒಕ್ಕಲಿಗರ ಒಕ್ಕೂಟದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಒಕ್ಕಲಿಗರ ಒಕ್ಕೂಟದ ರಾಜ್ಯ ಕಾರ್ಯದರ್ಶಿ ನಾಗರಾಜ್‌ರೆಡ್ಡಿ, ಚಿಕ್ಕಬಳ್ಳಾಪುರ ತಾಲೂಕು ಅಧ್ಯಕ್ಷ ಮಂಜುನಾಥ್‌ಗೌಡ, ಗೌರಿಬಿದನೂರು ತಾಲೂಕು ಅಧ್ಯಕ್ಷ ವೆಂಕಟರೆಡ್ಡಿ, ಚಿಂತಾಮಣಿ ತಾಲೂಕು ಅಧ್ಯಕ್ಷ ಬಾಬುರೆಡ್ಡಿ, ಶಿಡ್ಲಘಟ್ಟ ತಾಲೂಕು ಅಧ್ಯಕ್ಷ ಶ್ರೀನಾಥರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್.ಐ.ಆರ್ ಕುರಿತು ಜಾಗೃತಿಗಾಗಿ ವಿದ್ಯಾರ್ಥಿಗಳಿಂದ ಬೃಹತ್ ಜಾಥಾ

ಕೋಲಾರ

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕಾಲೇಜು ವಿದ್ಯಾರ್ಥಿಗಳಿಂದ ಕೋಲಾರ ನಗರದಲ್ಲಿ ಬೃಹತ್ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ. ಪ್ರವೀಣ್ ಪಿ ಬಾಗೇವಾಡಿ ರವರ ಸೂಚನೆಯಂತೆ ಕೋಲಾರ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಕಾಲೇಜು ಪದವಿ ಪೂರ್ವ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಕಾಲೇಜುಗಳಲ್ಲಿನ ಚುನಾವಣಾ ಸಾಕ್ಷರತಾ ಕ್ಲಬ್‌ನ ಸದಸ್ಯ ವಿದ್ಯಾರ್ಥಿಗಳು ಇಂದು ನಗರದ ಬಂಗಾರಪೇಟೆ ಸರ್ಕಲ್‌ನಿಂದ ಡೂಮ್‌ಲೈಟ್ ಸರ್ಕಲ್, ಕ್ಲಾಕ್ ಟವರ್, ಬಸ್ ನಿಲ್ದಾಣ, ದೊಡ್ಡಪೇಟೆ ಮಾರ್ಗವಾಗಿ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಎಸ್.ಐ.ಆರ್ ಪ್ರಕ್ರಿಯೆಯಲ್ಲಿ ಎಲ್ಲಾ ನಾಗರಿಕರು ಭಾಗವಹಿಸಿ, ತಮ್ಮ ಮತದಾನದ ಹಕ್ಕು ಪಡೆದುಕೊಳ್ಳಲು ಕರೆ ನೀಡಿದರು.

ಜೂನ್ 30 ರಿಂದ ಜುಲೈ 29ರವರೆಗೆ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಆರಂಭವಾಗಲಿದ್ದು, ಎಲ್ಲಾ ಮತದಾರರ ಮನೆಗಳಿಗೆ ಬೂತ್ ಮಟ್ಟದ ಅಧಿಕಾರಿಗಳು ಭೇಟಿ ನೀಡಲಿದ್ದಾರೆ. ಆಗ ಬೂತ್ ಮಟ್ಟದ ಅಧಿಕಾರಿಗಳು ನೀಡುವ ಎನ್ಯೂಮರೇಷನ್ ಫಾರಂಗಳನ್ನು, ಎಲ್ಲಾ ಅರ್ಹ ಮತದಾರರು ಕಡ್ಡಾಯವಾಗಿ ಫಾರಂ ಭರ್ತಿ ಮಾಡಿ ನೀಡಬೇಕಿದೆ. ಅರ್ಹ ನಾಗರಿಕರೆಲ್ಲರಿಗೂ ಮತದಾನದ ಹಕ್ಕು ಸಿಗುವಂತೆ ಮಾಡಲು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕೈಗೊಳ್ಳಲಾಗಿದ್ದು, ಹೊಸ ಮತದಾರರ ಸೇರ್ಪಡೆ, ವಿಳಾಸ, ಫೋಟೋ ತಿದ್ದುಪಡಿಗೆ ಅವಕಾಶ ನೀಡಲಾಗಿದೆ. ಮೃತರು ಹಾಗೂ ಅನರ್ಹರನ್ನ ಮತದಾರರು ಪಟ್ಟಿ ತೆಗೆದುಹಾಕಲಾಗುವುದು ಎಂದು ಘೋಷಣೆಗಳ ಮೂಲಕ ಸಾರ್ವಜನಿಕರಲ್ಲಿ ವಿದ್ಯಾರ್ಥಿಗಳು ಅರಿವು ಮೂಡಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಹೆಚ್.ಎಸ್ ಮಂಜುನಾಥ್ ಸ್ವಾಮಿ, ಸಹಾಯಕ ಕಾರ್ಯದರ್ಶಿ ವಿ. ವೆಂಕಟಾಚಲಪತಿ, ಸಹಾಯಕ ಸಾಂಖ್ಯಿಕ ಅಧಿಕಾರಿ ಕೃಷ್ಣಮೂರ್ತಿ, ಪ್ರಾಂಶುಪಾಲರು ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರಾಂಶುಪಾಲರು ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರಾಂಶುಪಾಲರು ನೂತನ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ನೂತನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಶೈಕ್ಷಣಿಕ ಅಭಿವೃದ್ಧಿಗೆ ಬಿಇಒ ರಾಮಚಂದ್ರಪ್ಪರ ಸೇವೆ ಮಾದರಿ: ಸಿ.ಸೊಣ್ಣಪ್ಪ

ಮುಳಬಾಗಿಲು




ತಾಲೂಕಿನ ಸರ್ಕಾರಿ ಶಾಲೆಗಳ ಶೈಕ್ಷಣಿಕ ಅಭಿವೃದ್ಧಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಚಂದ್ರಪ್ಪ ಅವರು ಪ್ರಾಮಾಣಿಕತೆ, ದಕ್ಷತೆ ಮತ್ತು ದೂರದೃಷ್ಟಿಯಿಂದ ಕಾರ್ಯನಿರ್ವಹಿಸಿದ್ದು, ಶಿಕ್ಷಕರು ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಮಾರ್ಗದರ್ಶನ ಮಾಡಿ ಉತ್ತಮ ಫಲಿತಾಂಶ ಸಾಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದು ಡಿವಿಜಿ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯ ಸಿ. ಸೊಣ್ಣಪ್ಪ ಹೇಳಿದರು.

ನಗರದ ಡಿವಿಜಿ ಸರ್ಕಾರಿ ಶಾಲೆಯಲ್ಲಿ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಚಂದ್ರಪ್ಪ ಅವರಿಗೆ ಬೀಳ್ಕೊಡುಗೆ ಮತ್ತು ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಾಲೆಗಳು ಆರಂಭವಾಗುವ ಮೊದಲೇ ಪಠ್ಯಪುಸ್ತಕ ಮತ್ತು ಸಮವಸ್ತ್ರಗಳ ವಿತರಣೆಗೆ ಕ್ರಮ ಕೈಗೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಒದಗಿಸಿದ್ದರು. ಕೆಲ ಶಿಕ್ಷಕರಿಂದ ತಪ್ಪುಗಳಾದ ಸಂದರ್ಭದಲ್ಲೂ ಕಾನೂನು ಕ್ರಮಕ್ಕೆ ಮುಂದಾಗದೆ, ತಿದ್ದುಕೊಳ್ಳಲು ಅವಕಾಶ ನೀಡಿ ಮಾನವೀಯ ದೃಷ್ಟಿಕೋನದಿಂದ ಶಿಕ್ಷಕರ ಪರವಾಗಿ ನಿಂತು ಕೆಲಸ ಮಾಡಿರುವುದು ಅವರ ವಿಶೇಷತೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಮಚಂದ್ರಪ್ಪ ಅವರು ಶಿಕ್ಷಕರಿಗೆ ನೀಡಿದ ಸಹಕಾರ ಮತ್ತು ಅವರ ಕಾರ್ಯವೈಖರಿ ಎಲ್ಲರಿಗೂ ಆದರ್ಶವಾಗಿದ್ದು, ಅವರ ನಿವೃತ್ತಿ ಜೀವನ ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಕೂಡಿರಲಿ ಎಂದು ಹಾರೈಸಿದರು.

ಬಳಿಕ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಚಂದ್ರಪ್ಪ, ಡಿವಿಜಿ ಸರ್ಕಾರಿ ಶಾಲೆಯ ಶೈಕ್ಷಣಿಕ ಪ್ರಗತಿ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಮುಖ್ಯೋಪಾಧ್ಯಾಯ ಸಿ. ಸೊಣ್ಣಪ್ಪ ಅವರ ಶ್ರಮ ಮತ್ತು ನಾಯಕತ್ವ ಪ್ರಮುಖ ಕಾರಣವಾಗಿದೆ ಎಂದು ಪ್ರಶಂಸಿಸಿದರು.

ತಾವು ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ತಾಲೂಕಿನ ಎಲ್ಲ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಹಾಗೂ ಉತ್ತಮ ಫಲಿತಾಂಶ ತರುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಿದ್ದೇನೆ. ಶಿಕ್ಷಣ ಇಲಾಖೆ ಎಲ್ಲ ಇಲಾಖೆಗಳಿಗೂ ಮಾತೃ ಇಲಾಖೆಯಾಗಿದ್ದು, ಶಿಕ್ಷಕರು ನಿಷ್ಠೆ, ಇಚ್ಛಾಶಕ್ತಿ ಮತ್ತು ಬದ್ಧತೆಯಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿದರೆ ಉತ್ತಮ ನಾಗರಿಕರನ್ನು ರೂಪಿಸಬಹುದು ಎಂದು ಹೇಳಿದರು.

ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಾಲಾ ಅವಧಿ ಬಳಿಕ ಅನಗತ್ಯ ಚಟುವಟಿಕೆಗಳಲ್ಲಿ ತೊಡಗಿಕೊಳ್ಳದೆ ಕುಟುಂಬದೊಂದಿಗೆ ಸಮಯ ಕಳೆಯುವ ಮೂಲಕ ಆರೋಗ್ಯಕರ ಜೀವನ ನಡೆಸಬೇಕು ಎಂದು ಶಿಕ್ಷಕರಿಗೆ ಸಲಹೆ ನೀಡಿದರು. ತಮ್ಮ ಅಧಿಕಾರಾವಧಿಯಲ್ಲಿ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಕೈಲಾದಷ್ಟು ಪ್ರಾಮಾಣಿಕ ಸೇವೆ ಸಲ್ಲಿಸಿರುವುದಾಗಿ ತಿಳಿಸಿದ ಅವರು, ಮುಂದಿನ ಕ್ಷೇತ್ರ ಶಿಕ್ಷಣಾಧಿಕಾರಿಯೂ ತಾಲೂಕಿನ ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಬಿಇಒ ರಾಮಚಂದ್ರಪ್ಪ, ಅವರ ಪತ್ನಿ ತ್ರಿವೇಣಿ, ಇಸಿಒ ಸತೀಶ್, ಮಣಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎಸ್‌ಡಿಎ ಕುಮಾರ್, ಮುಖ್ಯೋಪಾಧ್ಯಾಯ ಸಿ. ಸೊಣ್ಣಪ್ಪ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಎಸ್‌ಐಆರ್‌ನಿಂದ ಅರ್ಹ ಮತದಾರರ ಹಕ್ಕು ಕಸಿದುಕೊಳ್ಳುವ ಆತಂಕ

ತಿಪಟೂರು

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಜಾರಿಯಾಗುತ್ತಿರುವ ರೀತಿಯಿಂದ ಲಕ್ಷಾಂತರ ಅರ್ಹ ಮತದಾರರ ಮತದಾನದ ಹಕ್ಕು ಕಸಿದುಕೊಳ್ಳುವ ಅಪಾಯ ಎದುರಾಗಿದೆ ಎಂದು ಜಾಗೃತ ಕರ್ನಾಟಕದ ಡಾ. ಎಚ್.ವಿ. ವಾಸು ಆತಂಕ ವ್ಯಕ್ತಪಡಿಸಿದರು.

ನಗರದ ಗಾಂಧಿನಗರದಲ್ಲಿರುವ ಮಸ್ಜಿದ್–ಎ–ಮಹಾಜರೀನ್‌ನಲ್ಲಿ ಜನಸ್ಪಂದನ ಟ್ರಸ್ಟ್ ಹಾಗೂ ಸೌಹಾರ್ದ ತಿಪಟೂರು ಸಹಯೋಗದಲ್ಲಿ ಆಯೋಜಿಸಿದ್ದ ಎಸ್‌ಐಆರ್ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮೃತಪಟ್ಟವರು ಹಾಗೂ ವಿದೇಶಿ ನಾಗರಿಕರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡುವುದು ಅಗತ್ಯ. ಆದರೆ ಅನರ್ಹರನ್ನು ಹೊರಗಿಡುವ ನೆಪದಲ್ಲಿ ಅರ್ಹ ಮತದಾರರ ಹೆಸರನ್ನೇ ಪಟ್ಟಿಯಿಂದ ತೆಗೆದುಹಾಕುವುದು ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ ಎಂದು ಹೇಳಿದರು.

ದೇಶದ ಹಲವು ರಾಜ್ಯಗಳಲ್ಲಿ ಈಗಾಗಲೇ ಕೋಟ್ಯಂತರ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದೆ ಎಂಬ ವರದಿಗಳಿದ್ದು, ಅವರಲ್ಲಿ ಅನೇಕರು ಜೀವಂತ ಹಾಗೂ ಅರ್ಹ ನಾಗರಿಕರಾಗಿದ್ದಾರೆ ಎಂಬ ಆತಂಕ ವ್ಯಕ್ತವಾಗಿದೆ. ಕರ್ನಾಟಕದಲ್ಲಿಯೂ ಇದೇ ರೀತಿಯ ಪ್ರಕ್ರಿಯೆ ಆರಂಭವಾಗುತ್ತಿದ್ದು, ಜೂನ್ 30ರಿಂದ ಅಧಿಕಾರಿಗಳು ಮನೆ ಮನೆಗೆ ತೆರಳಿ ನಮೂನೆಗಳನ್ನು ವಿತರಿಸಲಿದ್ದಾರೆ ಎಂದು ತಿಳಿಸಿದರು.

ಈ ಹಿಂದೆ ಹಲವು ಬಾರಿ ಮತ ಚಲಾಯಿಸಿದ್ದವರೂ ಸೇರಿದಂತೆ ಎಲ್ಲರೂ ಮತ್ತೆ ದಾಖಲೆಗಳನ್ನು ಸಲ್ಲಿಸಿ ತಮ್ಮ ಪೌರತ್ವವನ್ನು ಸಾಬೀತುಪಡಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಆರೋಪಿಸಿದ ಅವರು, ಮಹಿಳೆಯರು, ದಲಿತರು, ಆದಿವಾಸಿಗಳು, ಅಲೆಮಾರಿ ಸಮುದಾಯಗಳು ಹಾಗೂ ಅಲ್ಪಸಂಖ್ಯಾತರು ದಾಖಲೆಗಳ ತಾಂತ್ರಿಕ ಸಮಸ್ಯೆಯಿಂದ ಮತದಾನದ ಹಕ್ಕು ಕಳೆದುಕೊಳ್ಳುವಂತಾಗಬಾರದು ಎಂದು ಒತ್ತಾಯಿಸಿದರು.

ಎಸ್‌ಐಆರ್ ಪ್ರಕ್ರಿಯೆ ಎನ್‌ಆರ್‌ಸಿ, ಸಿಎಎ ಹಾಗೂ ಎನ್‌ಪಿಆರ್ ಜಾರಿಯ ಮುಂದುವರಿದ ಭಾಗವೇ ಎಂಬ ಅನುಮಾನ ಸಾರ್ವಜನಿಕರಲ್ಲಿ ಮೂಡಿದೆ. ಮತದಾನದ ಹಕ್ಕು ರಕ್ಷಣೆಗಾಗಿ ಎಲ್ಲ ಸಮುದಾಯದ ಜನರು ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದೆ. ಮೊದಲಿಗೆ ಪ್ರತಿಯೊಬ್ಬರೂ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಪರಿಶೀಲಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜನಸ್ಪಂದನ ಟ್ರಸ್ಟ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸಿ.ಬಿ. ಶಶಿಧರ್ (ಟೂಡಾ) ಮಾತನಾಡಿ, ಬೂತ್ ಮಟ್ಟದ ಏಜೆಂಟ್‌ಗಳು ತಮ್ಮ ಕುಟುಂಬದವರು ಹಾಗೂ ನೆರೆಹೊರೆಯವರ ಮತದಾರರ ಪಟ್ಟಿಯಲ್ಲಿನ ಹೆಸರುಗಳನ್ನು ಪರಿಶೀಲಿಸಿ ರಕ್ಷಿಸುವ ಕೆಲಸಕ್ಕೆ ಮುಂದಾಗಬೇಕು. ನಾಗರಿಕರು ಸರ್ಕಾರ ಅಥವಾ ಚುನಾವಣಾ ಆಯೋಗವನ್ನೇ ಅವಲಂಬಿಸದೆ ಸ್ವತಃ ಜಾಗರೂಕರಾಗಬೇಕು ಎಂದರು.

ಬೆರಳೆಣಿಕೆಯ ಅನರ್ಹ ಮತದಾರರನ್ನು ಹೊರಗಿಡುವ ಉದ್ದೇಶದಿಂದ ಕೋಟ್ಯಂತರ ಅರ್ಹ ಮತದಾರರ ಹಕ್ಕಿಗೆ ಧಕ್ಕೆ ತರುವುದು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿದೆ ಎಂದು ಅವರು ಹೇಳಿದರು. ಮತದಾರರಿಗೆ ನೆರವಾಗುವ ಉದ್ದೇಶದಿಂದ ಜನಸ್ಪಂದನ ಟ್ರಸ್ಟ್ ಶೀಘ್ರದಲ್ಲೇ ಸಹಾಯವಾಣಿ ಆರಂಭಿಸಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಾಗೃತ ಕರ್ನಾಟಕದ ಆದಂ ಖಾನ್ ಪ್ರೊಜೆಕ್ಟರ್ ಮೂಲಕ ಎಸ್‌ಐಆರ್ ಪ್ರಕ್ರಿಯೆಯ ಕುರಿತು ಮಾಹಿತಿ ನೀಡಿದರು. ಸಿಐಟಿಯು ಮುಖಂಡ ಎನ್.ಕೆ. ಸುಬ್ರಮಣ್ಯ, ಹಜ್ರತ್ ಫಾರೂಕ್, ಜಲೀಲ್, ಸೌಹಾರ್ದದ ಅಲ್ಲಾಬಕಾಶ್, ಬೆಲೆ ಕಾವಲು ಸಮಿತಿಯ ಶ್ರೀಕಾಂತ್ ಕೆಳಹಟ್ಟಿ, ನಗರಸಭೆಯ ಮಾಜಿ ಸದಸ್ಯ ಮಹಮದ್ ಗೌಸ್, ಸೈಯದ್ ಸಾದತ್, ಮಸೀದಿಯ ಮುತ್ತುವಲ್ಲಿಗಳು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕೇಂದ್ರ ಶಿಕ್ಷಣ ಸಚಿವ ರಾಜೀನಾಮೆಗೆ ಆಗ್ರಹ

ಕೋಲಾರ

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು. ಪ್ರಧಾನಿ ನರೇಂದ್ರ ಮೋದಿ ಮಧ್ಯಪ್ರವೇಶಿಸಿ ಪ್ರಕರಣದ ಕುರಿತು ಸ್ಪಷ್ಟನೆ ನೀಡಬೇಕು ಹಾಗೂ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್ ಆಗ್ರಹಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಹಲವು ವರ್ಷಗಳಿಂದ ನೀಟ್ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ಮರುಕಳಿಸುತ್ತಿದ್ದರೂ ಕೇಂದ್ರ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆ ಉಂಟಾಗುತ್ತಿದೆ ಎಂದು ಆರೋಪಿಸಿದರು.

ಮರುಪರೀಕ್ಷೆ ನಡೆಸಲು ಮಿಲಿಟರಿಯನ್ನು ಬಳಸಿಕೊಂಡಿರುವುದು ಹಾಸ್ಯಾಸ್ಪದ ಬೆಳವಣಿಗೆಯಾಗಿದೆ. ಪ್ರಶ್ನೆಪತ್ರಿಕೆಗಳ ಸುರಕ್ಷತೆ ಕಾಪಾಡಲು ಸರ್ಕಾರ ವಿಫಲವಾಗಿದೆ ಎಂದು ಟೀಕಿಸಿದರು.

1984ರಲ್ಲಿ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಅವರು ಸಾಮಾನ್ಯ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದಲ್ಲಿ ಅವಕಾಶ ಕಲ್ಪಿಸುವ ಉದ್ದೇಶದಿಂದ ಸಿಇಟಿ ಜಾರಿಗೆ ತಂದರು. ನಂತರ 2013ರಲ್ಲಿ ಯುಪಿಎ ಸರ್ಕಾರ ದೇಶಾದ್ಯಂತ ನೀಟ್ ಪರೀಕ್ಷೆ ಜಾರಿಗೆ ತಂದಿತು. ಆದರೆ, ಎನ್‌ಡಿಎ ಸರ್ಕಾರ ಪಾರದರ್ಶಕವಾಗಿ ಪರೀಕ್ಷೆ ನಡೆಸುವಲ್ಲಿ ವಿಫಲವಾಗಿದೆ ಎಂದು ದೂರಿದರು.

ಪ್ರಧಾನಿ ನರೇಂದ್ರ ಮೋದಿ ಈ ಪ್ರಕರಣದ ಬಗ್ಗೆ ಮೌನ ವಹಿಸಿರುವುದು ಏಕೆ? ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಗಂಭೀರ ವಿಚಾರದಲ್ಲಿ ಕೇಂದ್ರ ಸರ್ಕಾರ ಉತ್ತರ ನೀಡಬೇಕು. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸುವುದಿಲ್ಲ ಎಂಬ ಭರವಸೆ ನೀಡಬೇಕು ಎಂದು ಒತ್ತಾಯಿಸಿದರು.

ನೀಟ್ ಪರೀಕ್ಷೆಯ ಮೌಲ್ಯಮಾಪನ ಪದ್ಧತಿಯಲ್ಲಿ ಬದಲಾವಣೆ ತರಬೇಕಿದ್ದು, ನೀಟ್ ಅಂಕಗಳಿಗೆ ಶೇ.50 ಹಾಗೂ ದ್ವಿತೀಯ ಪಿಯುಸಿ ಅಂಕಗಳಿಗೆ ಶೇ.50 ತೂಕ ನೀಡುವ ವ್ಯವಸ್ಥೆ ಜಾರಿಗೊಳಿಸುವ ಕುರಿತು ತಜ್ಞರ ಸಮಿತಿ ರಚಿಸಿ ಅಧ್ಯಯನ ನಡೆಸಬೇಕು ಎಂದು ಸಲಹೆ ನೀಡಿದರು.

ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ನಡೆದ ಘಟನೆ ಕುರಿತು ಪ್ರತಿಕ್ರಿಯಿಸಿದ ಅವರು, ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ಆದರೆ, ಯಾರ ಮೇಲಾದರೂ ಚಪ್ಪಲಿ ಎಸೆಯುವುದು ಅಥವಾ ಅವಮಾನಿಸುವುದು ಸರಿಯಲ್ಲ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಮ್ಯಾಕಲ್ ನಾರಾಯಣಸ್ವಾಮಿ ಮಾತನಾಡಿ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಕೇವಲ ಪರೀಕ್ಷಾ ಅಕ್ರಮವಲ್ಲ, ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ದೊಡ್ಡ ಹಗರಣವಾಗಿದೆ ಎಂದು ಆರೋಪಿಸಿದರು.

ದೇಶದ ವಿವಿಧ ಭಾಗಗಳಲ್ಲಿ ನೀಟ್ ಪರೀಕ್ಷೆಯ ಒತ್ತಡದಿಂದ ಹಲವು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವುದು ಆತಂಕಕಾರಿ. ಪ್ರಶ್ನೆಪತ್ರಿಕೆಗಳ ಭದ್ರತೆಗೆ ಮಿಲಿಟರಿಯ ನೆರವು ಪಡೆಯುವ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ವೈಫಲ್ಯವನ್ನು ತೋರಿಸುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕೋಮುಲ್ ನಿರ್ದೇಶಕ ಚಂಜಿಮಲೆ ರಮೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಮುಖಂಡರಾದ ಬೆಳಗಾನಹಳ್ಳಿ ಮುನಿವೆಂಕಟಪ್ಪ, ಕುಡಾ ಅಧ್ಯಕ್ಷ ಮೊಹಮ್ಮದ್ ಹನೀಫ್, ಗ್ಯಾರಂಟಿ ಜಿಲ್ಲಾ ಅಧ್ಯಕ್ಷ ವೈ. ಶಿವಕುಮಾರ್, ಖಾದ್ರಿಪುರ ಬಾಬು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪೋಲಿಯೋ ಲಸಿಕೆ ನೀಡಿ’



ತುಮಕೂರು

ಐದು ವರ್ಷದೊಳಗಿನ ಮಕ್ಕಳಿಗೆ ತಾಯಂದಿರು ತಪ್ಪದೇ ಪೋಲಿಯೋ ಹನಿ ಹಾಕಿಸಬೇಕು. ಪ್ರತಿ ಮಗುವಿಗೂ ಪೋಲಿಯೋ ಲಸಿಕೆ ಹಾಕಲು ಆರೋಗ್ಯ ಇಲಾಖೆ ಸಿಬ್ಬಂದಿ ಗಮನಹರಿಸಬೇಕು. ಈ ಮೂಲಕ ದೇಶವನ್ನು ಪೋಲಿಯೋ ಮುಕ್ತ ದೇಶ ನಿರ್ಮಾಣ ಮಾಡಿ, ಮಕ್ಕಳ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಕಾಳಜಿವಹಿಸಬೇಕು ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಮನವಿ ಮಾಡಿದರು.

ನಗರದ ಕೋತಿತೋಪು ಆಸ್ಪತ್ರೆ ಆವರಣದಲ್ಲಿ ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು, ಭಾರತದಲ್ಲಿ ಜನವರಿ 2011ರಿಂದ ಯಾವುದೇ ಹೊಸ ಪೋಲಿಯೋ ಪ್ರಕರಣ ಕಂಡುಬಂದಿರುವುದಿಲ್ಲ. ಭಾರತ ದೇಶವು ಈಗ ವಿಶ್ವ ಆರೋಗ್ಯ ಸಂಸ್ಥೆ ವತಿಯಿಂದ ‘ಪೋಲಿಯೋ ಮುಕ್ತ ರಾಷ್ಟ್ರ’ ಎಂಬ ನಿರ್ಮೂಲನೆ ಪ್ರಮಾಣ ಪತ್ರ ಪಡೆದಿದೆ ಎಂದರು.

ಆದರೆ ನೆರೆಯ ಪಾಕಿಸ್ತಾನ ಮತ್ತು ಆಫ್ಘಾನಿಸಾನ ದೇಶಗಳಲ್ಲಿ ನಿರ್ಮೂಲನೆಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಈ ಬಾರಿಯೂ ರಾಷ್ಟ್ರೀಯ ಲಸಿಕಾ ಅಭಿಯಾನ ಆರಂಭಿಸಲಾಗಿದೆ. ಎಲ್ಲಾ ಪೋಷಕರು ಪಲ್ಸ್ ಪೋಲಿಯೋ ಹನಿಯನ್ನು 0–5 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಹಾಕಿಸಬೇಕು. ಜಿಲ್ಲಾದ್ಯಂತ 0–5 ವರ್ಷದೊಳಗಿನ ಒಟ್ಟು 1,86,831 ಮಕ್ಕಳಗೆ ಲಸಿಕೆ ನೀಡುವ ಗುರಿ ಹೊಂದಿದ್ದು, 1219 ಲಸಿಕಾ ಕೇಂದ್ರಗಳು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಟೋಲ್‌ಗಳಲ್ಲಿ 60 ಟ್ರಾನ್ಸಿಟ್ ಕೇಂದ್ರಗಳಲ್ಲಿ ಪೋಲಿಯೋ ಲಸಿಕೆ ನೀಡಲು ವ್ಯವಸ್ಥೆ ಮಾಡಲಾಗಿರುತ್ತದೆ. ಒಟ್ಟು 5122 ಲಸಿಕಾ ಸಿಬ್ಬಂದಿ, 265 ಮೇಲ್ವಿಚಾರಕರು ಈ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸಲಿದ್ದಾರೆ ಎಂದು ಸಚಿವ ಸೋಮಣ್ಣ ತಿಳಿಸಿದರು.

ವಿಶೇಷವಾಗಿ ವಲಸೆ ಬಂದಿರುವ ಸಮುದಾಯ, ಲಸಿಕಾ ವಂಚಿತ ಪ್ರದೇಶ, ಕೊಳಚೆ ಪ್ರದೇಶ ಹಾಗೂ ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಆದ್ಯತೆ ಮೇರೆಗೆ ಪಲ್ಸ್ ಪೋಲಿಯೋ ಹನಿ ನೀಡಲು ಕ್ರಮ ವಹಿಸಬೇಕು ಹಾಗೂ ಅವರಲ್ಲಿ ಮಕ್ಕಳ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್‌ಗೌಡ, ಜಿಲ್ಲಾ ಪಂಚಾಯಿತಿ ಸಿಇಒ ಬಿ.ವಿ. ಅಶ್ವಿಜ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್, ಜಿಲ್ಲಾ ಆಸ್ಪತ್ರೆ ಶಸ್ತ್ರಚಿಕಿತ್ಸಕ ಡಾ. ಅಸ್ಗರ್ ಬೇಗ್, ತಹಶೀಲ್ದಾರ್ ರಾಜೇಶ್ವರಿ, ಆರ್.ಸಿ.ಹೆಚ್. ಅಧಿಕಾರಿ ಡಾ. ಮೋಹನ್, ಟಿಹೆಚ್‌ಒ ಡಾ. ಲಕ್ಷ್ಮೀಕಾಂತ್, ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷ ವೈ.ಹೆಚ್. ಹುಚ್ಚಯ್ಯ, ಕೋತಿತೋಪು ಆಸ್ಪತ್ರೆ ವೈದ್ಯಾಧಿಕಾರಿ ಡಾ.ದಿವ್ಯಜ್ಯೋತಿ, ಮುಖಂಡರಾದ ಕೆ. ದೊರೈರಾಜ್, ಹೆಚ್.ಆರ್. ಹನುಮಂತರಾಯಪ್ಪ, ರೂಪಾ ಶೆಟ್ಟಳ್ಳಯ್ಯ, ಜಯಮೂರ್ತಿ, ಭೈರಣ್ಣ, ಮಧುಶ್ರೀ ಮತ್ತಿತರರು ಭಾಗವಹಿಸಿದ್ದರು.

# ‘ಪಲ್ಸ್ ಪೋಲಿಯೋ ಅಭಿಯಾನ ಯಶಸ್ವಿಗೊಳಿಸಲು ಪೋಷಕರು ಸಹಕರಿಸಿ’

ಬೂದಿಕೋಟೆ



ಐದು ವರ್ಷದೊಳಗಿನ ಪ್ರತಿಯೊಬ್ಬ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆಯ ಎರಡು ಹನಿಗಳನ್ನು ತಪ್ಪದೇ ಹಾಕಿಸುವ ಮೂಲಕ ಪೋಲಿಯೋ ರೋಗದಿಂದ ಸಂಪೂರ್ಣ ರಕ್ಷಣೆ ಒದಗಿಸಬೇಕು ಎಂದು ಬೂದಿಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರಾಹುಲ್ ಹೇಳಿದರು.

ಬೂದಿಕೋಟೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಭಾನುವಾರ ನಡೆದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ನೀಡಲಾಗುತ್ತಿದ್ದು, ಪೋಷಕರು ತಮ್ಮ ಮಕ್ಕಳನ್ನು ಸಮೀಪದ ಲಸಿಕಾ ಕೇಂದ್ರಗಳಿಗೆ ಕರೆತಂದು ಎರಡು ಹನಿಗಳ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಬೇಕು ಎಂದು ಮನವಿ ಮಾಡಿದರು.

ಪೋಲಿಯೋ ಲಸಿಕೆಯು ಮಕ್ಕಳನ್ನು ಭವಿಷ್ಯದಲ್ಲಿ ಉಂಟಾಗಬಹುದಾದ ಶಾಶ್ವತ ಅಂಗವೈಕಲ್ಯ ಸೇರಿದಂತೆ ಗಂಭೀರ ಆರೋಗ್ಯ ಸಮಸ್ಯೆಗಳಿಂದ ರಕ್ಷಿಸುವ ಅತ್ಯಂತ ಪರಿಣಾಮಕಾರಿ ಮುನ್ನೆಚ್ಚರಿಕಾ ಕ್ರಮವಾಗಿದೆ. ಈ ಲಸಿಕೆಯಿಂದ ಯಾವುದೇ ರೀತಿಯ ಅಡ್ಡಪರಿಣಾಮಗಳು ಉಂಟಾಗುವುದಿಲ್ಲ. ಆದ್ದರಿಂದ ಯಾವುದೇ ಆತಂಕಕ್ಕೆ ಒಳಗಾಗದೆ ಪ್ರತಿಯೊಬ್ಬ ಪೋಷಕರೂ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

ಭಾರತವು ಪೋಲಿಯೋ ಮುಕ್ತ ರಾಷ್ಟ್ರವಾಗಿ ಗುರುತಿಸಿಕೊಂಡಿದ್ದರೂ, ನೆರೆಯ ಕೆಲವು ರಾಷ್ಟ್ರಗಳಲ್ಲಿ ಇನ್ನೂ ಪೋಲಿಯೋ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ದೇಶಾದ್ಯಂತ ಪಲ್ಸ್ ಪೋಲಿಯೋ ಅಭಿಯಾನವನ್ನು ಸರ್ಕಾರ ಮುಂದುವರಿಸಿದೆ. ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯ ದೃಷ್ಟಿಯಿಂದ ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಆರ್. ಮಂಜುನಾಥ್, ಔಷಧ ವಿತರಕಿ ಸಂಗೀತಾ, ಸಿಬ್ಬಂದಿಗಳಾದ ಹೇಮಪ್ರಿಯಾ, ರಾಜಶ್ರೀ, ಬಾಬು, ಮುಖಂಡ ಮುನಿಸ್ವಾಮಿ ಶೆಟ್ಟಿ, ಅಂಗನವಾಡಿ ಕಾರ್ಯಕರ್ತೆ ಆಂಜಮ್ಮ, ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ



ಕುಣಿಗಲ್

ರಾಷ್ಟ್ರೀಯ ಪಲ್ಸ್ ಪೋಲಿಯೋ–2026 ಅಭಿಯಾನಕ್ಕೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್.ಮಂಜುನಾಥ್ ಅವರು ಕುಣಿಗಲ್ ಸಾರ್ವಜನಿಕ ಆಸ್ಪತ್ರೆಯಲ್ಲಿ ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ಮಗುವಿಗೂ ಪೋಲಿಯೋ ಲಸಿಕೆ ನೀಡಿದ ಪರಿಣಾಮ ಭಾರತ ಇಂದು ಪೋಲಿಯೋ ಮುಕ್ತ ರಾಷ್ಟ್ರವಾಗಿ ಗುರುತಿಸಿಕೊಂಡಿದೆ. ಆರೋಗ್ಯವಂತ ಮಕ್ಕಳೇ ಆರೋಗ್ಯವಂತ ಹಾಗೂ ಬಲಿಷ್ಠ ಭಾರತದ ಅಡಿಪಾಯವಾಗಿದ್ದು, ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಪೋಷಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಕರೆ ನೀಡಿದರು.

ಕುಣಿಗಲ್ ಸಾರ್ವಜನಿಕ ಆಸ್ಪತ್ರೆಗೆ ಸಿಎಸ್‌ಆರ್ ಅನುದಾನದಡಿ ಹೃದಯ ತಪಾಸಣೆಗೆ ಅಗತ್ಯವಾದ ‘ಎಕೋ’ ಯಂತ್ರವನ್ನು ಅಳವಡಿಸಿ, ಅದಕ್ಕಾಗಿ ಸಿಬ್ಬಂದಿಯನ್ನು ನೇಮಿಸುವ ಯೋಜನೆ ಇದೆ ಎಂದು ತಿಳಿಸಿದರು.

ಇದೇ ವೇಳೆ, ಇಂದ್ರಧನುಷ್ ಅಭಿಯಾನದಡಿ ಹೃದಯ ಸಂಬಂಧಿ ಸಮಸ್ಯೆಗಳನ್ನು ತಡೆಗಟ್ಟಲು ಸುಮಾರು 15 ಸಾವಿರ ಮೌಲ್ಯದ ಲಸಿಕೆಯನ್ನು ಉಚಿತವಾಗಿ ಕುಣಿಗಲ್ ಸಾರ್ವಜನಿಕ ಆಸ್ಪತ್ರೆಯಲ್ಲೂ ನೀಡುವಂತೆ ಈಗಾಗಲೇ ಆರೋಗ್ಯ ಸಚಿವರೊಂದಿಗೆ ಚರ್ಚಿಸಲಾಗಿದೆ. ಈ ಯೋಜನೆಯನ್ನು ರಾಜ್ಯದ ಎಲ್ಲಾ ತಾಲೂಕು ಸಾರ್ವಜನಿಕ ಆಸ್ಪತ್ರೆಗಳಿಗೂ ವಿಸ್ತರಿಸಿದರೆ ಹೃದಯ ಸಮಸ್ಯೆಯಿಂದಾಗುವ ಸಾವಿನ ಪ್ರಮಾಣವನ್ನು ಕಡಿಮೆ ಮಾಡಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕುಣಿಗಲ್ ತಾಲೂಕು ಬಿಜೆಪಿ ಮುಖಂಡ ಡಿ. ಕೃಷ್ಣಕುಮಾರ್, ಮಾಜಿ ತಾಲೂಕು ಅಧ್ಯಕ್ಷ ಬಲರಾಮ್, ಬಿಜೆಪಿ ರಾಜ್ಯ ಸಾಮಾಜಿಕ ಜಾಲತಾಣ ಸದಸ್ಯ ದಿಲೀಪ್, ಜೆಡಿಎಸ್ ಮುಖಂಡ ಕೆ.ಎಲ್. ಹರೀಶ್, ತಹಸೀಲ್ದಾರ್ ಕರಿಯ ನಾಯ್ಕ, ಸರ್ಕಲ್ ಇನ್‌ಸ್ಪೆಕ್ಟರ್ ಎಂ. ನಾಯಕ್, ತಾಲೂಕು ವೈದ್ಯಾಧಿಕಾರಿ ಮರಿಯಪ್ಪ, ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಅಭಿಜಿತ್ ಹ., ವೈದ್ಯಕೀಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಹೈಕೋರ್ಟ್ ಪೀಠಕ್ಕೆ ಬಿಗಿ ಭದ್ರತೆ

ಧಾರವಾಡ

ಪದೇ ಪದೇ ಬಾಂಬ್ ಬೆದರಿಕೆ ಇ–ಮೇಲ್‌ಗಳು ಬಂದಿರುವ ಹಿನ್ನೆಲೆಯಲ್ಲಿ ಧಾರವಾಡ ಹೈಕೋರ್ಟ್ ಪೀಠದಲ್ಲಿ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ನ್ಯಾಯಾಲಯದ ಆವರಣದಲ್ಲಿ ಸುಮಾರು 40 ಹೆಚ್ಚುವರಿ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿ ಕಟ್ಟೆಚ್ಚರ ವಹಿಸಲಾಗಿದೆ.

ಈ ಹಿಂದೆ ಧಾರವಾಡ ಹೈಕೋರ್ಟ್ ಪೀಠಕ್ಕೆ ಎರಡು ಬಾರಿ ಬಾಂಬ್ ಬೆದರಿಕೆ ಇ–ಮೇಲ್ ಬಂದಿದ್ದ ಹಿನ್ನೆಲೆಯಲ್ಲಿ ಹೈಕೋರ್ಟ್ ಪೀಠದ ವಕೀಲರ ಸಂಘದ ಅಧ್ಯಕ್ಷರು ಗೃಹ ಇಲಾಖೆಗೆ ಪತ್ರ ಬರೆದು ಭದ್ರತೆ ಹೆಚ್ಚಿಸುವಂತೆ ಮನವಿ ಮಾಡಿದ್ದರು.

# ಕನ್ನಡದ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಸಲು ದಿನೇಶ್ ಕರೆ

ಬೆಂಗಳೂರು



ಸ್ವಾತಂತ್ರ್ಯ ಉದ್ಯಾನವನದಲ್ಲಿರುವ ರಾಷ್ಟ್ರಕವಿ ಕುವೆಂಪು ಅವರ ಪ್ರತಿಮೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪುಷ್ಪನಮನ ಸಲ್ಲಿಸಿ, ಕನ್ನಡ ಧ್ವಜಸ್ಥಂಭ ಹಾಗೂ ಕುವೆಂಪು ಪ್ರತಿಮೆಯ ನೂತನ ಆವರಣವನ್ನು ಲೋಕಾರ್ಪಣೆ ಮಾಡಿದರು.

ಬಳಿಕ ಕನ್ನಡ ಜನಶಕ್ತಿ ಕೇಂದ್ರದ ವತಿಯಿಂದ ಆಯೋಜಿಸಿದ್ದ ಕುವೆಂಪು ನೆನಪು ಸಭೆಯಲ್ಲಿ ಭಾಗವಹಿಸಿದ ಅವರು, ಕನ್ನಡ ಭಾಷೆ ಮತ್ತು ಸಂಸ್ಕೃತಿಗಾಗಿ ಸೇವೆ ಸಲ್ಲಿಸುತ್ತಿರುವ ಕನ್ನಡ ಹೋರಾಟಗಾರ ಸಾ.ರಾ. ಗೋವಿಂದು, ಪೊಲೀಸ್ ಮುಖ್ಯ ಪೇದೆ ಎಂ. ಮಹದೇವಸ್ವಾಮಿ ಸೇರಿದಂತೆ ಹಲವರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ದಿನೇಶ್ ಗುಂಡೂರಾವ್, ಸುಮಾರು 12 ವರ್ಷಗಳ ಹಿಂದೆ ಸ್ವಾತಂತ್ರ್ಯ ಉದ್ಯಾನವನದಲ್ಲಿ ಕುವೆಂಪು ಅವರ ಪ್ರತಿಮೆಯನ್ನು ಸ್ಥಾಪಿಸಲಾಗಿತ್ತು. ಇದೀಗ ಸುಂದರವಾದ ನೂತನ ಆವರಣ ನಿರ್ಮಾಣದ ಮೂಲಕ ಈ ಸ್ಥಳಕ್ಕೆ ಮತ್ತಷ್ಟು ಕಳೆ ಬಂದಿದೆ ಎಂದು ಹೇಳಿದರು. ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಜನರು ಸ್ವಾತಂತ್ರ್ಯ ಉದ್ಯಾನವನಕ್ಕೆ ಭೇಟಿ ನೀಡುತ್ತಿದ್ದು, ಇಲ್ಲಿನ ಪರಿಸರ ಸ್ವಚ್ಛ ಹಾಗೂ ಸುಂದರವಾಗಿರಬೇಕು. ಅಲ್ಲದೆ, ಕುವೆಂಪು ಅವರ ವ್ಯಕ್ತಿತ್ವ, ಚಿಂತನೆಗಳು ಮತ್ತು ಸಾಹಿತ್ಯದ ಮಹತ್ವವನ್ನು ಜನರಿಗೆ ತಲುಪಿಸುವ ಕಾರ್ಯ ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು. “ಕನ್ನಡದ ಪರ ಹೋರಾಟಗಳು ನಡೆಯುವುದು ಎಷ್ಟು ಮುಖ್ಯವೋ, ಕನ್ನಡದ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳು ನಡೆಯುವುದೂ ಅಷ್ಟೇ ಅಗತ್ಯ ಎಂದರು.

01/07/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಹಕಾರಿ ವಾರ ಅಂಗವಾಗಿ ಕನಕಪುರದಲ್ಲಿ ಸಸಿ ನೆಡುವ ಕಾರ್ಯಕ್ರಮ

ಕನಕಪುರ

ಸಹಕಾರಿ ವಾರಾಚರಣೆ ಅಂಗವಾಗಿ ಕನಕಪುರ ತಾಲೂಕು ಪ್ರಾಥಮಿಕ ಭೂ ಅಭಿವೃದ್ಧಿ (ಪಿ.ಎಲ್.ಡಿ) ಬ್ಯಾಂಕ್ ವತಿಯಿಂದ ನಗರದ ಕ್ಷೇತ್ರ ಸಮನ್ವಯ ಶಿಕ್ಷಣ ಸಂಪನ್ಮೂಲ ಕೇಂದ್ರ ಹಾಗೂ ವಿಶೇಷ ಅಗತ್ಯವುಳ್ಳ ಮಕ್ಕಳ ಸಿದ್ಧತಾ ಕೇಂದ್ರದ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಪಿ.ಎಲ್.ಡಿ ಬ್ಯಾಂಕ್ ಅಧ್ಯಕ್ಷ ಹರೀಶ್ ಕೆ. ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಹರೀಶ್ ಕೆ., ಬ್ಯಾಂಕಿನ ಸುತ್ತೋಲೆಯಂತೆ ಪ್ರತಿವರ್ಷ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಸಸಿ ನೆಡುವ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಇಂದಿನ ದಿನಗಳಲ್ಲಿ ಗಾಳಿ, ನೀರು ಹಾಗೂ ಮಳೆಯ ಮಹತ್ವ ಹೆಚ್ಚಾಗಿದ್ದು, ಮಾನವನ ಚಟುವಟಿಕೆಗಳಿಂದ ಪರಿಸರ ಹಾನಿಯಾಗುತ್ತಿದೆ. ಕೈಗಾರಿಕೆಗಳ ಹೆಚ್ಚಳದಿಂದ ಗಾಳಿ ಮತ್ತು ನೀರು ಕಲ್ಮಶಗೊಳ್ಳುತ್ತಿದ್ದು, ಶಬ್ದ ಮಾಲಿನ್ಯ ಹಾಗೂ ವಾಯು ಮಾಲಿನ್ಯದಿಂದ ವಿವಿಧ ರೋಗಗಳು ಹೆಚ್ಚಾಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಂದಿನ ಪೀಳಿಗೆಗೆ ಆರೋಗ್ಯಕರ ಪರಿಸರವನ್ನು ಉಳಿಸಿಕೊಡಬೇಕಾದರೆ ಪ್ರತಿಯೊಬ್ಬರೂ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜವಾಬ್ದಾರಿ ವಹಿಸಬೇಕು. ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಹೊಣೆಗಾರಿಕೆಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕರಾದ ಈರೇಗೌಡ, ಬಿ.ಆರ್.ಸಿ ಮುಖ್ಯಸ್ಥ ರಾಜು, ನಿರ್ದೇಶಕರಾದ ವೆಂಕಟೇಶ್, ವಿಶ್ವಪ್ರಿಯ, ಶ್ರೀನಿವಾಸ, ಕೆಂಚಯ್ಯ, ಸಂಜೀವಯ್ಯ, ಬಿ.ಕೆ. ರಮೇಶ್, ಲಕ್ಷ್ಮಮ್ಮ, ಚೆಲುವರಾಜು, ಬ್ಯಾಂಕ್ ವ್ಯವಸ್ಥಾಪಕ ಬಸವರಾಜು ಹಾಗೂ ಸಿಬ್ಬಂದಿಗಳಾದ ರವಿ, ಲಕ್ಷ್ಮಣ, ವರಲಕ್ಷ್ಮಿ, ಅನ್ನಪೂರ್ಣ ಉಪಸ್ಥಿತರಿದ್ದರು.

ಇದೇ ವೇಳೆ ಬಿ.ಆರ್.ಸಿ ಶಿಕ್ಷಕರಾದ ತೇಜಸ್ವಿನಿ, ಚಂದ್ರಕಲಾ, ಗಾಯತ್ರಿ, ಪೋಷಕರು ಹಾಗೂ ವಿಶೇಷ ಅಗತ್ಯವುಳ್ಳ ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಂಡರು.

# ಲಯನ್ ಮರಸಪ್ಪ ರವಿರಿಗೆ ಪ್ರತಿಷ್ಠಿತ 'ಪರಿಸರ ಪ್ರೇಮಿ' ಪ್ರಶಸ್ತಿ

ಕನಕಪುರ

ಪರಿಸರ ಸಂರಕ್ಷಣೆ ಮತ್ತು ಹಸಿರು ಅಭಿಯಾನದಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಕನಕಪುರದ ಲಯನ್ಸ್ ಕ್ಲಬ್‌ನ ಹಿರಿಯ ಸದಸ್ಯ ಲಯನ್ ಮರಸಪ್ಪ ರವಿ ಅವರಿಗೆ ಲಯನ್ಸ್ ಇಂಟರ್‌ನ್ಯಾಷನಲ್ ಜಿಲ್ಲೆ 317 ವತಿಯಿಂದ 2025–26ನೇ ಸಾಲಿನ ಪ್ರತಿಷ್ಠಿತ 'ಪರಿಸರ ಪ್ರೇಮಿ ಪ್ರಶಸ್ತಿ' ಪ್ರದಾನ ಮಾಡಲಾಗಿದೆ.

ಜಿಲ್ಲಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಗೌರವವನ್ನು ನೀಡಿ ಸನ್ಮಾನಿಸಲಾಯಿತು. ಕಳೆದ ಒಂದು ವರ್ಷದ ಅವಧಿಯಲ್ಲಿ ಕನಕಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಾವಿರಾರು ಸಸಿಗಳನ್ನು ನೆಡುವುದು ಹಾಗೂ ಉಚಿತವಾಗಿ ವಿತರಿಸುವ ಮೂಲಕ ಪರಿಸರ ಜಾಗೃತಿ ಮೂಡಿಸುವಲ್ಲಿ ಮರಸಪ್ಪ ರವಿ ಅವರು ಗಮನಾರ್ಹ ಸೇವೆ ಸಲ್ಲಿಸಿದ್ದಾರೆ.

ವಿಶೇಷವಾಗಿ ಕೆಂಕೇರಮ್ಮ ದೇವಸ್ಥಾನದ ಮೈದಾನ, ಎಳಗಳ್ಳಿ, ದೊಡ್ಡಲಹಳ್ಳಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಬೃಹತ್ ಮಟ್ಟದ ಸಸಿ ನೆಡುವ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಅರಿವು ಮೂಡಿಸುವ ಜೊತೆಗೆ ಹಸಿರು ಪರಿಸರ ನಿರ್ಮಾಣಕ್ಕೆ ಶ್ರಮಿಸುತ್ತಿರುವ ಅವರ ಕಾರ್ಯ ಶ್ಲಾಘನೀಯವಾಗಿದೆ.

ಪರಿಸರದ ಮೇಲಿನ ಅವರ ಅಪಾರ ಕಾಳಜಿ, ಹಸಿರು ಕ್ರಾಂತಿಯತ್ತದ ಬದ್ಧತೆ ಹಾಗೂ ಸಮಾಜಮುಖಿ ಸೇವೆಯನ್ನು ಗುರುತಿಸಿ ಲಯನ್ಸ್ ಇಂಟರ್‌ನ್ಯಾಷನಲ್ ಜಿಲ್ಲೆ 317ಂ ಈ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ.

ಮರಸಪ್ಪ ರವಿ ಅವರ ಈ ಸಾಧನೆ ಕನಕಪುರ ಲಯನ್ಸ್ ಕ್ಲಬ್‌ಗೆ ಹೆಮ್ಮೆ ತಂದಿದ್ದು, ಪರಿಸರ ಸಂರಕ್ಷಣೆಯ ಮಹತ್ವವನ್ನು ಇನ್ನಷ್ಟು ಜನರಿಗೆ ತಲುಪಿಸುವ ಮೂಲಕ ಹಸಿರು ಕರ್ನಾಟಕ ನಿರ್ಮಾಣಕ್ಕೆ ಪ್ರೇರಣೆಯಾಗಲಿ ಎಂದು ಕ್ಲಬ್ ಪದಾಧಿಕಾರಿಗಳು ಮತ್ತು ಸದಸ್ಯರು ಶುಭ ಹಾರೈಸಿದ್ದಾರೆ.

# ಲೋಕಮಾನ್ಯ ತಿಲಕ್ ಟರ್ಮಿನಸ್ ಎಕ್ಸ್‌ಪ್ರೆಸ್ ರೈಲಿಗೆ ಚಾಲನೆ

ಬೆಂಗಳೂರು

ಯಲಹಂಕ ರೈಲು ನಿಲ್ದಾಣದಲ್ಲಿ ರೈಲು ಸಂಖ್ಯೆ 11014/11013 ಕೊಯಮತ್ತೂರು–ಲೋಕಮಾನ್ಯ ತಿಲಕ್ ಟರ್ಮಿನಸ್ (ಮುಂಬೈ)–ಕೊಯಮತ್ತೂರು ಎಕ್ಸ್‌ಪ್ರೆಸ್ ರೈಲಿಗೆ ಹೊಸ ನಿಲುಗಡೆ ಸೌಲಭ್ಯಕ್ಕೆ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.



ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ಸಂಸದ ಡಾ.ಕೆ. ಸುಧಾಕರ್, ರಾಜ್ಯಸಭಾ ಸದಸ್ಯ ಲಹರ್ ಸಿಂಗ್ ಸಿರೋಯಾ ಹಾಗೂ ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ವಿ. ಸೋಮಣ್ಣ, ಯಲಹಂಕ ಪ್ರದೇಶದ ಪ್ರಯಾಣಿಕರ ಬಹುಕಾಲದ ಬೇಡಿಕೆ ಈಡೇರಿದ್ದು, ಹೊಸ ನಿಲುಗಡೆಯಿಂದ ವಿದ್ಯಾರ್ಥಿಗಳು, ಉದ್ಯೋಗಿಗಳು, ವ್ಯಾಪಾರಿಗಳು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು.

ಯಲಹಂಕ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಪ್ರದೇಶವಾಗಿದ್ದು, ಬೆಂಗಳೂರಿನ ಪ್ರಮುಖ ರೈಲು ನಿಲ್ದಾಣಗಳ ಮೇಲಿನ ಒತ್ತಡ ಕಡಿಮೆ ಮಾಡಲು ಇಲ್ಲಿ ಹೊಸ ಮೆಗಾ ರೈಲ್ವೆ ಟರ್ಮಿನಲ್ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು. ಜೊತೆಗೆ ಬೆಂಗಳೂರು ಕಂಟೋನ್ಮೆಂಟ್ ಮತ್ತು ಯಶವಂತಪುರ ರೈಲು ನಿಲ್ದಾಣಗಳನ್ನು ವಿಶ್ವದರ್ಜೆಯ ಗುಣಮಟ್ಟಕ್ಕೆ ಅಭಿವೃದ್ಧಿಪಡಿಸಲಾಗುತ್ತಿದೆ ಎಂದರು.



ಮುಂಬೈ ನಗರದ ಬಂಟರ ಭವನದಲ್ಲಿ ಭಾನುವಾರ ರಾತ್ರಿ ಅಂಧೇರಿ ಕರ್ನಾಟಕ ಸಂಘ ಹಾಗೂ ಜಾನಪದ ಸಂರಕ್ಷಣಾ ಪರಿಷತ್ ಬೆಂಗಳೂರು ವತಿಯಿಂದ ನಡೆದ ಹೊರನಾಡ ಕನ್ನಡ ಸಂಸ್ಕೃತಿ ಸಂಭ್ರಮ 2026 ರ ಕಾರ್ಯಕ್ರಮದಲ್ಲಿ ಜಿಲ್ಲೆಯ ಸುಗಟೂರು ಗ್ರಾಮದ ಅಂತರಾಷ್ಟ್ರೀಯ ಜಾನಪದ ಕಲಾವಿದ ಗೋ.ನಾ ಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ರಾಯಚೂರು ಆದಿಕವಿ ವಿಶ್ವವಿದ್ಯಾಲಯದ ಕುಲಪತಿ ಡಾ.ಶಿವಾನಂದ ಕೆಳಗಿನ ಮನೆ, ಬಂಟ್ಸ್ ಸಂಘದ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ, ಕೋಲಾರದ ಸಮಾಜ ಸೇವಕ ಹಾಗೂ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್, ಮುಖಂಡರಾದ ಶ್ರೀನಿವಾಸ ಉಡಪ, ಟಿ.ವಿ ಬಾಬು, ಆಂಜನೇಯ ಈಡಿಗ, ಮುಂತಾದವರು ಇದ್ದು ಸನ್ಮಾನಿಸಿದರು

ಗುಡಿಬಂಡೆ

ವಿದ್ಯಾರ್ಥಿ ಜೀವನವು ಪ್ರತಿಯೊಬ್ಬರ ಬದುಕಿನ ಅತ್ಯಂತ ಮಹತ್ವದ ಘಟ್ಟವಾಗಿದ್ದು, ಈ ಅವಧಿಯಲ್ಲಿ ಸಮಯವನ್ನು ಸದುಪಯೋಗಪಡಿಸಿಕೊಂಡು ಶಿಕ್ಷಣದ ಮೂಲಕ ಸಾಧನೆ ಮಾಡಬೇಕು ಎಂದು ಅಮೇರಿಕ ಮೂಲದ ಕಾರ್ಪೊರೇಟ್ ಸಂಸ್ಥೆ ನಾಸ್ಡಾಕ್‌ನ ಮುಖ್ಯಸ್ಥ ಭರತ್ ಪಟೇಲ್ ಕರೆ ನೀಡಿದರು.

ಪಟ್ಟಣದ ಪಿಎಂಶ್ರೀ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಾಸ್ಡಾಕ್ ಹಾಗೂ ರೈಟ್ ಟು ಲೀವ್ ಸಂಸ್ಥೆಗಳ ಸಹಯೋಗದಲ್ಲಿ ಕೈಗೊಳ್ಳಲಾದ ಶಾಲಾ ದುರಸ್ತಿ ಮತ್ತು ನವೀಕರಣ ಕಾಮಗಾರಿಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಓದುವ ಸಮಯವನ್ನು ಅನಗತ್ಯ ಚಟುವಟಿಕೆಗಳಲ್ಲಿ ವ್ಯರ್ಥ ಮಾಡದೇ ಸ್ಪಷ್ಟ ಗುರಿಯೊಂದಿಗೆ ಅಧ್ಯಯನ ನಡೆಸಬೇಕು. ಶಿಕ್ಷಣವೇ ಜೀವನದ ಭದ್ರ ಅಡಿಪಾಯವಾಗಿದ್ದು, ಇಂದಿನ ಪರಿಶ್ರಮವೇ ನಾಳಿನ ಯಶಸ್ಸಿಗೆ ದಾರಿ ತೋರಿಸುತ್ತದೆ. ಆದ್ದರಿಂದ ಸಮಯದ ಮಹತ್ವ ಅರಿತು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳು ತಮ್ಮ ಪೋಷಕರು, ಶಿಕ್ಷಕರು ಹಾಗೂ ಕುಟುಂಬದವರನ್ನು ಗೌರವಿಸಬೇಕು. ಉತ್ತಮ ಶಿಕ್ಷಣ ಪಡೆದು ಜೀವನದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ಅವರು ತಿಳಿಸಿದರು.

ರೈಟ್ ಟು ಲೀವ್ ಸಂಸ್ಥೆಯ ನಿರ್ದೇಶಕ ಟಿ.ವಿ. ಶ್ರೀಧರ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳೇ ದೇಶದ ಭವಿಷ್ಯವಾಗಿದ್ದು, ತಮ್ಮ ಮುಂದಿನ ಜೀವನಕ್ಕೆ ಭದ್ರ ಬುನಾದಿ ಹಾಕಿಕೊಳ್ಳಬೇಕು ಎಂದರು. ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ಸರ್ಕಾರಿ ಶಾಲೆಗಳ ಅಭಿವೃದ್ಧಿ ಮತ್ತು ಉನ್ನತೀಕರಣ ಕಾರ್ಯವನ್ನು ರೈಟ್ ಟು ಲೀವ್ ಸಂಸ್ಥೆ ನಿರಂತರವಾಗಿ ಕೈಗೊಳ್ಳುತ್ತಿದ್ದು, ಈ ಕಾರ್ಯ ಮುಂದುವರಿಯಲಿದೆ ಎಂದು ಹೇಳಿದರು.

ನಿವೃತ್ತ ಉಪನ್ಯಾಸಕ ಬಿ. ಅಮೀರ್ ಜಾನ್ ಮಾತನಾಡಿ, ಗಡಿಭಾಗದ ಗುಡಿಬಂಡೆ ಪ್ರದೇಶದ ಸರ್ಕಾರಿ ಶಾಲೆಗಳ ನವೀಕರಣಕ್ಕೆ ನಾಸ್ಡಾಕ್ ಹಾಗೂ ರೈಟ್ ಟು ಲೀವ್ ಸಂಸ್ಥೆಗಳು ಮುಂದಾಗಿರುವುದು ಶ್ಲಾಘನೀಯ. ಶಾಲಾ ಕೊಠಡಿಗಳ ನವೀಕರಣ, ಶೌಚಾಲಯಗಳ ಅಭಿವೃದ್ಧಿ ಹಾಗೂ ಆಧುನಿಕ ಸೌಲಭ್ಯಗಳ ಒದಗಿಕೆಯಿಂದ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ನಿರ್ಮಾಣವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ನಾಗಮಣಿ, ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣಕುಮಾರಿ, ಶಿಕ್ಷಕ ವಿ. ವೆಂಕಟೇಶ್ ಸೇರಿದಂತೆ ಹಲವು ಗಣ್ಯರು ಮಾತನಾಡಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ವಿಕಾಸ್, ನಾಸ್ಡಾಕ್ ಸಂಸ್ಥೆಯ ಪ್ರೀತಿ ತೊಪ್ಪಿಲ್, ಸುಮಿತ್ರ, ದಿನೇಶ್, ರೈಟ್ ಟು ಲೀವ್ ಸಂಸ್ಥೆಯ ಶಾಂಭವಿ, ಹರೀಶ್, ನರ್ಗೀಸ್, ಸುನೀಲ್, ಗಣೇಶ್, ಹುಸೇನ್, ಶಾಲೆಯ ಮುಖ್ಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಅಂತರ್ಜಾತಿ ವಿವಾಹ ಹಿನ್ನೆಲೆ ಹಲ್ಲೆ ಆರೋಪ; ನ್ಯಾಯಕ್ಕಾಗಿ ಆಗ್ರಹ

ತಿಪಟೂರು

ಅಂತರ್ಜಾತಿ ವಿವಾಹ ಮಾಡಿಕೊಂಡ ಕಾರಣದಿಂದ ಕಳೆದ ಹತ್ತು ವರ್ಷಗಳಿಂದ ಸಾಮಾಜಿಕ ಬಹಿಷ್ಕಾರ ಹಾಗೂ ಕಿರುಕುಳ ಅನುಭವಿಸುತ್ತಿರುವುದಾಗಿ ಆರೋಪಿಸಿರುವ ದಲಿತ ಮಹಿಳೆಯೊಬ್ಬರು, ಇತ್ತೀಚೆಗೆ ತಮ್ಮ ಮೇಲೆ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ ಎಂದು ದೂರಿದ್ದಾರೆ. ಗಾಯಗೊಂಡ ಮಹಿಳೆ ತಿಪಟೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಶಿಡ್ಲೇಹಳ್ಳಿ ಗ್ರಾಮದ ಎಸ್.ಎನ್. ವೀಣಾಶ್ರೀ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ತಾವು ಆದಿ ಕರ್ನಾಟಕ ಸಮುದಾಯಕ್ಕೆ ಸೇರಿದವರಾಗಿದ್ದು, ಸುಮಾರು ಹತ್ತು ವರ್ಷಗಳ ಹಿಂದೆ ಬೊಮ್ಮೇನಹಳ್ಳಿ ಗ್ರಾಮದ ಸುಬ್ರಮಣ್ಯ ಅವರನ್ನು ಪ್ರೀತಿಸಿ ವಿವಾಹವಾಗಿದ್ದಾಗಿ ತಿಳಿಸಿದ್ದಾರೆ. ವಿವಾಹದ ಬಳಿಕ ಜಾತಿ ಕಾರಣ ಮುಂದಿಟ್ಟು ಪತಿಯ ಊರಿನಿಂದ ಸಾಮಾಜಿಕ ಬಹಿಷ್ಕಾರ ಹೇರಲಾಗಿದೆ ಎಂದು ಆರೋಪಿಸಿದ್ದಾರೆ.

ಇತ್ತೀಚೆಗೆ ಕುಟುಂಬದೊಂದಿಗೆ ದೇವಸ್ಥಾನಕ್ಕೆ ತೆರಳುವ ಸಂದರ್ಭದಲ್ಲಿ ಪತಿಯ ಸಂಬಂಧಿಕರು ತಮ್ಮ



ಅತ್ತೆಯೊಂದಿಗೆ ವಾಗ್ವಾದ ನಡೆಸಿದ್ದು, ಬಳಿಕ ಪರಿಸ್ಥಿತಿ ವಿಕೋಪಕ್ಕೆ ತಿರುಗಿ ತಮ್ಮ ಮೇಲೆ ದೊಣ್ಣೆಗಳಿಂದ ಹಲ್ಲೆ ನಡೆಸಲಾಗಿದೆ ಎಂದು ವೀಣಾಶ್ರೀ ಆರೋಪಿಸಿದ್ದಾರೆ. ಘಟನೆಯಲ್ಲಿ ಗಾಯಗೊಂಡ ಅವರು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರೂ, ಮೂರು ದಿನ ಕಳೆದರೂ ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಆಸ್ಪತ್ರೆಯಲ್ಲಿದ್ದ ವೇಳೆ ದೂರು ಹಿಂಪಡೆಯುವಂತೆ ಬೆದರಿಕೆ ಹಾಕಲಾಗಿದೆ ಎಂಬ ಆರೋಪವನ್ನೂ ಮಾಡಿದ್ದಾರೆ. ತಮ್ಮ ಕುಟುಂಬಕ್ಕೆ ಪೊಲೀಸ್ ರಕ್ಷಣೆ ಒದಗಿಸಬೇಕು ಹಾಗೂ ಪ್ರಕರಣದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಡಿಎಸ್‌ಎಸ್ ಜಿಲ್ಲಾ ಸಂಘಟನಾ ಸಂಚಾಲಕ ಹರೀಶ್ ಗೌಡ, ವೀಣಾಶ್ರೀ ಕುಟುಂಬವು ಹಲವು ವರ್ಷಗಳಿಂದ ಸಾಮಾಜಿಕ ಬಹಿಷ್ಕಾರ ಮತ್ತು ಕಿರುಕುಳ ಎದುರಿಸುತ್ತಿದೆ ಎಂದು ಆರೋಪಿಸಿದರು. ಈ ಸಂಬಂಧ ಈ ಹಿಂದೆ ಹಲವು ಬಾರಿ ದೂರು ನೀಡಿದ್ದರೂ ಸೂಕ್ತ ಕ್ರಮ ಕೈಗೊಳ್ಳಲಾಗಿಲ್ಲ ಎಂದು ದೂರಿದರು.

ಪ್ರಕರಣವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಹಿರಿಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಸಂತ್ರಸ್ತ ಕುಟುಂಬಕ್ಕೆ ರಕ್ಷಣೆ ಹಾಗೂ ನ್ಯಾಯ ಒದಗಿಸಬೇಕು. ಅಲ್ಲದೆ ಆರೋಪಗಳ ಕುರಿತು ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಪ್ರಕರಣದ ಕುರಿತು ಪೊಲೀಸ್ ಇಲಾಖೆಯ ಅಧಿಕೃತ ಪ್ರತಿಕ್ರಿಯೆ ಇನ್ನಷ್ಟೇ ಲಭ್ಯವಾಗಬೇಕಿದೆ.

# ಸಾರಿಗೆ ಅದಾಲತ್ ಸಮಸ್ಯೆಗಳಿಗೆ ಸಕಾರಾತ್ಮಕ ಸ್ಪಂದನೆ

ಕೋಲಾರ

ಮಳೆಯ ನಡುವೆಯೂ ಹೆಚ್ಚಿನ ಸಾರ್ವಜನಿಕರು ಸಾರಿಗೆ ಅದಾಲತ್‌ನಲ್ಲಿ ಭಾಗವಹಿಸುವ ಮೂಲಕ ಸಮಸ್ಯೆಗಳನ್ನು ಮುಂದಿರಿಸಿದ್ದು ಎಲ್ಲ ಅರ್ಜಿಗಳಿಗೂ ಸಕಾರಾತ್ಮಕವಾಗಿ ಸ್ಪಂದನೆ ನೀಡಲಾಗುತ್ತದೆ ಎಂದು ಆರ್‌ಟಿಓ ಎಂ. ವೇಣುಗೋಪಾಲರೆಡ್ಡಿ ಹೇಳಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ನಡೆದ ಸಾರಿಗೆ ಅದಾಲತ್‌ನಲ್ಲಿ ಅರ್ಜಿ ಮತ್ತು ದೂರುಗಳನ್ನು ಸ್ವೀಕರಿಸಿದ ನಂತರ ಸಭೆಯಲ್ಲಿ ಮಾತನಾಡಿ, ಸಾರ್ವಜನಿಕರ ಎಲ್ಲ ಅಹವಾಲುಗಳನ್ನು ಕೂಡಲೇ ಪರಿಶೀಲಿಸಿ ಕಾಲಮಿತಿಯಲ್ಲಿ ಉತ್ತರ ನೀಡುವ ಜತೆಗೆ ಸಮಸ್ಯೆಗಳಿಗೆ ಪರಿಹಾರ ರೂಪಿಸಲಾಗುವುದೆಂದರು.

ಪ್ರತಿದಿನ ಮಧ್ಯಾಹ್ನ 3 ಗಂಟೆಯಿಂದ ಸಂಜೆ 5 ರವರೆಗೆ ಸಾರ್ವಜನಿಕರಿಗೆ ಅಹವಾಲುಗಳನ್ನು ಹೇಳಿಕೊಳ್ಳಲು ಅಧಿಕಾರಿಗಳು ಲಭ್ಯವಿದ್ದು ಇದೀಗ ಸಭೆಗೆ ಆಗಮಿಸಲು



ಸಾಧ್ಯವಾಗದವರು ಮತ್ತೊಂದು ದಿನ ಆಗಮಿಸಿ ಸಮಸ್ಯೆಗಳಿಗೆ ಪರಿಹಾರ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಸಾರಿಗೆ ಇಲಾಖೆಯಲ್ಲಿ 1991–92 ರಿಂದ 31.03.2022ರವರೆಗೆ ದಾಖಲಾದ ಇಲಾಖಾ ಪ್ರಕರಣಗಳಿಗೆ ದಂಡದ ಮೊತ್ತದಲ್ಲಿ ಶೇ.50 ರಿಯಾಯಿತಿಯನ್ನು ಸರ್ಕಾರ ಪ್ರಕಟಿಸಿದೆ. 21.06.26 ರಿಂದ 10.07.26ರವರೆಗೆ ಕಾಲಾವಕಾಶ ನೀಡಿ ಪ್ರಕರಣವನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ವಾಹನ ಮಾಲೀಕರು ನೇರವಾಗಿ ಆರ್‌ಟಿಓ ಕಚೇರಿಗೆ ಹಾಜರಾಗಿ ದಂಡ ಪಾವತಿಸಬೇಕಿದ್ದು, ಆನ್‌ಲೈನ್ ಡಿಜಿಟಲ್ ಪಾವತಿಗೆ ಅವಕಾಶವಿಲ್ಲ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ವೇಣುಗೋಪಾಲರೆಡ್ಡಿ ಸ್ಪಷ್ಟಪಡಿಸಿದರು.

ದ್ವಿ ಚಕ್ರವಾಹನದ ಆರ್‌ಸಿ ಕಾರ್ಡ್ ಕಳೆದಿರುವುದು, ವಾಹನ ಕಳವಿನ ಹಿನ್ನೆಲೆಯಲ್ಲಿ ಆರ್‌ಸಿ ಕಾರ್ಡ್ ಬ್ಲಾಕ್ ಮಾಡಿಸಲು ಮನವಿ ಮುಂತಾದ ಸಾಮಾನ್ಯ ಅರ್ಜಿಗಳು ಸಾರಿಗೆ ಅದಾಲತ್‌ನಲ್ಲಿ ಸಲ್ಲಿಕೆಯಾದವು. ಕಚೇರಿ ಅಧೀಕ್ಷಕರಾದ ಗುರುಪ್ರಸಾದ್, ಪುಷ್ಪಲತಾ ಇದ್ದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಾಸನ ಜಿಲ್ಲಾ ರೈತ ಸಂಘಟನೆಗಳ ಪದಾಧಿಕಾರಿಗಳು ಹಾಗೂ ರೈತ ಪ್ರತಿನಿಧಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಭೆ ನಡೆಸಿದರು. ಈ ಸಭೆಯಲ್ಲಿ, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಪಟೇಲ್, ಶಾಸಕರಾದ ಶಿವಲಿಂಗೇಗೌಡ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಗೋಪಾಲಸ್ವಾಮಿ, ರೈತರು ಭಾಗಿವಹಿಸಿದರು.

# ಹಣ ದುರುಪಯೋಗ: ಕಠಿಣ ಕ್ರಮಕ್ಕೆ ಆಗ್ರಹ

ಬೆಂಗಳೂರು/ಅಯೋಧ್ಯೆ

ಅಯೋಧ್ಯೆಯ ಶ್ರೀರಾಮ ಮಂದಿರದ ಹುಂಡಿಯ ಹಣ ದುರುಪಯೋಗಗೊಂಡಿರುವ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹಿಂದೂ ಜನಜಾಗೃತಿ ಸಮಿತಿ ಆಗ್ರಹಿಸಿದೆ.

ಈ ಕುರಿತು ಪ್ರಕಟಣೆ ನೀಡಿರುವ ಸಮಿತಿಯ ರಾಷ್ಟ್ರೀಯ ವಕ್ತಾರ ಶ್ರೀ ರಮೇಶ ಶಿಂದೆ, ಅಯೋಧ್ಯೆಯ ಶ್ರೀರಾಮ ಮಂದಿರವು ಕೇವಲ ಧಾರ್ಮಿಕ ಕೇಂದ್ರವಲ್ಲ; ಜಗತ್ತಿನಾದ್ಯಂತ ಇರುವ ಕೋಟ್ಯಂತರ ಹಿಂದೂಗಳ ಭಕ್ತಿ, ತ್ಯಾಗ ಮತ್ತು ದೀರ್ಘಕಾಲದ ಹೋರಾಟದ ಸಂಕೇತವಾಗಿದೆ. ಇಂತಹ ಪವಿತ್ರ ಕ್ಷೇತ್ರದ ಹುಂಡಿಯಲ್ಲಿನ ಕಾಣಿಕೆಯನ್ನು ದುರುಪಯೋಗಪಡಿಸಿಕೊಳ್ಳುವುದು ಅತ್ಯಂತ ಖಂಡನೀಯ ಕೃತ್ಯ ಎಂದು ಹೇಳಿದ್ದಾರೆ.



ಪ್ರಕರಣದ ಕುರಿತು ಸರ್ಕಾರ ತ್ವರಿತ ತನಿಖೆ ನಡೆಸಿ, ಸತ್ಯಾಂಶವನ್ನು ಸಾರ್ವಜನಿಕರ ಮುಂದೆ ತರಬೇಕು. ಆರೋಪ ಸಾಬೀತಾದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನುಬದ್ಧವಾಗಿ ಅತ್ಯಂತ ಕಠಿಣ ಕ್ರಮ ಜರುಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಮಂದಿರಗಳ ಆಡಳಿತದಲ್ಲಿ ಭಕ್ತರ ಪಾತ್ರ ಹೆಚ್ಚಾಗಬೇಕೆಂಬ ತಮ್ಮ ಹಿಂದಿನ ನಿಲುವನ್ನು ಪುನರುಚ್ಚರಿಸಿದ ಸಮಿತಿಯು, ದೇವರ ಸೇವೆಯನ್ನು ಧರ್ಮಬದ್ಧ ಕರ್ತವ್ಯವೆಂದು ಪರಿಗಣಿಸುವ ಭಕ್ತರೇ ದೇವಸ್ಥಾನಗಳ ನಿರ್ವಹಣೆಯಲ್ಲಿ ಇರಬೇಕು ಎಂದು ಅಭಿಪ್ರಾಯಪಟ್ಟಿದೆ. ನಿಜವಾದ ಭಕ್ತರು ದೇವರ ನಿಧಿಯ ದುರುಪಯೋಗಕ್ಕೆ ಅವಕಾಶ ನೀಡುವುದಿಲ್ಲ ಎಂಬ ವಿಶ್ವಾಸವನ್ನು ಸಮಿತಿ ವ್ಯಕ್ತಪಡಿಸಿದೆ.

ಇದೇ ವೇಳೆ, ದೇವಸ್ಥಾನಗಳ ಆಡಳಿತದಲ್ಲಿ ಸರ್ಕಾರದ ಹಸ್ತಕ್ಷೇಪದ ಕುರಿತು ಆತಂಕ ವ್ಯಕ್ತಪಡಿಸಿರುವ ಸಮಿತಿಯು, ಮಂದಿರಗಳ ಸರಕಾರೀಕರಣವು ಸಮಸ್ಯೆಗಳಿಗೆ ಪರಿಹಾರವಾಗುವುದಿಲ್ಲ ಎಂದು ಹೇಳಿದೆ. ದೇಶದ ಹಲವು ಭಾಗಗಳಲ್ಲಿ ದೇವಸ್ಥಾನಗಳ ನಿಧಿ ನಿರ್ವಹಣೆ ಕುರಿತಾಗಿ ವಿವಾದಗಳು ಉದ್ಭವಿಸಿರುವುದನ್ನು ಉಲ್ಲೇಖಿಸಿರುವ ಸಮಿತಿ, ದೇವಸ್ಥಾನಗಳ ಆಡಳಿತವನ್ನು ಪಾರದರ್ಶಕ ಹಾಗೂ ಜವಾಬ್ದಾರಿಯುತವಾಗಿ ನಿರ್ವಹಿಸುವ ಭಕ್ತರ ಕೈಗೆ ವಹಿಸಬೇಕು ಎಂದು ಆಗ್ರಹಿಸಿದೆ.

ಶ್ರೀರಾಮ ಮಂದಿರಕ್ಕೆ ಸಂಬಂಧಿಸಿದ ಯಾವುದೇ ಹಣಕಾಸು ಅವ್ಯವಹಾರ ಆರೋಪಗಳ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಯಬೇಕು ಹಾಗೂ ಧಾರ್ಮಿಕ ಸಂಸ್ಥೆಗಳ ಮೇಲಿನ ಭಕ್ತರ ವಿಶ್ವಾಸವನ್ನು ಕಾಪಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹಿಂದೂ ಜನಜಾಗೃತಿ ಸಮಿತಿ ತಿಳಿಸಿದೆ.

# ಎ.ಜಿ. ಶ್ರೀನಿವಾಸ್ ಅಧಿಕಾರ ಸ್ವೀಕಾರ

ಹುಬ್ಬಳ್ಳಿ

1989ರ ಬ್ಯಾಚ್‌ನ ಇಂಡಿಯನ್ ರೈಲ್ವೆ ಸರ್ವಿಸ್ ಆಫ್ ಇಂಜಿನಿಯರ್ಸ್ ಅಧಿಕಾರಿಯಾದ ಎ.ಜಿ. ಶ್ರೀನಿವಾಸ್ ಅವರು ನೈಋತ್ಯ ರೈಲ್ವೆಯ ಹೆಚ್ಚುವರಿ ಪ್ರಧಾನ ವ್ಯವಸ್ಥಾಪಕರಾಗಿ (ಎಜಿಎಂ) ಅಧಿಕಾರ ವಹಿಸಿಕೊಂಡಿದ್ದಾರೆ.



ರೈಲ್ವೆ ಸೇವೆಯಲ್ಲಿ ಮೂರು ದಶಕಗಳಿಗೂ ಹೆಚ್ಚು ಅನುಭವ ಹೊಂದಿರುವ ಶ್ರೀನಿವಾಸ್ ಅವರು 1991ರ ಜನವರಿ 7ರಂದು ಪುಣೆಯ ಭಾರತೀಯ ರೈಲ್ವೆ ಸಿವಿಲ್ ಇಂಜಿನಿಯರಿಂಗ್ ಸಂಸ್ಥೆಯಲ್ಲಿ ಪ್ರೊಬೇಷನರಿ ತರಬೇತುದಾರರಾಗಿ ಸೇವೆ ಆರಂಭಿಸಿದ್ದರು. ತರಬೇತಿ ಪೂರ್ಣಗೊಂಡ ಬಳಿಕ 1993ರ ಜನವರಿ 8ರಂದು ದಕ್ಷಿಣ ಮಧ್ಯ ರೈಲ್ವೆಯಲ್ಲಿ ಸಹಾಯಕ ಇಂಜಿನಿಯರ್ ಆಗಿ ನೇಮಕಗೊಂಡರು.

ತಮ್ಮ ವೃತ್ತಿಜೀವನದಲ್ಲಿ ದಕ್ಷಿಣ ಮಧ್ಯ ರೈಲ್ವೆ, ನೈಋತ್ಯ ರೈಲ್ವೆ ಹಾಗೂ ದಕ್ಷಿಣ ರೈಲ್ವೆ ವಲಯಗಳಲ್ಲಿ ವಿವಿಧ ಜವಾಬ್ದಾರಿಯುತ ಹುದ್ದೆಗಳನ್ನು ನಿರ್ವಹಿಸಿರುವ ಅವರು, ಕಾರ್ಯಾಚರಣೆ ಮತ್ತು ಆಡಳಿತಾತ್ಮಕ ಕ್ಷೇತ್ರಗಳಲ್ಲಿ ಅಪಾರ ಅನುಭವ ಗಳಿಸಿದ್ದಾರೆ.

2000ರಲ್ಲಿ ಜೂನಿಯರ್ ಅಡ್ಮಿನಿಸ್ಟ್ರೇಟಿವ್ ಗ್ರೇಡ್‌ಗೆ ಬಡ್ತಿ ಪಡೆದ ಅವರು ಹುಬ್ಬಳ್ಳಿ ಮತ್ತು ತಿರುಪತಿಯಲ್ಲಿ ಸೇವೆ ಸಲ್ಲಿಸಿದರು.

# 'ಜೈವಿಕ ರಸಗೊಬ್ಬರಕ್ಕೆ ಒತ್ತು ನೀಡಿ'

ಕೋಲಾರ

ಕೃಷಿಯಲ್ಲಿ ರಸಗೊಬ್ಬರಗಳ ಅತಿಯಾದ ಬಳಕೆ ಮಣ್ಣಿನ ಫಲವತ್ತತೆ ಮತ್ತು ಪರಿಸರದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಆದ್ದರಿಂದ ರೈತರು ರಾಸಾಯನಿಕ ರಸಗೊಬ್ಬರದ ಮೇಲಿನ ಅವಲಂಬನೆಯನ್ನು ತಕ್ಷಣದಿಂದಲೇ ಕಡಿಮೆ ಮಾಡಿ, ಜೈವಿಕ ಗೊಬ್ಬರಗಳ ಬಳಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ನೀರಿನ ಲಭ್ಯತೆ, ಅಂತರ್ಜಲ ಮಟ್ಟ ಮತ್ತು ಮುಂಬರುವ ದಿನಗಳ ನೀರಿನ ಬೇಡಿಕೆಯನ್ನು ಪರಿಗಣಿಸಿ ರೂಪಿಸಲಾದ ಕ್ರಿಯಾ ಯೋಜನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಅಧಿಕಾರಿಗಳಿಗೆ ಸೂಚಿಸಿದರು. 2025ರ ಜನವರಿಯಿಂದ ನವೆಂಬರ್‌ವರೆಗೆ



ಜಿಲ್ಲೆಯಲ್ಲಿ 735.1 ಮಿ.ಮೀ. ವಾಡಿಕೆ ಮಳೆಯಾಗಬೇಕಾಗಿದ್ದು, 927.0 ಮಿ.ಮೀ. ನಷ್ಟು ಹೆಚ್ಚುವರಿ ಮಳೆಯಾಗಿದೆ (ಶೇ.26ರಷ್ಟು ಹೆಚ್ಚಳ). ಪ್ರಸ್ತುತ 2026ರ ಜೂನ್ ತಿಂಗಳಲ್ಲಿ ವಾಡಿಕೆಗಿಂತ ಶೇ. 3ರಷ್ಟು ಹೆಚ್ಚು ಮಳೆ ದಾಖಲಾಗಿದೆ.

ಮುಂಬರುವ ದಿನಗಳಲ್ಲಿ ನೀರಿನ ಕೊರತೆ ಉಂಟಾಗಬಹುದಾದ 130 ಗ್ರಾಮೀಣ ಗ್ರಾಮಗಳು ಮತ್ತು 49 ನಗರ ವಾರ್ಡ್‌ಗಳನ್ನು ಗುರುತಿಸಲಾಗಿದ್ದು, ಇವುಗಳಿಗಾಗಿ 'ಮೈಕ್ರೋ ಲೆವೆಲ್' ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿಕೊಳ್ಳಬೇಕು. ಅಗತ್ಯವಿದ್ದಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಆಧಾರದಲ್ಲಿ ಪಡೆಯಲು ಮತ್ತು ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆ ಚುರುಕುಗೊಳಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಸುಮಾರು 29 ವಾರಗಳಿಗೆ ಸಾಕಾಗುವಷ್ಟು 3,09,165 ಟನ್‌ಗಳಷ್ಟು ಮೇವು ದಾಸ್ತಾನು ಇದೆ. ಜಾನುವಾರುಗಳಿಗೆ ನೀರಿನ ತೊಟ್ಟಿಗಳ ಮೂಲಕ ಕುಡಿಯುವ ನೀರಿನ ವ್ಯವಸ್ಥೆಯನ್ನು ಪಂಚಾಯತ್ ಮಟ್ಟದಲ್ಲಿ ಕಲ್ಪಿಸಲಾಗುತ್ತಿದೆ. ಕೆ.ಸಿ.ವ್ಯಾಲಿ ಮತ್ತು ಯರಗೋಳ ಯೋಜನೆಯಡಿ ಒಟ್ಟು 132 ಕೆರೆಗಳಿಗೆ ನೀರು ಹರಿಸಲಾಗುತ್ತಿದ್ದು, ಸಣ್ಣ ನೀರಾವರಿ, ಜಿಲ್ಲಾ ಪಂಚಾಯತ್ ಹಾಗೂ ಕಂದಾಯ ಇಲಾಖೆಯ ವ್ಯಾಪ್ತಿಯ ಕೆರೆಗಳಲ್ಲಿನ ನೀರಿನ ಮಟ್ಟವನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಬೇಕು ಎಂದರು.

ಕುಡಿಯುವ ನೀರಿನ ಅಸಮರ್ಪಕ ಹಂಚಿಕೆಯನ್ನು ಸರಿಪಡಿಸಲು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ 'ನೀರಿನ ಅದಾಲತ್' ಸಭೆಗಳನ್ನು ಆಯೋಜಿಸಲಾಗುತ್ತಿದೆ. ಅಲ್ಲದೆ, ನೀರಿನ ಬಳಕೆ ಮತ್ತು ಲಭ್ಯತೆಯನ್ನು ಅಳೆಯಲು 195 ನಗರ ವಾರ್ಡ್‌ಗಳು ಹಾಗೂ 1531 ಗ್ರಾಮಗಳಲ್ಲಿ 'ನೀರಿನ ಆಡಿಟ್' ನಡೆಸಲಾಗಿದೆ.

ಜಿಲ್ಲಾಧಿಕಾರಿಗಳು ಮತ್ತು ತಹಸೀಲ್ದಾರ್‌ಗಳ ಪಿ.ಡಿ ಖಾತೆಯಲ್ಲಿ ಖಆಖಈ ಮತ್ತು ಖಆಒಈ ಅಡಿಯಲ್ಲಿ ಒಟ್ಟು ರೂ. 1236.44 ಲಕ್ಷಗಳ ಅನುದಾನ ಲಭ್ಯವಿದ್ದು, ಕುಡಿಯುವ ನೀರು ಮತ್ತು ವಿಪತ್ತು ನಿರ್ವಹಣೆಯ ತುರ್ತು ಕೆಲಸಗಳಿಗೆ ಬಳಸಿಕೊಳ್ಳಲು ಸೂಚಿಸಲಾಗಿದೆ. ನೀರಿನ ನಿರ್ವಹಣೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಮತ್ತು ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಎಸ್.ಎಂ. ಮಂಗಳ, ಅಪರ ಪೊಲೀಸ್ ವರಿಷ್ಠಾಧಿಕಾರಿ ಹೆಚ್.ಸಿ. ಜಗದೀಶ್, ಕೃಷಿ ಉಪನಿರ್ದೇಶಕಿ ಮಂಜುಳ, ಎಲ್ಲಾ ತಹಸೀಲ್ದಾರ್‌ಗಳು, ಎಲ್ಲಾ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಭೂ ವಿಜ್ಞಾನಿ ತಿಪ್ಪೆಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy